ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

45

ಜೂನ್ 27 ಗುರುವಾರ 2024

₹4

ಸಂಪುಟ: 45 | ಸಂಚಿಕೆ: 72 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23


ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com

ಜಾಹೀರಾತು: ad@mysurumithra.com, *website: www.mysurumithra.com*

ಜೂ.29, 'ಉರಗತರಂಗ'-ಕಲಿಸಿ, ತಿಳಿಸಿ, ಉಳಿಸಿ ಕೃತಿ ಬಿಡುಗಡೆ ಸಮಾರಂಭ



ಮೈಸೂರು,ಜೂ.26-ಅಡವಿ ಅಲರ್ಟ್ ಫೌಂಡೇಷನ್ ವತಿಯಿಂದ ಫೌಂಡೇಷನ್ ಸಂಸ್ಥಾಪಕ ಪವನ್ ಜೋಶಿ ಬರೆದಿರುವ ಹಾವುಗಳ ಕುರಿತು ಆಸಕ್ತಿದಾಯಕ ವಿಷಯಗಳನ್ನು ಒಳಗೊಂಡ 'ಉರಗ ತರಂಗ'-ಕಲಿಸಿ, ತಿಳಿಸಿ, ಉಳಿಸಿ ಕೃತಿ ಬಿಡುಗಡೆ ಸಮಾರಂಭವನ್ನು ಜೂ.29 ರಂದು ಸಂಜೆ 4 ಗಂಟೆಗೆ ಮೈಸೂರಿನ ಕರ್ನಾಟಕ ಕಲಾಮಂದಿರದಲ್ಲಿ ಏರ್ಪಡಿಸಲಾಗಿದೆ. ಅಲ್ಲದೆ, ಈ ಪುಸ್ತಕವನ್ನು ಮೈಸೂರಿನ ಸ್ನೇಕ್ ಮ್ಯಾನ್-ಸ್ನೇಕ್ ಶ್ಯಾಮ್ ಅವರಿಗೆ ಗೌರವಪೂರ್ವಕವಾಗಿ ಸಮರ್ಪಿಸಲಾಗುವುದು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಅರಣ್ಯ ಸಚಿವ ಈಶ್ವರ್ ಖಂಡ್ರೆ, ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸಾಗರ್ ಈಶ್ವರ್ ಖಂಡ್ರೆ, ಚಲನಚಿತ್ರ ನಿರ್ಮಾಪಕ ಜೆ.ಎಸ್. ಅವೋಘ್ ವರ್ಷ, ಸ್ನೇಕ್ಸ್ ಆಫ್ ಇಂಡಿಯಾ ಪುಸ್ತಕದ ಸಹ ಲೇಖಕ, ಸೀನಿಯರ್ ಹರ್ಪಿಟಾಲಜಿಸ್ಟ್ ಅಶೋಕ್ ಕ್ಯಾಪ್ಟನ್ ಭಾಗವಹಿಸಲಿದ್ದಾರೆ.

ಗೌರವ ಅತಿಥಿಗಳಾಗಿ ಐಎಫ್ಎಸ್ ಪ್ರಿನ್ಸಿಪಲ್ ಚೀಫ್ ಕನ್ಸರ್ವೇಟರ್ ಆಫ್ ಫಾರೆಸ್ಟ್ ವೈಲ್ಡ್ ಲೈಫ್ ಸುಭಾಷ್ ಕೆ. ಮಾಳಖೇಡೆ, ಮೈಸೂರು ಸಾಹಿತ್ಯ ಸಂಭ್ರಮ ಸಂಸ್ಥಾಪಕರು ಮತ್ತು ನಿರ್ದೇಶಕರಾದ ಶ್ರೀಮತಿ ಶುಭಾ ಸಂಜಯ್ ಅರಸ್, ಐಎಫ್ಎಸ್ ಡಿಸಿಎಫ್ ಬಂಡೀಪುರ (ಹುಲಿ ಮೀಸಲು) ಪ್ರಭಾಕರನ್, ಕನ್ಸರ್ವೇಷನ್ ಬಯೋಲಜಿಸ್ಟ್ ಸಂಜಯ್ ಗುಬ್ಬಿ, ಹಾವು ಕಡಿತದ ತಜ್ಞರು ಮತ್ತು ಅರಿವಳಿಕೆ ತಜ್ಞರಾದ ಡಾ.ನಾಗರಾಜ್, ಶಾಸಕರಾದ ಕೆ. ಹರೀಶ್‌ಗೌಡ, ಟಿ.ಎಸ್.ಶ್ರೀವತ್ಸ, ತನ್ವೀರ್ ಸೇಠ್, ಜಿ.ಟಿ.ದೇವೇಗೌಡ ಮತ್ತು ಮಾಜಿ ಸಂಸದ ಪ್ರತಾಪ್ ಸಿಂಹ ಉಪಸ್ಥಿತರಿರುವರು.

ವಿಟಿಯು 25ನೇ ರಾಜ್ಯಮಟ್ಟದ ಅಂತರ ಕಾಲೇಜು ಅಥ್ಲೆಟಿಕ್ ಕ್ರೀಡಾಕೂಟ ಆರಂಭ

ಅರ್ಜುನ ಪ್ರಶಸ್ತಿ ಪುರಸ್ಕೃತ ಅಶ್ವಿನಿ ನಾಚಪ್ಪ ಚಾಲನೆ

ಮೈಸೂರು, ಜೂ.26(ಜಿಎ)-ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ (ವಿಟಿಯು) ಮೈಸೂರು ಪ್ರಾದೇಶಿಕ ಕೇಂದ್ರದ ವತಿಯಿಂದ ಮೈಸೂರಿನ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಆಯೋಜಿಸಿರುವ 25ನೇ ರಾಜ್ಯಮಟ್ಟದ ಅಂತರ ಕಾಲೇಜು ಅಥ್ಲೆಟಿಕ್ ಕ್ರೀಡಾಕೂಟಕ್ಕೆ ಅಂತಾರಾಷ್ಟ್ರೀಯ ಮಾಜಿ ಅಥ್ಲೀಟ್ ಮತ್ತು ಅರ್ಜುನ ಪ್ರಶಸ್ತಿ ವಿಜೇತರಾದ ಅಶ್ವಿನಿ ನಾಚಪ್ಪ ಚಾಲನೆ ನೀಡಿದರು.

ತೆರೆದ ವಾಹನದಲ್ಲಿ ಅಶ್ವಿನಿ ನಾಚಪ್ಪ ಮತ್ತು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಎಸ್. ವಿದ್ಯಾಶಂಕರ್ ಅವರನ್ನು ವಿದ್ಯಾರ್ಥಿಗಳು ಬ್ಯಾಂಡ್ ಸೆಟ್ ಮತ್ತು ಪಥ ಸಂಚಲನದ ಮೂಲಕ ಚಾಮುಂಡಿವಿಹಾರ ಕ್ರೀಡಾಂಗಣಕ್ಕೆ ಕರೆ ತಂದರು. ನಂತರ ಅಶ್ವಿನಿ ನಾಚಪ್ಪ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕ್ರೀಡಾಕೂಟದ ಬಾವುಟ ಹಾರಿಸಿ, ಬಲೂನ್‌ಗಳನ್ನು ಹಾರಿಬಿಡುವ ಮೂಲಕ ನಾಲ್ಕು ದಿನಗಳ ಕ್ರೀಡಾಕೂಟವನ್ನು ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, 128 ಕಾಲೇಜುಗಳ ವಿದ್ಯಾರ್ಥಿಗಳು ಕ್ರೀಡಾಕೂಟದಲ್ಲಿ ಭಾಗವಹಿಸುತ್ತಿರುವುದು ಸಂತಸದ ವಿಚಾರವಾಗಿದ್ದು, ಮತ್ತೊಂದೆಡೆ ವಿಟಿಯು ಈ ಮಟ್ಟದಲ್ಲಿ ಕ್ರೀಡಾಕೂಟ ಆಯೋಜಿಸಿರುವುದು ಒಂದು ದಾಖಲೆಯೇ ಸರಿ. ಭಾರತದಲ್ಲಿ ಈಗ ಕ್ರೀಡೆಗಳ ಕ್ರಾಂತಿಯಾಗುತ್ತಿದ್ದು, ಖೇಲೋ ಇಂಡಿಯಾದಂತಹ ಕೂಟಗಳಿಂದ ಉತ್ತಮ ಪ್ರತಿಭೆಗಳು ಹೊರಹೊಮ್ಮುತ್ತಿವೆ ಎಂದರು.

ಕ್ರೀಡಾಪಟುಗಳು ಜೀವನದಲ್ಲಿ ಸ್ನೇಹ, ಸಮಗ್ರತೆ ಮತ್ತು ನಿಮ್ಮ ತರಬೇತುದಾರರು, ತಂದೆ-ತಾಯಿಯನ್ನು ಗೌರವಿಸಿ. ಅದು ನಿಮ್ಮನ್ನು ಉತ್ತುಂಗಕ್ಕೆ ಕರೆದುಕೊಂಡು ಹೋಗುತ್ತದೆ. ಹಾಗೇ ಶಿಕ್ಷಣ ಮತ್ತು ಕ್ರೀಡೆಯಲ್ಲಿ ನಿಮ್ಮ ಗುರಿಯ ಬಗ್ಗೆ ಗಮನಹರಿಸಿ ಎಂದು ಎಲ್ಲಾ ಕ್ರೀಡಾಪಟುಗಳಿಗೆ ಶುಭ ಹಾರೈಸಿದರು.

ನಾಲ್ಕು ದಿನಗಳ ಕ್ರೀಡಾಕೂಟದಲ್ಲಿ ರಾಜ್ಯದ ಎಲ್ಲಾ ಭಾಗಗಳ ತಾಂತ್ರಿಕ ವಿದ್ಯಾಲಯಗಳಿಂದ ಸುಮಾರು 1500ರಿಂದ 2000 ಕ್ರೀಡಾಪಟುಗಳು ಭಾಗವಹಿಸುತ್ತಿದ್ದು, 23 ವಿವಿಧ ಪುರುಷ ಮತ್ತು ಮಹಿಳಾ ಅಥ್ಲೆಟಿಕ್‌ಗಳು ಸ್ಪರ್ಧಿಸಲಿದ್ದಾರೆ.



ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ(ವಿಟಿಯು) ಮೈಸೂರು ಪ್ರಾದೇಶಿಕ ಕೇಂದ್ರದ ವತಿಯಿಂದ ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಆಯೋಜಿಸಿರುವ 25ನೇ ರಾಜ್ಯ ಮಟ್ಟದ ಅಂತರ ಕಾಲೇಜು ಅಥ್ಲೆಟಿಕ್ ಕ್ರೀಡಾಕೂಟಕ್ಕೆ ಅಂತಾರಾಷ್ಟ್ರೀಯ ಮಾಜಿ ಅಥ್ಲೀಟ್ ಮತ್ತು ಅರ್ಜುನ ಪ್ರಶಸ್ತಿ ವಿಜೇತರಾದ ಅಶ್ವಿನಿ ನಾಚಪ್ಪ ಚಾಲನೆ ನೀಡಿದರು.

128 ಕಾಲೇಜುಗಳ ಸಾವಿರಾರು ಕ್ರೀಡಾಪಟುಗಳು ಭಾಗಿ

ಮೊದಲನೇ ಬಾರಿಗೆ ಈ ಕ್ರೀಡಾಕೂಟದಲ್ಲಿ ಸ್ಪರ್ಧೆಗಳ ಫಲಿತಾಂಶಗಳನ್ನು ಪೋಟೋ ಫಿನಿಶ್ ತಂತ್ರಜ್ಞಾನ ಬಳಸಿ ನಿಖರವಾಗಿ ನೀಡುವ ವ್ಯವಸ್ಥೆ ಮಾಡಲಾಗಿದೆ. ಸರಿ ಸುಮಾರು 200 ಕ್ರೀಡಾಧಿಕಾರಿಗಳು ತೀರ್ಪುಗಾರರಾಗಿ ಭಾಗವಹಿಸಲಿದ್ದಾರೆ. ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನಗಳ ವಿಜೇತರಿಗೆ ಕ್ರಮವಾಗಿ 25, 20 ಮತ್ತು 15 ಗ್ರಾಂ ತೂಕದ ಶುದ್ಧ ಬೆಳ್ಳಿ ಪದಕಗಳನ್ನು ನೀಡಲಿದ್ದಾರೆ.

ಕ್ರೀಡಾಕೂಟದಲ್ಲಿ ವಿಟಿಯು ಪ್ರಾದೇಶಿಕ ನಿರ್ದೇಶಕ ಡಾ.ಟಿ.ಪಿ.ರೇಣುಕಾ ಮೂರ್ತಿ, ವಿಟಿಯು ಆಯೋಜನ ಕಾರ್ಯದರ್ಶಿ ಪ್ರಸನ್ನ ಕುಮಾರ್, ರಘುನಾಥ್, ವಿಟಿಯು ದೈಹಿಕ ಶಿಕ್ಷಣ ನಿರ್ದೇಶಕ ಡಾ.ಪಿ.ವಿ. ಕಡಗಡ್ಕಾಯಿ, ಪರೀಕ್ಷಾ ಕುಲಸಚಿವ ಪ್ರೊ. ಟಿ.ಎನ್.ಶ್ರೀನಿವಾಸನ್, ಕಾರ್ಯಕಾರಿಣಿ ಮಂಡಳಿ ಸದಸ್ಯರಾದ ಡಾ.ಕೃಷ್ಣೇಗೌಡ, ಡಾ.ರಾಕೇಶ್, ಡಾ.ಗೋವಿಂದೇಗೌಡ, ಡಾ.ಎಂ.ಪ್ರಸನ್ನಕುಮಾರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಒಮ್ಮೆ ಮಾದಕ ವ್ಯಸನಿಯಾದರೆ ಮತ್ತೆ ಸಹಜ ಜೀವನಕ್ಕೆ ಮರಳುವುದು ತುಂಬಾ ಕಷ್ಟ

● ಮೈಸೂರು ಪೊಲೀಸ್ ಆಯುಕ್ತ ರಮೇಶ್ ಎಚ್ಚರಿಕೆ ● 9ನೇ ತರಗತಿ ವಿದ್ಯಾರ್ಥಿ ಬ್ಯಾಗ್‌ನಲ್ಲಿ ಗಾಂಜಾ, ಕಾಂಡೋಮ್ ಪ್ಯಾಕೆಟ್ ಸಿಕ್ಕ ಆತಂಕಕಾರಿ ವಿಷಯ ಬಹಿರಂಗ

ಮೈಸೂರು, ಜೂ.26(ಎಂಕೆ)-'ಮಾದಕ ವಸ್ತುಗಳ ಬಳಕೆಯಿಂದ ದೂರವಿರಿ', 'ಮಾದಕ ವಸ್ತುಗಳಿಗೆ ದಾಸರಾಗಬೇಡಿ, ನಿಮ್ಮ ವ್ಯಕ್ತಿತ್ವವನ್ನು ಕಾಪಾಡಿಕೊಳ್ಳಿ', 'ಮಾದಕ ವಸ್ತುಗಳನ್ನು ದೂರವಾಗಿಸೋಣ, ಸಮಾಜದಲ್ಲಿ ಉನ್ನತ ಸ್ಥಾನಮಾನ ಮತ್ತು ಗೌರವ ಪಡೆಯೋಣ' ಎಂಬಿತ್ಯಾದಿ ಜಾಗೃತಿ ಸಂದೇಶಗಳಿರುವ ನಾಮಫಲಕಗಳನ್ನು ಹಿಡಿದು ಮೈಸೂರು ನಗರ ಪೊಲೀಸರು, ಮಾದಕ ವಸ್ತುಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಮೈಸೂರು ಅರಮನೆ ಉತ್ತರದ್ವಾರದ ಕೋಟೆ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಎದುರು ನಗರ ಪೊಲೀಸ್ ಇಲಾಖೆ ವತಿಯಿಂದ ಅಂತರರಾಷ್ಟ್ರೀಯ ಮಾದಕ ವಸ್ತುಗಳ ದುರ್ಬಳಕೆ ಮತ್ತು ಅಕ್ರಮ ಸಾಗಣೆ ವಿರೋಧಿ ದಿನದ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಮಾದಕ ವಸ್ತುಗಳನ್ನು ಬಳಸದಂತೆ ಎಚ್ಚರಿಸಲಾಯಿತು.

ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಎಚ್ಚರಿಕೆ ಸಂದೇಶಗಳುಳ್ಳ ನಾಮಫಲಕಗಳನ್ನು ಪ್ರದರ್ಶಿಸಿದ ಆರಕ್ಷಕರು, ಕೋಟೆ ಶ್ರೀ ಆಂಜನೇಯಸ್ವಾಮಿ ದೇವಸ್ಥಾನ, ಗಾಂಧಿ ವೃತ್ತ, ಸಯ್ಯಾಜಿರಾವ್ ರಸ್ತೆ ಸೇರಿದಂತೆ ನಗರದ ಪ್ರಮುಖ ರಸ್ತೆಗಳಲ್ಲಿ ಜಾಥಾ ನಡೆಸಿ, ಮಾದಕ ವಸ್ತುಗಳನ್ನು ತ್ಯಜಿಸುವಂತೆ ಕರೆ ನೀಡಿದರು. ಇದಕ್ಕೂ ಮುನ್ನ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಮಾದಕ ವಸ್ತುಗಳು ಆರ್ಥಿಕತೆಯ ಮೇಲೆ ಪರಿಣಾಮ ಬೀರುವುದು ಒಂದೆ ಕಡೆಯಾದರೆ, ಬಳಸುವವರ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರಲಿದೆ. ಮಾದಕ ವಸ್ತುಗಳ(ಡ್ರಗ್ಸ್) ವ್ಯಸನಿಯಾದವರು, ಮತ್ತೆ ಸಹಜ ಜೀವನಕ್ಕೆ ಬರಲು ತುಂಬಾ ಕಷ್ಟವಾಗುತ್ತದೆ. ಯಾವುದೇ ಬಗೆಯ ಡ್ರಗ್ಸ್ ಆದರೂ ಪರಿಣಾಮ ಮಾತ್ರ ಕೆಟ್ಟದಾಗಿರುತ್ತದೆ ಎಂದು ಎಚ್ಚರಿಸಿದರು.

ಮಾದಕ ವ್ಯಸನಿಯಾದವರು ಗರಿಷ್ಠ ಮಟ್ಟದಲ್ಲಿ ಡ್ರಗ್ ಬಳಕೆ ಮಾಡುತ್ತಿದ್ದರೆ, ಅಣ್ಣ, ತಮ್ಮ, ಅಕ್ಕ, ತಂಗಿ, ತಂದೆ-ತಾಯಿ ಸಂಬಂಧಗಳನ್ನು ಮರೆಯುತ್ತಾನೆ. ಡ್ರಗ್ಸ್‌ಗಾಗಿ ತನ್ನ ಮನೆಯಲ್ಲೇ ಕಳ್ಳತನ ಮಾಡುವುದು, ಕೊಲೆ ಮಾಡುವುದು, ಅತ್ಯಾಚಾರ ಮಾಡುವುದನ್ನು ನೋಡಿದ್ದೇವೆ. ಅದರಲ್ಲೂ ಡ್ರಗ್ಸ್ ಚಟಕ್ಕೆ ಬೀಳುವ ಹೆಣ್ಣು ಮಕ್ಕಳು ತಮ್ಮ ಜೀವನವನ್ನೇ ಹಾಳು ಮಾಡಿಕೊಳ್ಳುತ್ತಾರೆ. ಇತ್ತೀಚಿನ ದಿನಗಳಲ್ಲಿ ಮಾದಕ ವಸ್ತುಗಳ ಬಳಕೆ ಮಿತಿ ಮೀರಿದೆ. 9ನೇ ತರಗತಿ ವಿದ್ಯಾರ್ಥಿ ಬ್ಯಾಗ್‌ನಲ್ಲಿ ಗಾಂಜಾ ಮತ್ತು ಕಾಂಡೋಮ್ ಪ್ಯಾಕೆಟ್ ಸಿಕ್ಕಿದ ಘಟನೆಯೂ ನಡೆದಿದೆ. ಡ್ರಗ್ಸ್ ಬಳಕೆ ಶಾಲಾ ಮಟ್ಟಕ್ಕೆ ಹೋದರೆ ಆರೋಗ್ಯಕರ ಸಮಾಜ ನಿರ್ಮಾಣ ತುಂಬಾ ಕಷ್ಟ. ಶಾಲೆಯ ಮಕ್ಕಳೇ ದೇಶದ ಭವಿಷ್ಯವಾಗಿರುತ್ತಾರೆ. ಹಾಗಾಗಿ ಡ್ರಗ್ಸ್ ಬಳಸಲು ಅವಕಾಶ ನೀಡದಂತೆ ಎಚ್ಚರ ವಹಿಸುವುದು ಮುಖ್ಯವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಸಾರ್ವಜನಿಕರು ಸಹಕಾರ ನೀಡಿ: ಮಾದಕ ವಸ್ತುಗಳ ಮುಕ್ತ ಸಮಾಜ ನಿರ್ಮಾಣ ಮಾಡಲು ಕೆಲಸ ಮಾಡಬೇಕಾದರೆ ಪ್ರತಿಯೊಬ್ಬರು ಸಹಕಾರ ನೀಡಬೇಕು. ಎಲ್ಲಿಯಾದರೂ ಡ್ರಗ್ಸ್ ಮಾರಾಟ ಮಾಡುವುದು ಕಂಡು ಬಂದರೆ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿ. ಹಾಸ್ಟೆಲ್, ಶಾಲಾ-ಕಾಲೇಜು, ಪಬ್‌ಗಳು ಸೇರಿದಂತೆ ಹಲವೆಡೆ ಹಾಗೂ ಹಲವು ಪದಾರ್ಥಗಳಲ್ಲಿಯೂ ನೀಡಲಾಗುತ್ತದೆ. ಪೊಲೀಸರೊಂದಿಗೆ ಸಾರ್ವಜನಿಕರು ಸೇರಿ ಮಾದಕ ವಸ್ತುಗಳ ಮುಕ್ತ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯವಾಗಲಿದೆ ಎಂದರು. ಡಿಸಿಪಿ ಜಾಹ್ನವಿ, ಸಿಎಆರ್ ಡಿಸಿಪಿ ಮಾರುತಿ, ಎಸಿಪಿಗಳಾದ ಗಜೇಂದ್ರ ಪ್ರಸಾದ, ಹೆಚ್.ಪರಶುರಾಮಪ್ಪ, ಶಾಂತಮಲ್ಲಪ್ಪ, ಅಶ್ವಥ್ ನಾರಾಯಣ, ಎನ್.ಸ್ನೇಹರಾಜ್, ವಿವಿಧ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್, ಸಬ್ ಇನ್ಸ್‌ಪೆಕ್ಟರ್ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.



ಅಂತರರಾಷ್ಟ್ರೀಯ ಮಾದಕ ವಸ್ತುಗಳ ದುರ್ಬಳಕೆ ಮತ್ತು ಅಕ್ರಮ ಸಾಗಣೆ ವಿರೋಧಿ ದಿನದ ಅಂಗವಾಗಿ ಜಾಗೃತಿ ಜಾಥಾಗೆ ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಚಾಲನೆ ನೀಡಿದರು. ಡಿಸಿಪಿ ಜಾಹ್ನವಿ ಮತ್ತಿತರರಿದ್ದರು.

> **"ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣವಾಗಬೇಕಾದರೆ ಮುಖ್ಯವಾಗಿ ಶಾಲಾ-ಕಾಲೇಜು ಮಕ್ಕಳಿಗೆ ಡ್ರಗ್ಸ್ ಸಿಗದಂತೆ ನೋಡಿಕೊಳ್ಳಬೇಕು. ಚಾಕೋಲೇಟ್, ಪೆನ್ಸಿಲ್ ಸೇರಿದಂತೆ ವಿವಿಧ ಬಳಕೆಯ ವಸ್ತುಗಳ ರೂಪದಲ್ಲಿ ಡ್ರಗ್ಸ್ ಮಾರಾಟ ಮಾಡುವ ಪೆಡ್ಲರ್‌ಗಳಿರುತ್ತಾರೆ. ಆದ್ದರಿಂದ ಶಾಲಾ-ಕಾಲೇಜು ಸೇರಿದಂತೆ ಎಲ್ಲಾ ಕಡೆಯೂ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಮುಖ್ಯವಾಗಿ ಸ್ಥಳೀಯ ಜನರು ಡ್ರಗ್ಸ್ ಮಾರಾಟ ಮಾಡುವುದು ಕಂಡರೆ ಪೊಲೀಸರಿಗೆ ಮಾಹಿತಿ ನೀಡುವ ಮೂಲಕ ಸಹಕರಿಸಿ.** – ಬಿ.ರಮೇಶ್, ಆಯುಕ್ತ, ಮೈಸೂರು ನಗರ ಪೊಲೀಸ್

ಮೈಸೂರು-ಮುಂಬೈ ರೈಲು ಸಂಪರ್ಕಕ್ಕೆ ರೈಲ್ವೆ ಸಚಿವ ಸೋಮಣ್ಣರಿಗೆ ಪ್ರತಾಪ್ ಸಿಂಹ ಮನವಿ

ತಿಂಗಳಲ್ಲಿ ಮೈಸೂರಲ್ಲೇ ಸೋಮಣ್ಣ ಸಭೆ; ಯೋಜನೆಗಳ ಪರಾಮರ್ಶೆ

ಮೈಸೂರು, ಜೂ.26- ರಾಜ್ಯದ ಸಾಂಸ್ಕೃತಿಕ ರಾಜಧಾನಿ ಮೈಸೂರು ಹಾಗೂ ದೇಶದ ಆರ್ಥಿಕ ರಾಜಧಾನಿ ಮುಂಬೈ ನಡುವೆ ಉತ್ತಮ ರೈಲು ಸಂಪರ್ಕ ಹಾಗೂ ಹೊಸದಾಗಿ ನಿತ್ಯವೂ ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ಪರಿಚಯಿಸುವಂತೆ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ. ಸೋಮಣ್ಣ ಅವರಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ ಮನವಿ ಮಾಡಿದ್ದಾರೆ.

ದೆಹಲಿಯಲ್ಲಿ ಕೇಂದ್ರ ರೈಲ್ವೆ ಸಚಿವರನ್ನು ಭೇಟಿ ಮಾಡಿದ ಅವರು, ಮೈಸೂರು ಮಾಹಿತಿ-ತಂತ್ರಜ್ಞಾನ ಕೇಂದ್ರವಾಗಿ ಬೆಳೆಯುತ್ತಿದ್ದು, ದೇಶದ ಪ್ರಮುಖ ಸ್ಟಾರ್ಟ್ ಅಪ್ ಹಬ್ ಆಗಿ ಹೊರಹೊಮ್ಮುತ್ತಿದೆ. ನಾವಿನ್ಯತೆ ಚೈತನ್ಯ ಸ್ಥಳವೂ ಆಗಿದ್ದು, ಶೈಕ್ಷಣಿಕ, ಕೋ-ವರ್ಕಿಂಗ್ ಮೂಲಕ ದೇಶದಾದ್ಯಂತ ಪ್ರತಿಭಾನ್ವಿತ ಕಾರ್ಮಿಕರನ್ನು ಪೂರೈಕೆ ಮಾಡುತ್ತಿರುವ ತಾಣವೂ ಆಗಿದೆ. ಹಿಂದಿನ ರೈಲ್ವೆ ಸಚಿವರಲ್ಲಿ ರೈಲು ಸಂಖ್ಯೆ 11301/02 ಅನ್ನು ಬೆಂಗಳೂರಿನಿಂದ ಮೈಸೂರಿಗೆ ವಿಸ್ತರಿಸುವಂತೆ ಮಾತುಕತೆ ನಡೆಸಿ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ, ನೈರುತ್ಯ ರೈಲ್ವೆಯ ಕಾರ್ಯಾಚರಣೆಯ ನಿರ್ಬಂಧಗಳಿಂದಾಗಿ ಮನವಿ ಕಾರ್ಯರೂಪಕ್ಕೆ ಬಂದಿಲ್ಲ.

ಮೈಸೂರಿಗೆ ಕಲ್ಪಿಸಲಾಗಿರುವ ಹೊಸ ಮೆಗಾ ಟೆಕ್ಸ್‌ಟೈಲ್ ಪಾರ್ಕ್‌ನಿಂದ ಸುಮಾರು 10 ಸಾವಿರ ಉದ್ಯೋಗಗಳು ಸೃಷ್ಟಿಯಾಗಲಿವೆ. ಆರ್ಥಿಕ ಅಭಿವೃದ್ಧಿಗೆ ಪೂರಕವಾದ ದೊಡ್ಡ ಮಟ್ಟದ ಬಂಡವಾಳ ಹೂಡಿಕೆಗೂ ಸಹಕಾರಿಯಾಗಲಿದೆ. ಮೈಸೂರು ದೇಶದಲ್ಲಿಯೇ 6ನೇ ಅತೀ ದೊಡ್ಡ ಸಿಲ್ಕ್ ಕ್ಲಸ್ಟರ್ ಆಗಿ ರೂಪುಗೊಳ್ಳುವ ಮೂಲಕ ಉದ್ಯೋಗಾವಕಾಶಗಳೊಂದಿಗೆ ಉದ್ಯಮ ಕೇಂದ್ರವಾಗಲಿದೆ.

ಮೈಸೂರು-ಬೆಂಗಳೂರು ನಡುವಿನ 119 ಕಿ.ಮೀ ಎಕ್ಸ್‌ಪ್ರೆಸ್‌ವೇ ಮತ್ತು ಏರ್‌ಪೋರ್ಟ್ ವಿಸ್ತರಣೆಯಿಂದ ಮೈಸೂರು, ಬೆಂಗಳೂರಿನ ನಂತರ ಐಟಿ ಹಬ್ ಆಗುವುದರಲ್ಲಿ ಯಾವುದೇ ಅನುಮಾನವಿಲ್ಲ. ದೇಶದ ಮೂಲೆ ಮೂಲೆಯಿಂದಲೂ ಉದ್ಯೋಗ ಹರಸಿ ಬರುವ ಕೌಶಲ್ಯರಹಿತ ಕಾರ್ಮಿಕರ ಕೇಂದ್ರವಾಗಲಿದೆ.


ಮೈಸೂರು-ಮುಂಬೈ ನಡುವೆ ಪ್ರತಿನಿತ್ಯ ವೇಗದ ರೈಲು ಸಂಪರ್ಕ ಕಲ್ಪಿಸುವುದರಿಂದ ಮೈಸೂರು ಜೊತೆಗೆ ಸುತ್ತಮುತ್ತಲಿನ ಜಿಲ್ಲೆಗಳಾದ ಕೊಡಗು, ಚಾಮರಾಜನಗರ, ಮಂಡ್ಯ ಮತ್ತು ಹಾಸನಕ್ಕೂ ಅನುಕೂಲವಾಗಲಿದೆ. ಇದನ್ನೆಲ್ಲಾ ಮನಗಂಡು ಕೂಡಲೇ ಮುಂಬೈ-ಮೈಸೂರು ನಡುವೆ ಹೊಸ ರೈಲು ಸಂಚಾರ ಕಲ್ಪಿಸುವಂತೆ ಮನವಿಯಲ್ಲಿ ತಿಳಿಸಿದ್ದಾರೆ.

ತಮ್ಮ ಮನವಿಗೆ ಸ್ಪಂದಿಸಿರುವ ಸಚಿವ ಸೋಮಣ್ಣ ಅವರು, ಮುಂದಿನ ತಿಂಗಳು ಮೈಸೂರಿನಲ್ಲಿ ರೈಲ್ವೆ ಇಲಾಖೆ ಅಧಿಕಾರಿಗಳ ಸಭೆ ನಡೆಸಲಿದ್ದು, ಕಳೆದ ಸರ್ಕಾರದ ಅವಧಿಯಲ್ಲಿ ಅನುಷ್ಠಾನಗೊಂಡ ರೈಲ್ವೆ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸುವುದರ ಜೊತೆಗೆ ಮಂಜೂರಾಗಿರುವ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಮಾಹಿತಿ ನೀಡಿದ್ದಾರೆ.



ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಅವರಿಗೆ ಮಾಜಿ ಸಂಸದ ಪ್ರತಾಪ್‌ಸಿಂಹ ಮನವಿ ಸಲ್ಲಿಸಿದರು.

ಹೊಸಹಳ್ಳಿ ಶಾಲೆಯಲ್ಲಿ ಪರಿಸರ ದಿನಾಚರಣೆ



ಹೊಸಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪರಿಸರ ದಿನಾಚರಣೆ ಅಂಗವಾಗಿ ಗಿಡ ನೆಡುವ ಕಾರ್ಯಕ್ರಮ ನಡೆಯಿತು. ಈ ವೇಳೆ ಶಾಲೆಯ ಮುಖ್ಯ ಶಿಕ್ಷಕಿ ರಾಣಿ, ಶ್ರೀ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಒಕ್ಕೂಟದ ಅಧ್ಯಕ್ಷೆ ಶಿಲ್ಪಶ್ರೀ ಹಾಗೂ ಒಕ್ಕೂಟದ ಪದಾಧಿಕಾರಿಗಳು, ಶಾಲಾ ಮಕ್ಕಳು ಇದ್ದರು.

ನಿಧನ


ಕೆ.ನಾಗೇಗೌಡ



ಮೈಸೂರು, ಜೂ.26-ಎಚ್.ಡಿ.ಕೋಟೆ ತಾಲೂಕಿನ ಅಂತರಸಂತೆ ಸಮೀಪದ ಹುಣಸೇಕುಪ್ಪೆ ಗ್ರಾಮದ ದಿ.ಕಾಳಸ್ವಾಮಿಗೌಡ ಅವರ ಹಿರಿಯ ಪುತ್ರ, ತಾರಕ ಜಲಾಶಯದ ನಿವೃತ್ತ ನೌಕರ ಕೆ.ನಾಗೇಗೌಡ(90) ಬುಧವಾರ ನಿಧನರಾದರು.

ಮೃತರು ಪತ್ನಿ ರಾಜಮ್ಮ, ಪುತ್ರ ನಾಗರಾಜು, ಮೂವರು ಸಹೋದರರು, ಓರ್ವ ಸಹೋದರಿ ಸೇರಿದಂತೆ ಅಪಾರ ಬಂಧು ಬಳಗ ಇದ್ದಾರೆ. ಅಂತ್ಯಕ್ರಿಯೆ ಇದೇ ದಿನ ಸಂಜೆ ಅಂತರಸಂತೆ ಗ್ರಾಮದಲ್ಲಿನ ಅವರ ಜಮೀನಿನಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಚಿಕ್ಕೊಸೇಗೌಡ



ಮೈಸೂರಿನ ಸರ್ಕಾರಿ ಉತ್ತನಹಳ್ಳಿಯ ಏಳಿಗೆಹುಂಡಿ ಗ್ರಾಮದ ದೇವರ ಗುಡ್ಡಯ್ಯನಹಟ್ಟಿ ಚಿಕ್ಕೊಸೇಗೌಡ (84) ಮಂಗಳವಾರ ಮಧ್ಯಾಹ್ನ ನಿಧನರಾದರು. ಮೃತರು ಪತ್ನಿ ಜಯಮ್ಮ, ಪುತ್ರರಾದ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಅಶ್ವಿನಿ ರೇವಣ್ಣ ಮತ್ತು ದೊರೆಸ್ವಾಮಿ ಸೇರಿದಂತೆ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಬುಧವಾರ ಮಧ್ಯಾಹ್ನ 12 ಗಂಟೆಗೆ ಸರ್ಕಾರಿ ಉತ್ತನಹಳ್ಳಿ ಗ್ರಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಚಿಕ್ಕೊಸೇಗೌಡರ ನಿಧನಕ್ಕೆ ಮೈಸೂರು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಉತ್ತನಹಳ್ಳಿ ಶಿವಣ್ಣ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

27.06.2024 ಗುರುವಾರ, ಮಳೆ ನಕ್ಷತ್ರ: ಆರಿದ್ರಾ 22.06.2024ರಿಂದ 05.07.2024
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಕೃಷ್ಣ ಪಕ್ಷ,
ತಿಥಿ: ಷಷ್ಠಿ, ನಕ್ಷತ್ರ: ಶತಭಿಷ, ರಾಹುಕಾಲ: ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

■ **ಶ್ರೀ ರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನ, ನೇತ್ರಧಾಮ ಸೂಪರ್ ಮಲ್ಟಿ ಸ್ಪೆಷಾಲಿಟಿ ಕಣ್ಣಿನ ಆಸ್ಪತ್ರೆ:** ಕಣ್ಣು ತೆರೆದರೆ ಜನನ, ಕಣ್ಣು ಮುಚ್ಚಿದರೆ ಮರಣ, ಜನನ ಮರಣಗಳ ನಡುವೆ ರೆಪ್ಪೆ ಆಡಿಸುವುದೇ ಜೀವನ, ಉಚಿತ ಕಣ್ಣಿನ ತಪಾಸಣಾ ಶಿಬಿರ, ಉದ್ಘಾಟನೆ: ರಾಮಕೃಷ್ಣ ವಿದ್ಯಾಶಾಲೆಯ ಕರೆಸ್ಪಾಂಡೆಂಟ್ ಸ್ವಾಮೀಜಿ ಶ್ರೀ ಯುಕ್ತೇಶಾನಂದಜೀ ಮಹಾರಾಜ್, ಸ್ಥಳ: ರಾಮಕೃಷ್ಣ ಪರಮಹಂಸ ವೃತ್ತದ ಪರಮಹಂಸ ಮಂಟಪ, ಬೆಳಗ್ಗೆ 9 ರಿಂದ.

■ **ರಾಜ್ಯ ಒಕ್ಕಲಿಗರ ಸಂಘ :** ನಾಡಪ್ರಭು ಕೆಂಪೇಗೌಡರ 515ನೇ ಜಯಂತಿ ಅಂಗವಾಗಿ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದಿಂದ ಕಲಾ ತಂಡದೊಂದಿಗೆ ಕಲಾಮಂದಿರದವರೆಗೆ ಮೆರವಣಿಗೆ, ಸ್ಥಳ: ಕೋಟೆ ಆಂಜನೇಯಸ್ವಾಮಿ ದೇವಸ್ಥಾನ, ಬೆಳಗ್ಗೆ 9ಕ್ಕೆ.

■ **ಜೆಎಸ್‌ಎಸ್ ಆಸ್ಪತ್ರೆ :** ವಿಶ್ವ ರಕ್ತದಾನಿಗಳ ಶಿಬಿರ, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್. ಶ್ರೀವತ್ಸ, ಗೌರವ ಅತಿಥಿಗಳು: ಜೆಎಸ್‌ಎಸ್ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ. ಸಿ.ಪಿ. ಮಧು, ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯ ಉಪ ಪ್ರಾಂಶುಪಾಲ ಡಾ. ಎಂ. ಮಾಂತಪ್ಪ, ಸ್ಥಳ: ಶ್ರೀ ರಾಜೇಂದ್ರ ಶತಮಾನೋತ್ಸವ ಸಭಾಂಗಣ, ಜೆಎಸ್‌ಎಸ್ ಆಸ್ಪತ್ರೆ 3ನೇ ಹಂತ, ಬೆಳಗ್ಗೆ 9.30ಕ್ಕೆ.

■ **ಜೀವಧಾರ ರಕ್ತನಿಧಿ ಕೇಂದ್ರ :** ನಾಡಪ್ರಭು ಕೆಂಪೇಗೌಡರ ಜಯಂತಿ ಅಂಗವಾಗಿ ಹೋಳಿಗೆ ವಿತರಣೆ, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್.ಶ್ರೀವತ್ಸ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಹಿರಿಯ ಸಮಾಜ ಸೇವಕ ಡಾ.ಕೆ. ರಘುರಾಂ ವಾಜಪೇಯಿ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ಸ್ಥಳ: ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗ, ಬೆಳಗ್ಗೆ 10ಕ್ಕೆ.

■ **ಪ್ರೀತಿ ಕ್ಯಾನ್ಸರ್ ಸೆಂಟರ್:** ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ, ಸ್ಥಳ: ಪ್ರೀತಿ ಕ್ಯಾನ್ಸರ್ ಸೆಂಟರ್, ಲಕ್ಷ್ಮೀಪುರಂ, ಬೆಳಗ್ಗೆ 10 ರಿಂದ.

■ **ಮೈಸೂರು ವಿಶ್ವವಿದ್ಯಾನಿಲಯ, ವಾಣಿಜ್ಯಶಾಸ್ತ್ರ ವಿಭಾಗ :** ವಿಶ್ವವಿದ್ಯಾನಿಲಯ ಮಟ್ಟದ ವಾಣಿಜ್ಯ ಉತ್ಸವ 'ಮನಸ್ ವೃದ್ಧಿ-2024', ಮುಖ್ಯ ಅತಿಥಿಗಳು: ಮೈಸೂರು ವಿಶ್ವವಿದ್ಯಾನಿಲಯ ಕುಲಪತಿ ಪ್ರೊ. ಎನ್.ಕೆ.ಲೋಕನಾಥ್, ಪ್ರಾಸ್ತಾವಿಕ ಭಾಷಣ: ಜೆ.ಕೆ.ಟೈರ್ಸ್ ಮುಖ್ಯ ವ್ಯವಸ್ಥಾಪಕರಾದ ಶ್ರೀಮತಿ ಸುಧಾಶ್ರೀ, ಅಧ್ಯಕ್ಷತೆ: ವಾಣಿಜ್ಯ ಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷ ಡಾ.ಹೆಚ್.ರಾಜಶೇಖರ್, ಉಪಸ್ಥಿತರು: ಡಾ.ಕೆ.ನಾಗೇಂದ್ರ ಬಾಬು, ಡಾ.ಬಿ.ನಾಗರಾಜು, ಡಾ.ಎನ್.ನಾಗರಾಜು, ಡಾ.ಎಂ.ಎಲ್.ಅಶೋಕ್, ಸ್ಥಳ: ಲಲಿತ ಕಲೆಗಳ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ : 5.30 ಟಿ-20 ವಿಶ್ವಕಪ್ ಅಂಗವಾಗಿ ತಂಡಗಳ ನಡುವೆ ಬ್ರಿಯಾನ್ ಲಾರ, ಟ್ರಿನಿಡಾಡ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುವ ಕ್ರಿಕೆಟ್ ಮೊದಲನೇ ಸೆಮಿಫೈನಲ್ ಪಂದ್ಯದ ವೀಕ್ಷಕ ವಿವರಣೆ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಆರ್. ಚಂದ್ರಿಕಾ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ-ಕಾಡಿನಲ್ಲಿನ ಕಥೆಗಳು. ಪ್ರಸ್ತುತಿ: ಜಿ.ಶಾಂತಕುಮಾರ್ **ಮಧ್ಯಾಹ್ನ:** 12.30 ದೇವರನಾಮ, 12.45 ಚಟ್‌ಪಟ್ ಚುರುಮುರಿ, ಪ್ರಸ್ತುತಿ: ಪ್ರಭುಸ್ವಾಮಿ ಮಳಿಮಠ್ ಹಾಗೂ ಕೆ.ಬಿ.ಮೀನಾ, 1.20 ಭಾವಗೀತೆಗಳು-ಪಿ. ಸುಮನಾ, 4.00 ಜನಪದ ಸಂಗೀತ, 4.30 ಕನ್ನಡ ಭಾರತೀ, 6.10 'ಸಂವಹನ ಸಮಾಚಾರ' ಬಾನುಲಿ ಸರಣಿ. ಪ್ರಸ್ತುತಿ: ಅಲಕಾ ಕಟ್ಟೆಮನೆ, 6.50 ಕೃಷಿರಂಗ-ಕಿಸಾನ್‌ವಾಣಿ, ಪ್ರಾಯೋಜಕರು: ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಕುರಿತು ನೇರ ಫೋನ್ ಇನ್ ಕಾರ್ಯಕ್ರಮ. ಭಾಗವಹಿಸುತ್ತಾರೆ: ಮಂಡ್ಯದ ವಿಕಸನ ಗ್ರಾಮೀಣ ಹಾಗೂ ನಗರಾಭಿವೃದ್ಧಿ ಸಂಸ್ಥೆಯ ನಿರ್ದೇಶಕರಾದ ಮಹೇಶ್ ಚಂದ್ರಗುರು ಹಾಗೂ ಗ್ರೀನ್ ಆಬ್ಜೆಕ್ಟ್ ಲಿಮಿಟೆಡ್ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾದ ಆರ್.ಪುಷ್ಪಾದೇವಿ. ಪ್ರಸ್ತುತಿ: ಎನ್. ಕೇಶವಮೂರ್ತಿ, 7.45 ಟಿ-20 ವಿಶ್ವ ಕಪ್ ಅಂಗವಾಗಿ ತಂಡಗಳ ನಡುವೆ ಪ್ರೊವಿಡೆನ್ಸ್, ಗುಯಾನ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುವ ಕ್ರಿಕೆಟ್ ಎರಡನೇ ಸೆಮಿಫೈನಲ್ ಪಂದ್ಯದ ವೀಕ್ಷಕ ವಿವರಣೆ.

■ **ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು :** ವಿಶೇಷ ಉಪನ್ಯಾಸದ ಸಮಾರೋಪ ಸಮಾರಂಭ, ಅಧ್ಯಕ್ಷತೆ : ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು ಪ್ರಾಂಶುಪಾಲ ಡಾ. ಎಂ. ಪ್ರಭು, ಮುಖ್ಯ ಅತಿಥಿಗಳು : ಹೆಚ್.ಡಿ. ಕೋಟೆ ವಲಯ ಅರಣ್ಯಾಧಿಕಾರಿ ಶ್ರೀಮತಿ ಪೂಜಾ ಯಲಿಗಾರ್, ತಾಲೂಕು ಆರೋಗ್ಯಾಧಿಕಾರಿ ಡಾ. ರವಿಕುಮಾರ್, ಬುಡಕಟ್ಟು ಕೃಷಿಕರ ಸಂಘದ ಕಾರ್ಯದರ್ಶಿ ಡಿ.ಎಂ. ಬಸವರಾಜು, ರೋಟರಿ ಸಂಸ್ಥೆ ಕಾರ್ಯದರ್ಶಿ ಸ್ವಾಮಿ, ಸಮಾಜ ಸೇವಕ ಜೆ.ಪಿ. ಶಿವರಾಜು, ಎನ್. ಪ್ರಭು, ಡಾ. ಎಂ.ಪಿ. ಸೋಮಶೇಖರ್, ಡಾ. ಕುಮುದಿನಿ ಅಚ್ಚಿ, ಸ್ಥಳ : ಕಾಲೇಜು ಆವರಣ, ಊಟಿ ರಸ್ತೆ, ಬೆಳಗ್ಗೆ 11.30ಕ್ಕೆ

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಸಾಹಿತ್ಯ ಕಲಾಕೂಟ, ಕನ್ನಡ ಲೇಖಕಿಯರ ಟ್ರಸ್ಟ್, ಪದ್ಮಶ್ರೀ ಜೈನ ಮಹಿಳಾ ಸಮಾಜ :** ನಾಡೋಜ ಡಾ.ಕಮಲಾ ಹಂಪನಾ ಅವರಿಗೆ ಭಾವಪೂರ್ಣ ನುಡಿನಮನ, ಭಾಗವಹಿಸುವವರು: ಮಾನಸ, ಪ್ರೊ.ಸಿ.ನಾಗಣ್ಣ, ಮಡ್ಡೀಕೆರೆ ಗೋಪಾಲ್, ಎಂ.ಚಂದ್ರಶೇಖರ್, ಡಾ.ವೈ.ಡಿ. ರಾಜಣ್ಣ, ಎಸ್.ಬಿ.ಸುರೇಶ್ ಜೈನ್, ಸುನೀಲ್‌ಕುಮಾರ್, ಪ್ರೊ.ಪದ್ಮಾಶೇಖರ್, ಪ್ರೊ.ನೀಲಗಿರಿ ತಳವಾರ, ಡಾ.ಎಂ.ಎಸ್.ಪದ್ಮ, ಡಿ.ಎನ್.ಲೋಕಪ್ಪ, ಡಾ.ಹೆಚ್.ಪಿ.ಮೋಹನ್‌ಕುಮಾರ್ ಶಾಸ್ತ್ರಿ, ಶ್ರೀಮತಿ ಲತಾ ಸುದರ್ಶನ್, ಸ್ಥಳ: ಜಿಲ್ಲಾ ಕನ್ನಡ ಸಾಹಿತ್ಯ ಭವನ, ವಿಜಯನಗರ 1ನೇ ಹಂತ, ಸಂಜೆ 4.30ಕ್ಕೆ.

■ **ಮೈಸೂರು ಸಂಗೀತ ಸಭೆಗಳ ಒಕ್ಕೂಟ ಮತ್ತು ಗಾನಭಾರತಿ :** ಕರ್ನಾಟಕ ವಾಗ್ಗೇಯ ವೈಭವ ಕಾರ್ಯಕ್ರಮ, ಸಂಜೆ 6ಕ್ಕೆ ವಾಗ್ಗೇಯಕಾರರು- ಸ್ವರಮೂರ್ತಿ ವಿ.ಎನ್. ರಾವ್, ವಿದ್ವಾನ್ ಮಾನಸ ನಯನ ಅವರಿಂದ ಗಾಯನ, ವಿದ್ವಾನ್ ಉದಯಕಿರಣ್-ಪಿಟೀಲು, ವಿದ್ವಾನ್ ಸುನಿಲ್ ಸುಬ್ರಮಣ್ಯ-ಮೃದಂಗ, ವಿದ್ವಾನ್ ವಿ.ಎಸ್. ರಮೇಶ್-ಮೋರ್ಚಿಂಗ್; ಸಂಜೆ 7.15ಕ್ಕೆ ವಾಗ್ಗೇಯಕಾರರು- ರಾಳ್ಳಪಲ್ಲಿ ಅನಂತಕೃಷ್ಣ ಶರ್ಮ, ವಿದ್ವಾನ್ ಬಳ್ಳಾರಿ ಎಂ. ರಾಘವೇಂದ್ರ ಅವರಿಂದ ಗಾಯನ, ವಿದ್ವಾನ್ ಕೇಶವ ಮೋಹನ್ ಕುಮಾರ್-ಪಿಟೀಲು, ವಿದ್ವಾನ್ ಎಚ್.ಎಲ್. ಶಿವಶಂಕರಸ್ವಾಮಿ-ಮೃದಂಗ, ವಿದ್ವಾನ್ ರಘುನಂದನರಾವ್-ಘಟಂ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀಮದ್ಭಗವದ್ಗೀತಾ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 27 ಗುರುವಾರ 2024

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 72 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ನಕ್ಕರೆ ಅದೇ ಸ್ವರ್ಗ

ಶೀಲಾ : ಲಾಯರ್‌ನನ್ನು ಮದುವೆಯಾಗಿ ದೊಡ್ಡ ತಪ್ಪು ಮಾಡಿದೆ ಎನ್ನಿಸ್ತಾ ಇದೆ.
ಲೀಲಾ : ಯಾಕೆ, ಏನಾಯ್ತೆ?
ಶೀಲಾ : ನಾನು ಏನೇ ಹೇಳಿದ್ರೂ ಭಗವದ್ಗೀತೆ ಮೇಲೆ ಪ್ರಮಾಣ ಮಾಡಿ ಹೇಳು ಅಂತಿರ್ತಾರೆ ಕಣೆ!

ಮೈಸೂರು ಮಿತ್ರ

ಗುರುವಾರ, 27 ಜೂನ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಒಳ್ಳೆಯ ಸಮಯಕ್ಕಿಂತ ಒಳ್ಳೆಯ ಮನುಷ್ಯನ ಸಂಬಂಧವಿರಲಿ. ಏಕೆಂದರೆ, ಒಳ್ಳೆಯ ಮನುಷ್ಯ ಒಳ್ಳೆಯ ಸಮಯವನ್ನು ತರಬಲ್ಲ. ಆದರೆ ಒಳ್ಳೆಯ ಸಮಯವು ಒಳ್ಳೆಯ ಮನುಷ್ಯನನ್ನು ತರಲಾರದು. –ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನಾಯಿಯು ನಮ್ಮನ್ನು ಕಚ್ಚಿದರೆ ನಾಯಿಯನ್ನು ಕಚ್ಚಲು ನಮ್ಮಿಂದ ಆಗುವುದೇ?

ನಿಮ್ಮ ಪತ್ರಗಳು

■ ತಂಗುದಾಣಗಳಿಗೆ ಬೆಳಕಿನ ಸೌಲಭ್ಯ ಕಲ್ಪಿಸಿ

ಮಾನ್ಯರೆ,

ಮೈಸೂರು ನಗರದ ಯಾದವಗಿರಿಯ ಮೈಸೂರು ಆಕಾಶವಾಣಿ ಕೇಂದ್ರದ ಪಕ್ಕದಲ್ಲಿರುವ ಅಂಚೆ ಕಚೇರಿಯ ಎಡಭಾಗ ಮತ್ತು ಎದುರಿನಲ್ಲಿ ಎರಡು ತಂಗುದಾಣಗಳಿದ್ದು, ಈ ಎರಡೂ ತಂಗುದಾಣಗಳಿಗೆ ಬೆಳಕಿನ ಸೌಲಭ್ಯವಿರುವುದಿಲ್ಲ. ಹೀಗಾಗಿ ಪ್ರಯಾಣಿಕರು ಕತ್ತಲಿನಲ್ಲಿಯೇ ಬಸ್ಸಿಗಾಗಿ ಕಾಯುವಂತಾಗಿದೆ. ಈ ಪ್ರದೇಶದ ಸುತ್ತಮುತ್ತ ಅನೇಕ ಕಚೇರಿಗಳು ಮತ್ತು ಕಾರ್ಖಾನೆಗಳಿದ್ದು ಮಹಿಳಾ ಪ್ರಯಾಣಿಕರನ್ನೊಳಗೊಂಡಂತೆ ಸಾಕಷ್ಟು ಸಂಖ್ಯೆಯ ಪ್ರಯಾಣಿಕರು ಈ ತಂಗುದಾಣ ಅವಲಂಬಿತರಾಗಿದ್ದಾರೆ. ಆದ ಕಾರಣ ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನಹರಿಸಿ ಆದಷ್ಟು ಶೀಘ್ರ ಈ ಎರಡೂ ತಂಗುದಾಣಗಳಿಗೆ ಬೆಳಕಿನ ಸೌಲಭ್ಯ ಕಲ್ಪಿಸಿಕೊಡಬೇಕೆಂದು ಮನವಿ.

– ಪರಶಿವಮೂರ್ತಿ, ಜೆ.ಪಿ.ನಗರ, ಮೈಸೂರು.

■ ಕಲ್ಯಾಣ ಮಂಟಪದ ಬಳಿ ವಾಹನ ನಿಲುಗಡೆ ನಿಷೇಧಿಸಲಿ

ಮಾನ್ಯರೆ,

ಮೈಸೂರು–ಹುಣಸೂರು ರಸ್ತೆ ಐಶ್ವರ್ಯ ಪೆಟ್ರೋಲ್ ಬಂಕ್ ಪಕ್ಕದಲ್ಲಿರುವ ಮೂರು ಕಲ್ಯಾಣ ಮಂಟಪಗಳಿಗೆ ಆಗಮಿಸುವವರು ತಮ್ಮ ವಾಹನಗಳನ್ನು ಮುಖ್ಯ ರಸ್ತೆಯಲ್ಲಿಯೇ ನಿಲುಗಡೆ ಮಾಡುತ್ತಿರುವುದರಿಂದ ಮತ್ತು ಸಿಗ್ನಲ್ ಸಹ ಸಮೀಪ ಇರುವುದರಿಂದ ಪ್ರತಿನಿತ್ಯ ಓಡಾಡುವ ವಾಹನ ಸವಾರರಿಗೆ ತೀವ್ರ ತೊಂದರೆಯಾಗುತ್ತಿದೆ. ಇದೇ ರೀತಿ ಯೋಗಾನರಸಿಂಹಸ್ವಾಮಿ ದೇವಾಲಯದ ಸಮೀಪ ಮದುವೆ ಏರ್ಪಟ್ಟ ಸಮಯದಲ್ಲಿ ರಸ್ತೆಯಲ್ಲಿ ಅಡ್ಡಾದಿಡ್ಡಿ ವಾಹನ ನಿಲ್ಲಿಸಿರುತ್ತಾರೆ. ವಿಜಯನಗರ 1ನೇ ಹಂತ ಐಶ್ವರ್ಯ ಹಾಸ್ಪಿಟಲ್ ಮುಂಭಾಗ ಇರುವ ಕಲ್ಯಾಣ ಮಂಟಪದ ಬಳಿ ಎಲ್ಲೆಂದರಲ್ಲಿ ಕಾರುಗಳನ್ನು ನಿಲ್ಲಿಸಿ ಇಲ್ಲಿನ ನಿವಾಸಿಗಳಿಗೆ ಮತ್ತು ರಸ್ತೆಯಲ್ಲಿ ಸಂಚರಿಸುವವರಿಗೆ ತೀವ್ರ ತೊಂದರೆ ಕೊಡುತ್ತಿದ್ದಾರೆ. ಸಂಚಾರಿ ಪೊಲೀಸರು ತಮ್ಮ ಗಸ್ತು ವಾಹನದಲ್ಲಿ ಎಚ್ಚರಿಸಿ ವ್ಹೀಲ್ ಲಾಕ್ ಮಾಡಿದರೆ ಪರಿಸ್ಥಿತಿ ಸುಧಾರಿಸಬಹುದು. ಸೂಕ್ತ ಕ್ರಮಕ್ಕಾಗಿ ಸಂಚಾರಿ ಪೊಲೀಸರಲ್ಲಿ ಮನವಿ.

–ಎಂ.ಎಸ್. ಶಾಂತಾರಾಂ, ವಿಜಯನಗರ, ಮೈಸೂರು.

■ ಡೆಂಗ್ಯೂ ಜ್ವರದ ಬಗ್ಗೆ ಇರಲಿ ಎಚ್ಚರ

ಮಾನ್ಯರೇ,

ಮುಂಗಾರು ಪ್ರವೇಶವಾಗಿ ಕೆಲ ದಿನಗಳು ಕಳೆದರೂ ರಾಜ್ಯದಲ್ಲಿ ಮಳೆ ಆರಂಭವಾಗಿಲ್ಲ. ಮಳೆಯ ಅಭಾವದ ಬೇಸರದ ನಡುವೆ ರಾಜ್ಯದಲ್ಲಿ ಡೆಂಗ್ಯೂ ಜ್ವರದ ಪ್ರಭಾವ ಜೋರಾಗಿದ್ದು, ಡೆಂಗ್ಯೂ ಪ್ರಕರಣಗಳ ಸಂಖ್ಯೆ ರಾಜ್ಯದಲ್ಲಿ ದಿನೇ ದಿನೆ ಹೆಚ್ಚಾಗುತ್ತಿರುವ ಕಾರಣಕ್ಕೆ ಸಾಕಷ್ಟು ಎಚ್ಚರ ವಹಿಸುವುದು ಅವಶ್ಯವಾಗಿದೆ. ರಾಜ್ಯದಲ್ಲೂ ಕೆಲವು ಕಡೆ ಮಳೆಯಾಗಿದ್ದು, ಬಿಸಿಲಿನ ತಾಪವೂ ಹೆಚ್ಚಿದೆ. ಬಿಸಿಲು ಮಳೆಯ ಕಣ್ಣಾಮುಚ್ಚಾಲೆಯು ರಾಜ್ಯದಲ್ಲಿ ಡೆಂಗ್ಯೂ ಜ್ವರದ ಅಪಾಯವನ್ನು ಹೆಚ್ಚಿಸಲು ಕಾರಣವಾಗಿದೆ.

ಬೇಸಿಗೆಯ ಕೊನೆಯಲ್ಲಿ ಮತ್ತು ಮಳೆಗಾಲದಲ್ಲಿ ಸಾಮಾನ್ಯವಾಗಿ ಹೆಚ್ಚಿನ ಪ್ರಮಾಣದಲ್ಲಿ ಡೆಂಗ್ಯೂ ಪ್ರಕರಣಗಳು ವರದಿಯಾಗುತ್ತವೆ. ಹೀಗಾಗಿ ಡೆಂಗ್ಯೂ ಜ್ವರದ ಅಪಾಯಗಳು ಮತ್ತು ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳು, ರೋಗ ಲಕ್ಷಣ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಕೆಲಸವನ್ನು ಆರೋಗ್ಯ ಇಲಾಖೆ ಕಡೆಯಿಂದ ಆಗಬೇಕಿದೆ. ಸೊಳ್ಳೆ ಕಡಿತದಿಂದ ಡೆಂಗ್ಯೂ ರೋಗ ಬರುತ್ತದೆ. ಹೆಣ್ಣು ಈಡಿಸ್ ಈಜಿಪ್ಟಿ ಸೊಳ್ಳೆ ಕಡಿತದಿಂದ ಡೆಂಗ್ಯೂ ವೈರಸ್ ಸೋಂಕು ಹರಡುತ್ತದೆ. ರಕ್ತನಾಳಗಳಿಗೆ ಈ ವೈರಸ್ ಹಾನಿಯುಂಟುಮಾಡುತ್ತದೆ, ಜತೆಗೆ ರಕ್ತಕಣಗಳ ಸಂಖ್ಯೆಯಲ್ಲಿ ಗಣನೀಯ ಇಳಿಕೆಯಾಗಿ ಅಂಗಾಂಗ ವೈಫಲ್ಯ ಮತ್ತು ಕೆಲವೊಮ್ಮೆ ಜೀವಕ್ಕೂ ಸಂಚಕಾರ ತರಬಹುದು. ಜ್ವರ, ತಲೆನೋವು, ವಾಂತಿ, ಕಣ್ಣು ಊದಿಕೊಂಡು ನೋವು ಉಂಟಾಗುವುದು, ಕೈಕಾಲುಗಳಲ್ಲಿ ಸೆಳೆತ, ನೋವು, ಆಯಾಸ ಉಂಟಾಗಬಹುದು. ಇವೆಲ್ಲವೂ ಡೆಂಗ್ಯೂ ರೋಗದ ಲಕ್ಷಣ ಎಂಬುದನ್ನು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕಿದೆ.

ಇದೆಲ್ಲಕ್ಕಿಂತ ಪ್ರಮುಖವಾಗಿ ಡೆಂಗ್ಯೂ ಜ್ವರ ಸೊಳ್ಳೆ ಕಡಿತದಿಂದ ಉಂಟಾಗುತ್ತದೆ ಮತ್ತು ಹರಡುತ್ತದೆ. ಹೀಗಾಗಿ ಸೊಳ್ಳೆ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ನೀರು ಶೇಖರಣೆಯಾಗುವ ಯಾವುದೇ ಪ್ರದೇಶವಿದ್ದರೂ, ಶುಚಿಗೊಳಿಸುವುದು ಅಗತ್ಯ. ಜತೆಗೆ ಮನೆ, ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು, ಸೊಳ್ಳೆ ನಿವಾರಕ ಬಳಕೆಯೂ ಸೂಕ್ತವಾಗಿದೆ ಎಂಬುದನ್ನು ಸ್ಥಳೀಯ ಆಡಳಿತ ಹಾಗೂ ಆರೋಗ್ಯ ಇಲಾಖೆ ಮುಖಾಂತರ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸ ರಾಜ್ಯದೆಲ್ಲೆಡೆ ಆಗಬೇಕಾಗಿದೆ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

■ ಗುಂಡಿಗಳನ್ನು ಮುಚ್ಚಿ ರಸ್ತೆ ಸರಿಪಡಿಸಿ



ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ಹವಾಮಾನದ ವೈಪರೀತ್ಯದಿಂದಾಗಿ ಮಳೆ ಬರುವುದು ಹೋಗುವುದು ತೋಚದಾಗಿದೆ. ಹೀಗಿರುವಾಗ ಮೈಸೂರಿನಂತಹ ಸುಂದರ – ಸ್ವಚ್ಛ ನಗರದಲ್ಲಿ ಅಲ್ಲಲ್ಲಿ ರಸ್ತೆಯಲ್ಲಿ ಗುಂಡಿಗಳು ಕಾಣಿಸಿಕೊಂಡು ಜನತೆಗೆ ಓಡಾಡಲು ಹಾಗೂ ವಾಹನಗಳು ಚಲಿಸಲು ಕಷ್ಟಸಾಧ್ಯವಾಗಿದೆ. ಅಗ್ರಹಾರದಲ್ಲಿರುವ ಜೆ.ಎಸ್.ಎಸ್.ಆಸ್ಪತ್ರೆಯ ಮುಂದಿನ ಅಂಡರ್‌ಬ್ರಿಡ್ಜ್‌ನ ಕೆಳಗೆ ದೊಡ್ಡ ದೊಡ್ಡ ಗುಂಡಿಗಳಾಗಿದ್ದು ಮಳೆ ಬಂದಾಗ ನೀರು ತುಂಬಿಕೊಳ್ಳುತ್ತದೆ.

ಈ ಬ್ರಿಡ್ಜ್‌ನ ಕೆಳಗೆ ನೀರು ತುಂಬಿದಾಗಲು ಹಾಗೇ ಇರುವಾಗಲು ವಾಹನಗಳು ಚಲಿಸಲು ತುಂಬ ಅಪಾಯಕಾರಿ ಎನಿಸುತ್ತದೆ. ಇದರಿಂದ ಅಲ್ಲಿರುವ ಮಾರುಕಟ್ಟೆಯ ವ್ಯಾಪಾರಿಗಳು ತಮಗೆ ವ್ಯಾಪಾರಕ್ಕೆ ಬೇಕಾದ ಸರಕುಗಳನ್ನು ತರಲು ಹಾಗೂ ಗ್ರಾಹಕರು ವಸ್ತುಗಳನ್ನು ಕೊಳ್ಳಲು ತುಂಬಾ ತೊಂದರೆಯುಂಟಾಗುತ್ತಿದೆ. ಈ ರಸ್ತೆಯಲ್ಲಿ ಜನದಟ್ಟಣೆಯ ಓಡಾಟ ಎಲ್ಲಾ ಸಮಯದಲ್ಲೂ ಅಧಿಕವಾಗಿರುತ್ತದೆ. ಆದ ಕಾರಣ ದಯಮಾಡಿ ಸಂಬಂಧಪಟ್ಟ ಅಧಿಕಾರಿಗಳು ಈ ಸಮಸ್ಯೆಯನ್ನು ಬಗೆಹರಿಸಿ ಜನತೆಗೆ ಒಳಿತಾಗುವಂತೆ ಮಾಡಬೇಕಾಗಿ ಸಾರ್ವಜನಿಕರ ಪರವಾಗಿ ವಿನಂತಿಸುತ್ತಿದ್ದೇನೆ?.!

–ಅನಿಲ್‌ರಾಜ, ಸಹ ಶಿಕ್ಷಕರು, ಮೈಸೂರು



ಕಾರ್ಕಳ ಆನಂದ ಭಟ್
ಮೊ: 7676554198
ಫ್ಲಾಟ್ ನಂ. 204, ಮೂರನೇ ಮಹಡಿ, ಏಕದಂತ ಅಪಾರ್ಟ್‌ಮೆಂಟ್ಸ್, OPP H.P. ಗ್ಯಾಸ್ ಪೆರ್ವಾಜೆ ರಸ್ತೆ, ಕಾರ್ಕಳ– 574 104, ಉಡುಪಿ ಜಿಲ್ಲೆ

ದಿಕ್ಕುದೆಸೆ

ಬಿಜೆಪಿ, ಕಾಂಗ್ರೆಸ್‌ಗೆ ಪಾಠ ಕಲಿಸಿದ ಮತದಾರ!

ಕರ್ನಾಟಕದಲ್ಲಿ 2019ರ ಲೋಕಸಭಾ ಚುನಾವಣೆಯಲ್ಲಿ 25 ಸ್ಥಾನ ಗಳಿಸಿದ್ದ ಬಿಜೆಪಿ ಈ ಬಾರಿ ಎಂಟು ಸ್ಥಾನ ಕಳೆದುಕೊಂಡು 17ಕ್ಕೆ ಕುಸಿದಿದೆ. 2019ರಲ್ಲಿ ಕೇವಲ ಒಂದು ಸ್ಥಾನ ಗೆದ್ದು ತೀವ್ರ ಮುಖಭಂಗಕ್ಕೀಡಾದ ಕಾಂಗ್ರೆಸ್ ಈ ಬಾರಿ ಹೆಚ್ಚು ಸ್ಥಾನಗಳಿಸುವ ವಿಶ್ವಾಸದಿಂದ ಚುನಾವಣಾ ಕಣಕ್ಕೆ ಧುಮುಕಿತ್ತು. ಮುಖ್ಯಮಂತ್ರಿ ಸಹಿತ ರಾಜ್ಯದ ಎಲ್ಲ ನಾಯಕರು 15ರಿಂದ 20 ಸ್ಥಾನಗಳಲ್ಲಿ ವಿಜಯ ಸಾಧಿಸುವುದಾಗಿ ವಿಶ್ವಾಸದಿಂದ ಹೇಳಿಕೆ ನೀಡುತ್ತಿದ್ದರು. ಈ ವಿಶ್ವಾಸ ಸಕಾರಣವಾಗಿತ್ತು. 2023ರ ವಿಧಾನಸಭಾ ಚುನಾವಣೆಯಲ್ಲಿ 136 ಸ್ಥಾನದಲ್ಲಿ ವಿಜಯ ಸಾಧಿಸಿ ಭಾರಿ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿದ್ದ ಕಾಂಗ್ರೆಸ್ ಲೋಕಸಭೆಯಲ್ಲೂ ಗೆಲುವಿನ ಓಟ ಮುಂದುವರಿಯುವ ಪೂರ್ಣ ವಿಶ್ವಾಸದಲ್ಲಿತ್ತು. ಆದರೆ ನಿರೀಕ್ಷೆಗೆ ವಿರುದ್ಧವಾಗಿ ಕಾಂಗ್ರೆಸ್ 9ರಲ್ಲಿ ಗೆಲುವು ಸಂಪಾದಿಸಿದೆ. ಈ ಫಲಿತಾಂಶ ರಾಜ್ಯ ಕಾಂಗ್ರೆಸ್ ನಾಯಕರ ನಿದ್ದೆಗೆಡಿಸಿದೆ. ರಾಜ್ಯದ ಬಹುಪಾಲು ಮತದಾರರು ಪ್ರಧಾನಿ ಮೋದಿಯವರ ವರ್ಚಸ್ಸು, ಹಿಂದುತ್ವ, ರಾಷ್ಟ್ರವಾದಕ್ಕೆ ಮನ್ನಣೆ ನೀಡಿದರೂ, ಗಮನಾರ್ಹ ಪ್ರಮಾಣದಲ್ಲಿ ಮತದಾರರು ಕಾಂಗ್ರೆಸಿನ ಸಾಮಾಜಿಕ–ಆರ್ಥಿಕ ನ್ಯಾಯದ ಐದು ಗ್ಯಾರಂಟಿ ಯೋಜನೆಗಳಿಗೂ ಮನ್ನಣೆ ನೀಡಿರುವುದು ಈ ಚುನಾವಣೆಯ ಪ್ರಮುಖ ಅಂಶವಾಗಿದೆ.

ಪ್ರಧಾನಿ ಮೋದಿಯವರ ಅಭಿವೃದ್ಧಿ ಯೋಜನೆಗಳಾಗಲೀ ಅಥವಾ ಕಾಂಗ್ರೆಸಿನ ಗ್ಯಾರಂಟಿಗಳಾಗಲೀ ಚುನಾವಣೆಯಲ್ಲಿ ಗೆಲುವು ತರುವುದಿಲ್ಲ ಎಂಬ ಸಂಗತಿ ಈ ಚುನಾವಣೆ ಸಾಬೀತು ಗೊಳಿಸಿದೆ. ಇದರೊಂದಿಗೆ ವಿವಿಧ ಸಾಮಾಜಿಕ, ರಾಷ್ಟ್ರೀಯ, ಧಾರ್ಮಿಕ, ಸ್ಥಾನೀಯ, ವೈಯಕ್ತಿಕ ಮೊದಲಾದ ಸಂಕೀರ್ಣ ವಿಷಯ ಗಳು ಚುನಾವಣೆಗಳ ಮೇಲೆ ಪ್ರಭಾವ ಬೀರುತ್ತವೆ. ಮೋದಿಯವರ ವರ್ಚಸ್ಸಾಗಲೀ, ಖರ್ಗೆಯವರ ಭಾವನಾತ್ಮಕ ಮನವಿಯಾಗಲಿ ಎರಡೂ ರಾಷ್ಟ್ರೀಯ ಪಕ್ಷಗಳಿಗೆ ನಿರೀಕ್ಷಿತ ಲಾಭ ತರಲಿಲ್ಲ.

2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಭಾರಿ ಬಹುಮತ ನೀಡಿದ ಪಂಚ ಗ್ಯಾರಂಟಿ ಯೋಜನೆಗಳು ಸಮರ್ಪಕ ಅನುಷ್ಠಾನಗೊಂಡ ಹಿನ್ನೆಲೆಯಲ್ಲಿ ಈ ಬಾರಿಯ ಲೋಕಸಭಾ ಚುನಾವಣೆಗೆ ರಾಜ್ಯ ಕಾಂಗ್ರೆಸ್ ನಾಯಕತ್ವ ವಿಶ್ವಾಸದಿಂದಲೇ ತಯಾರಿ ನಡೆಸಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ರ ಜಂಟಿ ನಾಯಕತ್ವದಲ್ಲಿ ಕಾಂಗ್ರೆಸ್ ಚುನಾವಣಾ ಕಣಕ್ಕೆ ಇಳಿಯಿತು. ಈ ಇಬ್ಬರೂ ನಾಯಕರು ರಾಜ್ಯದ ಎಲ್ಲ ಕ್ಷೇತ್ರಗಳಿಗೆ ಎರಡೆರಡು ಬಾರಿ ಭೇಟಿ ನೀಡಿ, ಪ್ರಚಾರ ನಡೆಸಿದರು. ಜನರು ವ್ಯಕ್ತಪಡಿಸಿದ ಭಾರಿ ಬೆಂಬಲದಿಂದ ಕಾಂಗ್ರೆಸ್‌ಗೆ ಕನಿಷ್ಠ 20 ಸ್ಥಾನ ಬರುವುದೆಂದು ಕಾಂಗ್ರೆಸ್ ನಾಯಕರೇ ವಿಶ್ವಾಸದಿಂದ ಹೇಳುತ್ತಿದ್ದರು.

ಜೊತೆಗೆ ಕಾಂಗ್ರೆಸ್ ನಾಯಕರು ರಾಜ್ಯದ 25 ಬಿಜೆಪಿ ಸಂಸದರನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು. ಇವರು, ಕೇಂದ್ರದಿಂದ ಭಾರಿ ಪ್ರಮಾಣದಲ್ಲಿ ಅನುದಾನವಾಗಲೀ, ಯೋಜನೆಗಳಾಗಲೀ ರಾಜ್ಯಕ್ಕೆ ತರುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ. ರಾಜ್ಯದ ಪಾಲಿಗೆ ನ್ಯಾಯವಾಗಿ ಸಿಗಬೇಕಾದ ತೆರಿಗೆ ಪಾಲನ್ನು ತರುವಲ್ಲಿಯೂ ಸಂಸದರು ವಿಫಲರಾಗಿದ್ದಾರೆ. ಈ ಸಂಸದರಿಂದ ರಾಜ್ಯಕ್ಕೆ ದೊರೆತಿದ್ದು, ಖಾಲಿ ಚೆಂಬು ಎಂದು ಜನಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ಮನವರಿಕೆ ಮಾಡುವಲ್ಲಿ ಕಾಂಗ್ರೆಸ್ ಯಶಸ್ವಿಯಾಯಿತು. ಒಂದು ಹಂತದಲ್ಲಿ ಚೆಂಬಿನ ಜಾಹೀರಾತಿಗೆ ಪ್ರತಿಕ್ರಿಯಿಸಲಾಗದೆ ಬಿಜೆಪಿ ನಾಯಕರು ಆತಂಕಗೊಂಡಿದ್ದರು.

ತೀವ್ರವಾಗಿ ತಿಣುಕಾಡಿದ ನಂತರ ತಿರುಗೇಟಿನ ರೂಪದಲ್ಲಿ 60 ವರ್ಷಗಳ ಕಾಲ ಅಧಿಕಾರದಲ್ಲಿದ್ದರೂ ಶೌಚಾಲಯದಂತಹ ಕನಿಷ್ಠ ಸೌಲಭ್ಯವನ್ನು ಜನತೆಗೆ ನೀಡಿರಲಿಲ್ಲ. ಪ್ರಧಾನಿಯವರು ಈ ಮೂಲ ಸೌಲಭ್ಯ ನೀಡಿದ ನಂತರವೂ ಕಾಂಗ್ರೆಸ್ಸಿಗರು ಏಕೆ ಚೆಂಬು ಹಿಡಿದುಕೊಂಡು ಓಡಾಡುತ್ತಿದ್ದಾರೆ ಎಂದು ಬಿಜೆಪಿ ವ್ಯಂಗ್ಯವಾಗಿ ಪ್ರತಿಕ್ರಿಯಿಸಿತು. ಈ ಟೀಕೆಯಿಂದ ಕಾಂಗ್ರೆಸ್ ತೀವ್ರ ಮುಜುಗರಗೊಂಡಿತ್ತು. ಬಿಜೆಪಿಯು ದೇಶದ ಜನತೆಗೆ ಕಿಸಾನ್ ಸಮ್ಮಾನ್ ನಿಧಿ, ಆಯುಷ್ಮಾನ್ ಭಾರತ್, ಉಜ್ವಲಾದಂತಹ ಅನೇಕ ಜನ ಕಲ್ಯಾಣ ಯೋಜನೆಗಳಿಂದ ತುಂಬಿದ ಶುಭಸೂಚಕವಾದ ಕಲಶವನ್ನು ನೀಡಿದೆ ಎಂದು ತಿರುಗೇಟು ನೀಡುವುದರೊಂದಿಗೆ ಕಾಂಗ್ರೆಸ್ ಚೆಂಬಿನ ಪ್ರಚಾರ ನಿಲ್ಲಿಸಿತು. ಕೊನೆ ಹಂತದಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದಲ್ಲಿ ದೇಶದ ಸಂವಿಧಾನ ಬದಲಿಸಲಿದೆ. ದುರ್ಬಲ ವರ್ಗದವರಿಗಿರುವ ಮೀಸಲಾತಿ ಸೌಲಭ್ಯಗಳನ್ನು ಶಾಶ್ವತವಾಗಿ ರದ್ದುಪಡಿಸಲಿದೆ ಎಂದು ಕಾಂಗ್ರೆಸ್ ತೀವ್ರವಾಗಿ ಪ್ರಚಾರ ನಡೆಸಿತು. ಇದು ಜನಸಾಮಾನ್ಯರು ವಿಶೇಷವಾಗಿ ಪರಿಶಿಷ್ಟ ಜಾತಿ/ಪಂಗಡಗಳು, ದಲಿತರು ಕಾಂಗ್ರೆಸ್‌ನತ್ತ ವಾಲುವಂತೆ ಮಾಡಿತು. ಈ ವಿಚಾರ ರಾಜ್ಯದ ಎಲ್ಲ ಕ್ಷೇತ್ರಗಳಲ್ಲಿ ಬಿಜೆಪಿಗೆ ತಕ್ಕ ಮಟ್ಟಿಗೆ ಹೊಡೆತ ನೀಡಿತು. ಇದರೊಂದಿಗೆ 2019ರಲ್ಲಿ ಕಲಬುರಗಿ ಯಲ್ಲಿ ಸೋತ ಖರ್ಗೆಯವರು ಈ ಚುನಾವಣೆಯಲ್ಲಿ ಮತ ನೀಡ ದಿದ್ದರೂ ನಾನೇನು ಭಾವಿಸುವುದಿಲ್ಲ. ಕೊನೆ ಪಕ್ಷ ಮುಂದೆ ನನ್ನ ಸಮಾಧಿಗೆ ಒಂದು ಹಿಡಿ ಮಣ್ಣು ಹಾಕಲಾದರೂ ಬನ್ನಿ ಎಂಬ ಭಾವನಾತ್ಮಕ ಮನವಿ ವಿಶೇಷವಾಗಿ ಕಲ್ಯಾಣ ಕರ್ನಾಟಕದ ಪರಿಶಿಷ್ಟ ಜಾತಿ/ ಪಂಗಡಗಳಿಗೆ ಮೀಸಲಿದ್ದ ಬಳ್ಳಾರಿ, ಬೀದರ್, ರಾಯಚೂರು, ಕೊಪ್ಪಳ ಹಾಗೂ ಕಲಬುರಗಿ ಕ್ಷೇತ್ರಗಳಲ್ಲಿ ಕಾಂಗ್ರೆಸ್‌ಗೆ ಭಾರಿ ಗೆಲುವು ತಂದಿತು.



> ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಯೋಜನೆಗಳಾಗಲೀ ಅಥವಾ ಕಾಂಗ್ರೆಸಿನ ಹಣ ಹಂಚುವ ಗ್ಯಾರಂಟಿಗಳಾಗಲೀ ಚುನಾವಣೆಯಲ್ಲಿ ಗೆಲುವು ತರುವುದಿಲ್ಲ ಎಂಬ ಸಂಗತಿ ಈ ಚುನಾವಣೆ ಸಾಬೀತುಗೊಳಿಸಿದೆ. ಇದರೊಂದಿಗೆ ವಿವಿಧ ಸಾಮಾಜಿಕ, ರಾಷ್ಟ್ರೀಯ, ಧಾರ್ಮಿಕ, ಸ್ಥಾನೀಯ, ವೈಯಕ್ತಿಕ ಮೊದಲಾದ ಸಂಕೀರ್ಣ ವಿಷಯಗಳು ಚುನಾವಣೆಗಳ ಮೇಲೆ ಪ್ರಭಾವ ಬೀರುತ್ತವೆ. ಮೋದಿಯವರ ವರ್ಚಸ್ಸಾಗಲೀ, ಖರ್ಗೆಯವರ ಭಾವನಾತ್ಮಕ ಮನವಿಯಾಗಲಿ ಎರಡೂ ರಾಷ್ಟ್ರೀಯ ಪಕ್ಷಗಳಿಗೆ ನಿರೀಕ್ಷಿತ ಲಾಭ ತರಲಿಲ್ಲ.

ಇಲ್ಲಿ ಬಿಜೆಪಿ ಕೂಡ ವಾಲ್ಮೀಕಿ ನಿಗಮದಲ್ಲಾದ ನೂರಾರು ಕೋಟಿ ರೂಪಾಯಿಗಳ ಹಗರಣವನ್ನು ಮತದಾರರಿಗೆ ಮನವರಿಕೆ ಮಾಡುವಲ್ಲಿ ವಿಫಲವಾಯಿತು. ಉಳಿದಂತೆ ಹಳೇ ಮೈಸೂರು ಭಾಗದಲ್ಲಿ ಚಾಮರಾಜನಗರ, ಹಾಸನ, ಕಿತ್ತೂರು ಕರ್ನಾಟಕದ ಚಿಕ್ಕೋಡಿ ಹಾಗೂ ಮಧ್ಯ ಕರ್ನಾಟಕ ಭಾಗದ ದಾವಣಗೆರೆಯಲ್ಲಿ ಮಾತ್ರ ಕಾಂಗ್ರೆಸ್ ಗೆಲುವು ಸಾಧಿಸಿತು. ರಾಜಧಾನಿ ಬೆಂಗಳೂರು ಮಹಾನಗರದಲ್ಲಿ ನಾಲ್ಕೂ ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವಿನಿಂದ ರಾಜ್ಯ ಕಾಂಗ್ರೆಸ್ ನಾಯಕರು ತೀವ್ರ ಮುಖಭಂಗಗೊಂಡಿದ್ದಾರೆ. ಅದರಲ್ಲೂ ಡಿ.ಕೆ. ಸಹೋದರರ ಭದ್ರಕೋಟೆ ಎನಿಸಿದ ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಸಹೋದರ ಡಿ.ಕೆ. ಸುರೇಶರ ಸೋಲು ಡಿ.ಕೆ.ಶಿವಕುಮಾರರನ್ನು ಚಿಂತೆಗೀಡು ಮಾಡಿದೆ.

ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸಾಧಿಸಿದ್ದ ಭಾರಿ ಜಯವನ್ನು ಲೋಕಸಭಾ ಚುನಾವಣೆಯಲ್ಲೂ ಪುನರಾವರ್ತಿಸುವಲ್ಲಿ ಎಡವಿದ್ದು, ಸರಕಾರದ ನೈತಿಕ ಸ್ಥೈರ್ಯವನ್ನು ಕುಗ್ಗಿಸಿದೆ. ರಾಜ್ಯದಲ್ಲಿ ಹೆಚ್ಚಿನ ಅಪರಾಧ ಪ್ರಕರಣಗಳು ಸರ್ಕಾರಕ್ಕೆ ತಲೆ ನೋವುಂಟು ಮಾಡಿದೆ. ಗ್ಯಾರಂಟಿಗಳಿಗಾಗಿ ಯಾವುದೇ ಅಭಿವೃದ್ಧಿ ಯೋಜನೆಗಳನ್ನು ಆರಂಭಿಸದಿರುವುದು ಚುನಾವಣಾ ಫಲಿತಾಂಶದ ಮೇಲೆ ಪರಿಣಾಮ ಬೀರಿದೆ ಎನ್ನಲಾಗುತ್ತಿದೆ. ಗ್ಯಾರಂಟಿಗಳಿಗಾಗಿ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿಗೆ ಅನುದಾನಗಳನ್ನು ನೀಡದ ಕಾರಣ ಶಾಸಕರು ಪೂರ್ಣ ಪ್ರಮಾಣದಲ್ಲಿ ಚುನಾವಣಾ ಕಣಕ್ಕೆ ಇಳಿಯದಿರುವುದರಿಂದ ಕಾಂಗ್ರೆಸ್‌ಗೆ ಹಿನ್ನಡೆಯಾಯಿತು ಎಂಬ ಸುದ್ದಿಯೂ ಹರಿದಾಡುತ್ತಿದೆ. ದೇಶದ ಸಾಂವಿಧಾನಿಕ ಹುದ್ದೆಗಳಲ್ಲಿರುವ ರಾಷ್ಟ್ರಪತಿ, ಪ್ರಧಾನಿ, ವಿತ್ತ ಸಚಿವರನ್ನು ಏಕವಚನ ದಿಂದ ಸಂಬೋಧಿಸುವ ದರ್ಪವನ್ನು ತೋರುತ್ತಿದ್ದ ಮುಖ್ಯಮಂತ್ರಿಗಳು ಈ ಬಗ್ಗೆ ಪ್ರಶ್ನಿಸಿದರೆ ನಾನು ಗ್ರಾಮೀಣ ಪರಿಸರದಿಂದ ಬಂದವನು ಎಂದು ಉಡಾಫೆಯ ಉತ್ತರ ನೀಡುತ್ತಿದ್ದರು. ಆದರೆ ಸ್ವಪಕ್ಷದ ಅಧಿ ನಾಯಕಿ ಸೋನಿಯಾ, ವಯಸ್ಸು, ಅನುಭವದಲ್ಲಿ ಇವರಿಗಿಂತ ಕಿರಿಯ ರಾದ ರಾಹುಲ್, ಪ್ರಿಯಾಂಕ ಬಗ್ಗೆ ಬಹಳ ಎಚ್ಚರಿಕೆ ಹಾಗೂ ಗೌರವದ ಭಾಷೆ ಬಳಸುತ್ತಿದ್ದರು. ಈ ರೀತಿ ಮುಖ್ಯಮಂತ್ರಿಗಳು ಮಾಡುತ್ತಿದ್ದ, ರಾಜಕಾರಣವನ್ನು ಜನಸಾಮಾನ್ಯರು ತಿರಸ್ಕರಿಸಿದರು. ಮೋದಿ ವರ್ಚಸ್ಸಿನ ಮುಂದೆ ಗೆಲುವು ಕಷ್ಟಸಾಧ್ಯ ಎಂದು ಭಾವಿಸಿ ಕೆಲವು ಪ್ರಬಲ ನಾಯಕರು ಸ್ಪರ್ಧಿಸಲು ನಿರಾಕರಿಸಿದರು. ಈ ಎಲ್ಲ ಕಾರಣಗಳಿಂದ ಕಳಪೆ ಪ್ರದರ್ಶನ ನೀಡಿತು. ಆದರೂ 2019ರಲ್ಲಿ ಶೇ.31.38 ಮತ ಗಳಿಕೆಯೊಂದಿಗೆ ಕೇವಲ ಒಂದು ಸ್ಥಾನ ಪಡೆದ ಕಾಂಗ್ರೆಸಿಗೆ ಈ ಬಾರಿ ಶೇ.45.34 ಮತಗಳಿಕೆಯೊಂದಿಗೆ 9 ಸ್ಥಾನ ದೊರೆತಿರುವುದು ಸಮಾಧಾನ ತರುವ ಅಂಶವಾಗಿದೆ.

ಈ ಚುನಾವಣೆಯ ಫಲಿತಾಂಶಗಳ ಕುರಿತು ರಾಜ್ಯ ಬಿಜೆಪಿ ನಾಯಕರು ಗಂಭೀರವಾಗಿ ವಿಚಾರ ವಿಮರ್ಶೆ ನಡೆಸಬೇಕೆಂಬ ಎಚ್ಚರಿಕೆ ನೀಡಿದೆ. ವಿಜಯ ಗಳಿಸಿರುವ 17 ಕ್ಷೇತ್ರಗಳಲ್ಲಿ ಗೆಲುವಿನ ಅಂತರ ತೀವ್ರ ಕುಸಿದಿರುವ ಬಗ್ಗೆ ಪರಾಮರ್ಶೆ ನಡೆಸಬೇಕಾಗಿದೆ. ಪ್ರಧಾನಿ ಮೋದಿಯವರ ವರ್ಚಸ್ಸು ಮಾತ್ರವಲ್ಲ ಕ್ಷೇತ್ರಕ್ಕೆ ಅಭ್ಯರ್ಥಿಗಳ ಕೊಡುಗೆಗಳನ್ನು ಪರಿಗಣಿಸಿ ಮುಂದಿನ ಚುನಾವಣೆಗಳಲ್ಲಿ ಬಿಜೆಪಿಗೆ ಮತ ನೀಡಲಾಗುವುದೆಂದು ಮತದಾರರು ಸಂದೇಶಗಳನ್ನು ನೀಡಿದ್ದಾರೆ. ಇತ್ತೀಚಿನ ಕೆಲವು ಸಮಯದಿಂದ ಬಿಜೆಪಿಯ ಅನೇಕ ರಾಜ್ಯ ನಾಯಕರು ರಾಜಕೀಯವನ್ನು ಉದ್ಯಮ, ಉದ್ಯೋಗವಾಗಿ ಸ್ವೀಕರಿಸಿದಂತೆ ತೋರುತ್ತಿದೆ. ಈ ಬಾರಿ ಸಂಸತ್ತಿಗೆ ಆಯ್ಕೆಯಾಗಿ ಕೇಂದ್ರ ಮಂತ್ರಿಯಾಗಿರುವ ಓರ್ವ ಸಂಸದರು 'ನನಗೀಗ ಉದ್ಯೋಗ ದೊರೆತಿದೆ' ಎಂಬ ಹೇಳಿಕೆ ನೀಡಿದರು. ರಾಜಕೀಯವು ಉದ್ಯೋಗವಲ್ಲ. ಸೇವೆಯ ಮಾಧ್ಯಮವಾಗಿದೆ ಎಂಬ ಪಾಠವನ್ನು ಇಂತಹ ನಾಯಕರಿಗೆ ಬಿಜೆಪಿಯ ಕಾರ್ಯ ಕರ್ತರು ಕಲಿಸಬೇಕಾಗಿದೆ. ಪ್ರಧಾನಿ ಮೋದಿಯವರು ದೇಶಕ್ಕಾಗಿ ದಿನಕ್ಕೆ 18 ಗಂಟೆ ದುಡಿಯುತ್ತಿದ್ದಾರೆ. ಬಿಜೆಪಿ ಸಂಸದರು ತಮ್ಮ ಕ್ಷೇತ್ರಕ್ಕಾಗಿ ದಿನದಲ್ಲಿ ಒಂದೆರಡು ಗಂಟೆಗಳ ಕೆಲಸ ಮಾಡಿದಲ್ಲಿ ಇನ್ನೂ ಉತ್ತಮ ಫಲಿತಾಂಶ ಪಡೆಯುವ ಸಾಧ್ಯತೆ ಇತ್ತು.

ಬಿಜೆಪಿಯ ನಾಯಕರು ಹಿಂದುತ್ವವನ್ನು ಚುನಾವಣಾ ಗೆಲುವಿಗೆ ಮಾತ್ರ ಸೀಮಿತಗೊಳಿಸಿದ್ದಾರೆಂಬ ಭಾವನೆ ವ್ಯಾಪಕವಾಗಿದೆ. ಚುನಾವಣೆಗಳು ಸಮೀಪಿಸುತ್ತಿದ್ದಂತೆ ಹಿಂದುತ್ವದ ರಕ್ಷಕರಂತೆ ವರ್ತಿಸಿ ಇವರು ಚುನಾವಣೆಗಳು ಮುಕ್ತಾಯಗೊಂಡಂತೆ ಜಾತ್ಯಾತೀತ ರಾಗುವ ಅವಕಾಶವಾದಿ ಹಿಂದುತ್ವದ ಬಗ್ಗೆ ಹಿಂದು ಸಂಘಟನೆಗಳ ಕಾರ್ಯಕರ್ತರು ಆಕ್ರೋಶಗೊಂಡಿದ್ದರು. ಕೆ.ಜೆ.ಹಳ್ಳಿ, ಡಿ.ಜಿ.ಹಳ್ಳಿ ಗಲಭೆಗಳಿಗೆ ಸಂಬಂಧಿಸಿದಂತೆ ಅಪರಾಧಿಗಳಿಂದ ದಂಡ ವಸೂಲಿ ಮಾಡುತ್ತೇವೆ. ಬುಲ್ಡೋಜರ್ ಕೂಡ ಬಳಸಲು ಹಿಂಜರಿಯುವುದಿಲ್ಲ ಎಂದು ಬಿಜೆಪಿ ನಾಯಕರು ನೀಡಿದ ಹೇಳಿಕೆಗಳು ಕೆಲವೇ ದಿನಗಳಲ್ಲಿ ಉತ್ತರ ಪೌರುಷವೆಂದು ರಾಜ್ಯದ ಜನತೆಗೆ ಅರ್ಥವಾಗಿತ್ತು. ಶಿವಮೊಗ್ಗದಲ್ಲಿ ಗಲಭೆ ಸಂಭವಿಸಿದಾಗ ಮತೀಯ ಮೂಲಭೂತವಾದಿಗಳು ತಲವಾರ್ ಝಳಪಿಸಿದಾಗ ಬಿಜೆಪಿ ಸರ್ಕಾರ ಏನೂ ಕ್ರಮ ಕೈಗೊಳ್ಳದೆ ಕೈಕಟ್ಟಿ ಕುಳಿತಿತ್ತು. ಪ್ರವೀಣ್ ನೆಟ್ಟಾರು, ಹರ್ಷಿತ್ ಕೊಲೆ, ಹಿಜಾಬ್ ಪ್ರಕರಣಗಳು ಸಂಭವಿಸಿದಾಗ ಸರ್ಕಾರದಲ್ಲಿದ್ದ ಮಂತ್ರಿಗಳು ಒಂದೇ ಸ್ವರದಲ್ಲಿ ಕಠಿಣ ಕ್ರಮ... ಎಂದು ಕೋರಸ್‌ನಲ್ಲಿ ಭಜನೆ ಮಾಡಿದ್ದನ್ನು ಹೊರತು ಬೇರೇನು ಸಾಧಿಸಲಿಲ್ಲ. ನೂರಾರು ಹಿಂದು ಕಾರ್ಯಕರ್ತರ ಮೇಲಿದ್ದ ಮೊಕದ್ದಮೆಗಳನ್ನು ಹಿಂಪಡೆಯುವ ಎದೆಗಾರಿಕೆ ಇವರ ಸರ್ಕಾರ ತೋರಲಿಲ್ಲ. ಇಂತಹ ಅನೇಕ ಪ್ರಕರಣಗಳಲ್ಲಿ ಸರ್ಕಾರ ದಿವ್ಯ ನಿರ್ಲಕ್ಷ್ಯ ತೋರಿದ್ದು, ವಿಶೇಷ ವಾಗಿ ಸಂಘದ ನಿಷ್ಠಾವಂತ ಕಾರ್ಯಕರ್ತರೆಂದು ಹೇಳುತ್ತಿದ್ದ ಮಂತ್ರಿಗಳು ತೋರಿದ ನಿರ್ಲಕ್ಷ್ಯದಿಂದ ಹಿಂದು ಕಾರ್ಯಕರ್ತರು ತೀವ್ರ ಆಕ್ರೋಶಗೊಂಡಿದ್ದರು, ಹತಾಶರಾಗಿದ್ದರು. ಈ ಎಲ್ಲ ಅಂಶಗಳು ಬಿಜೆಪಿಗೆ ಪ್ರತಿಕೂಲ ಪರಿಣಾಮ ಉಂಟು ಮಾಡಿತು.

ಈ ಬಾರಿ ಬಿಜೆಪಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದಲ್ಲಿ ಸಂವಿಧಾನ ಬದಲಿಸಲಿದೆ. ಮೀಸಲಾತಿ ರದ್ದುಪಡಿಸಲಿದೆ ಎಂಬ ಕಾಂಗ್ರೆಸ್ ಅಪಪ್ರಚಾರಕ್ಕೆ ಪ್ರತ್ಯುತ್ತರ ನೀಡುವಲ್ಲಿ ಬಿಜೆಪಿ ನಾಯಕತ್ವ ವಿಫಲ ವಾಯಿತು. 60 ವರ್ಷ ದೇಶ ಆಳಿದ ಕಾಂಗ್ರೆಸ್ ಸಂವಿಧಾನಕ್ಕೆ ನಿರಂತರ ವಾಗಿ ಅಪಮಾನಿಸಿತ್ತು. ನೆಹರು 17 ಬಾರಿ, ಇಂದಿರಾಜಿ 28 ಬಾರಿ, ರಾಜೀವ್ ಗಾಂಧಿಯವರು 10 ಬಾರಿ ಹಾಗೂ ಡಾ.ಮನಮೋಹನ್ ಸಿಂಗ್‌ರ ಕಾಲದಲ್ಲಿ ಏಳು ಬಾರಿ ಸಂವಿಧಾನಕ್ಕೆ ತಿದ್ದುಪಡಿ ತಂದು ಬದಲಿಸಿದ್ದರು. ನೂರಕ್ಕೂ ಹೆಚ್ಚು ಬಾರಿ ಚುನಾಯಿತ ರಾಜ್ಯ ಸರ್ಕಾರಗಳನ್ನು ಸಂವಿಧಾನದ 356ನೇ ವಿಧಿಯನ್ನು ದುರುಪಯೋಗಿಸಿ ವಜಾ ಮಾಡಿತ್ತು. ಅದೇರೀತಿ ಸಂವಿಧಾನ ನಿರ್ಮಾತೃ ಡಾ.ಅಂಬೇಡ್ಕರ್‌ರನ್ನು ಕಾಂಗ್ರೆಸ್ ಸತತವಾಗಿ ಅಪಮಾನಿಸಿತ್ತು. ಅವರನ್ನು ಲೋಕಸಭೆ ಪ್ರವೇಶಿಸದಂತೆ ಸೋಲಿಸಿದರು. ಭಾರತ ರತ್ನವನ್ನು ಕಾಂಗ್ರೆಸ್ ಅವರಿಗೆ ನೀಡಲಿಲ್ಲ. ಆದರೆ ಪ್ರಧಾನಿ ಮೋದಿಯವರು ಅಧಿಕಾರಕ್ಕೆ ಬಂದ ನಂತರ ಡಾ.ಅಂಬೇಡ್ಕರ್‌ರ ಸಾಧನೆಯ ಐದು ಕೇಂದ್ರಗಳನ್ನು ಪಂಚತೀರ್ಥ ಕ್ಷೇತ್ರಗಳಾಗಿ ಅಭಿವೃದ್ಧಿಪಡಿಸಿದರು. ಯಾವುದೇ ವಿಪಕ್ಷಗಳ ಸರ್ಕಾರವನ್ನು ಇದುವರೆಗೆ ಪ್ರಧಾನಿ ಮೋದಿಯವರು ವಜಾಗೊಳಿ ಸಿಲ್ಲ. ಈ ವಿಚಾರಗಳನ್ನು ಜನರ ಮುಂದೆ ಬಿಜೆಪಿ ನಾಯಕರು ಸಮರ್ಪಕವಾಗಿ ಮಂಡಿಸಲಿಲ್ಲ. ವಾಲ್ಮೀಕಿ ನಿಗಮದಲ್ಲಾದ ಭಾರಿ ಪ್ರಮಾಣದ ಹಣ ವರ್ಗಾವಣೆಯ ಹಗರಣವನ್ನು ಸರಿಯಾಗಿ ತಿಳಿಸಿದಲ್ಲಿ ಪ್ರಾಯಶಃ ಕಲ್ಯಾಣ ಕರ್ನಾಟಕದ ಐದು ಸ್ಥಾನಗಳನ್ನು ಬಿಜೆಪಿ ಗೆಲ್ಲುವ ಸಾಧ್ಯತೆ ಇತ್ತು. ಕೊನೆಯದಾಗಿ 2019ರಲ್ಲಿ ಶೇ.51.38 ಮತ ಗಳಿಸಿದ್ದ ಬಿಜೆಪಿಗೆ ಈ ಬಾರಿ ಶೇ.46.04 ಮತ ದೊರೆತಿದ್ದು, ಶೇ.5ರಷ್ಟು ಮತ ಪ್ರಮಾಣ ಕುಸಿದಿದೆ. ಈ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಬಿಜೆಪಿ ಬಲಿಷ್ಠವಾಗಬೇಕಾದರೆ ಪಕ್ಷದ ಕಾರ್ಯಕರ್ತರು, ನಾಯಕರ ಚೇಲಾಗಳಾಗದೇ ಪಕ್ಷದ ಕಾರ್ಯಕರ್ತರಾಗಬೇಕಾಗಿದೆ. ನಾಯಕರ ಭಟ್ಟಂಗಿಗಳಾಗದೇ ದೇಶಭಕ್ತರಾಗಬೇಕಾಗಿದೆ.

18ನೇ ಲೋಕಸಭೆ ಸ್ಪೀಕರ್ ಓಂ ಬಿರ್ಲಾ

48 ವರ್ಷಗಳ ನಂತರ ಲೋಕಸಭಾಧ್ಯಕ್ಷ ಸ್ಥಾನಕ್ಕೆ ಚುನಾವಣೆ

ನವದೆಹಲಿ, ಜೂ.26– ಮೂರು ಬಾರಿ ಸಂಸದರಾಗಿದ್ದ ಬಿಜೆಪಿಯ ಓಂ ಬಿರ್ಲಾ ಅವರು 18ನೇ ಲೋಕಸಭೆಯ ಸ್ಪೀಕರ್ ಆಗಿ ಬುಧವಾರ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್‌ನ ಎಂಟು ಬಾರಿ ಸಂಸದರಾಗಿರುವ ಕೇರಳದ ಮಾವೇಲಿಕರ ಕೋಡಿಕುನ್ನಿಲ್ ಸುರೇಶ್ ಅವರನ್ನು ಸೋಲಿಸಿ ಸ್ಪೀಕರ್ ಆಗಿ ಮರು ಆಯ್ಕೆಗೊಂಡಿದ್ದಾರೆ.

ಆಡಳಿತಾರೂಢ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟವು ಉಪಸಭಾಪತಿ ಸ್ಥಾನವನ್ನು ನೀಡಲು ನಿರಾಕರಿಸುವ ಮೂಲಕ ವಿರೋಧ ಪಕ್ಷಗಳ ಹಕ್ಕನ್ನು ಕಸಿದುಕೊಂಡಿದೆ ಎಂದು ಆರೋಪಿಸಿದ ಹಿನ್ನೆಲೆಯಲ್ಲಿ 48 ವರ್ಷಗಳ ನಂತರ ಲೋಕಸಭಾಧ್ಯಕ್ಷ ಸ್ಥಾನಕ್ಕೆ ಇಂದು ಸ್ಪರ್ಧೆ ನಡೆಯಿತು.

ಓಂ ಬಿರ್ಲಾ ಅವರನ್ನು ಅಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡುವ ಪ್ರಸ್ತಾವನೆಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ಮಂಡಿಸಿದರು. ಹಂಗಾಮಿ ಸ್ಪೀಕರ್ ಅವರು ಧ್ವನಿ ಮತದ ಮೂಲಕ ಸಂಸದರ ಮತಗಳನ್ನು ಅಂಗೀಕರಿಸಿದರು.



ಬುಧವಾರ 18ನೇ ಲೋಕಸಭೆಯ ಸ್ಪೀಕರ್ ಆಗಿ ಆಯ್ಕೆಗೊಂಡ ಓಂ ಬಿರ್ಲಾ ಅವರನ್ನು ಪ್ರಧಾನಿ ಮೋದಿ, ವಿಪಕ್ಷ ನಾಯಕ ರಾಹುಲ್ ಗಾಂಧಿ ಅಭಿನಂದಿಸಿದರು.

ಓಂ ಬಿರ್ಲಾ ಅವರು ಎನ್‌ಡಿಎ ಮೈತ್ರಿ ಸರ್ಕಾರದಲ್ಲಿ ಎರಡನೇ ಬಾರಿಗೆ ಲೋಕಸಭಾಧ್ಯಕ್ಷರಾಗುತ್ತಿದ್ದು, ಅವರನ್ನು ಸ್ಪೀಕರ್ ಕುರ್ಚಿ ಬಳಿ ಪ್ರಧಾನ ಮಂತ್ರಿ ನರೇಂದ್ರ ಮೋದಿ, ವಿರೋಧ ಪಕ್ಷ ನಾಯಕ ರಾಹುಲ್ ಗಾಂಧಿ, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಕರೆದುಕೊಂಡು ಬಂದು ಗೌರವಿಸಿದರು. ಎರಡನೇ ಅವಧಿಗೆ ನೀವು

ಧ್ವನಿಮತ ಮೂಲಕ ಅಂಗೀಕಾರ

ಲೋಕಸಭಾಧ್ಯಕ್ಷರಾಗಿ ಆಯ್ಕೆಯಾಗುತ್ತಿರುವುದು ಸದನಕ್ಕೆ ಸಂದ ಗೌರವವಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು.

17ನೇ ಲೋಕಸಭೆಯ ಸ್ಪೀಕರ್ ಆಗಿ ಓಂ ಬಿರ್ಲಾ ಅವರ ಐದು ವರ್ಷಗಳ ಅನುಭವವು ಸದನವನ್ನು ಸರಿಯಾದ ದಿಕ್ಕಿನಲ್ಲಿ ನಡೆಸಲು ಮತ್ತು ಅದನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಸಹಾಯ ಮಾಡುತ್ತದೆ ಎಂಬ ಭರವಸೆಯನ್ನು ಪ್ರಧಾನಿ ವ್ಯಕ್ತಪಡಿಸಿದರು.

ಕೋಚಿಂಗ್ ಫ್ಯಾಕ್ಟರಿಗೆ ಹೆಸರುವಾಸಿಯಾಗಿರುವ ರಾಜಸ್ಥಾನದ ಕೋಟಾ ಕ್ಷೇತ್ರದಿಂದ ಸಂಸದರಾಗಿರುವ 61 ವರ್ಷದ ಓಂ ಬಿರ್ಲಾ ಅವರು ಮೂರನೇ ತಲೆಮಾರಿನ ಆರ್‌ಎಸ್‌ಎಸ್ ಕುಟುಂಬದಿಂದ ಬಂದವರು. ಅದಕ್ಕೂ ಮುನ್ನ ಅವರು ರಾಜಸ್ಥಾನ ವಿಧಾನಸಭೆಯಲ್ಲಿ ಶಾಸಕರಾಗಿದ್ದರು.

ಲೋಕಸಭೆಯಲ್ಲಿ ತುರ್ತು ಪರಿಸ್ಥಿತಿ ವಿರುದ್ಧ ನಿರ್ಣಯ

ಸ್ಪೀಕರ್ ವಿರುದ್ಧ ಕೆರಳಿದ ಕಾಂಗ್ರೆಸ್, ಕೋಲಾಹಲ

ನವದೆಹಲಿ: 18ನೇ ಲೋಕಸಭೆಯ ಸ್ಪೀಕರ್ ಆಗಿ ಅಧಿಕಾರ ಸ್ವೀಕರಿಸಿದ ಬಳಿಕ ಓಂ ಬಿರ್ಲಾ ಅವರು ತುರ್ತು ಪರಿಸ್ಥಿತಿಯ ವಿರುದ್ಧದ ನಿರ್ಣಯವನ್ನು ಓದಿದ್ದು, ಕಾಂಗ್ರೆಸ್ ಸದಸ್ಯರನ್ನು ಕೆರಳಿಸಿತು. ತಮ್ಮ ಆಸನಗಳಿಂದ ಎದ್ದು ಸದನದ ಬಾವಿಗಿಳಿದ ಕಾಂಗ್ರೆಸ್ ಸದಸ್ಯರು ಪ್ರತಿಭಟನೆ ನಡೆಸಿ, ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಸದನ ದಲ್ಲಿ ಕೋಲಾಹಲ ಉಂಟಾಯಿತು. ನಿರ್ಣಯವನ್ನು ಪ್ರಧಾನಿ ಮೋದಿ ಸೇರಿದಂತೆ ಬಿಜೆಪಿ ಸದಸ್ಯರು ಸ್ವಾಗತಿಸಿದರು.

1975ರ ಜೂನ್ 26ರಂದು ಈ ದೇಶದ ಜನರು ತುರ್ತುಪರಿಸ್ಥಿತಿಯ ಕ್ರೂರ ವಾಸ್ತವತೆಗೆ ತೆರೆದುಕೊಂಡರು. ಪ್ರಧಾನಿಯಾಗಿದ್ದ ಇಂದಿರಾ ಗಾಂಧಿಯವರು ಹೇರಿದ್ದ ತುರ್ತು ಪರಿಸ್ಥಿತಿ ಸಂವಿಧಾನದ ಮೇಲಿನ ದಾಳಿಯಾಗಿತ್ತು. ಅಂದಿನ ಕಾಂಗ್ರೆಸ್ ಸರ್ಕಾರ ವಿರೋಧ ಪಕ್ಷಗಳ ಸದಸ್ಯರನ್ನು ಜೈಲಿಗೆ ಹಾಕಿತ್ತು. ಮಾಧ್ಯಮಗಳ ಮೇಲೆ ಹಲವು ನಿರ್ಬಂಧಗಳನ್ನು ಹೇರಿತ್ತು ಮತ್ತು ನ್ಯಾಯಾಂಗದ ಸ್ವಾಯತ್ತತೆಯನ್ನೂ ಕಸಿದುಕೊಂಡಿತ್ತು ಎಂದು ಓಂ ಬಿರ್ಲಾ ನಿರ್ಣಯವನ್ನು ಓದುತ್ತಾ ಹೇಳಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 27 ಗುರುವಾರ 2024

₹4

ಸಂಪುಟ: 45 | ಸಂಚಿಕೆ: 72 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23

ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com

ಜಾಹೀರಾತು: ad@mysurumithra.com, website: www.mysurumithra.com

ದೇಶ - ವಿದೇಶ

ಪುಣೆಯಲ್ಲಿ ಝಿಕಾ ವೈರಸ್ ಪತ್ತೆ



ಪುಣೆ, ಜೂ.26– ದೇಶದೆಲ್ಲೆಡೆ ಇದೀಗ ಮಳೆಗಾಲ ಆರಂಭವಾಗಿದ್ದು, ಕರ್ನಾಟಕದ ಕೆಲ ಜಿಲ್ಲೆಗಳಲ್ಲಿ ಬೆಂಬಿಡದೆ ಸುರಿಯುತ್ತಿದೆ. ಮುಂಗಾರು ಮಳೆ ಆರಂಭದಲ್ಲೇ ಜನರು ಡೆಂಗ್ಯೂ, ಮಲೇರಿಯಾ, ಟೈಫಾಯಿಡ್ ಹೀಗೆ ಅನೇಕ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದಾರೆ. ಇದೀಗ ಪುಣೆಯಲ್ಲಿ ಮೊದಲ ಬಾರಿಗೆ 46 ವರ್ಷದ ವೈದ್ಯರು ಮತ್ತು ಅವರ 13 ವರ್ಷದ ಮಗಳಿಗೆ ಝಿಕಾ ರೋಗ ಲಕ್ಷಣಗಳು ಇರುವುದು ಪತ್ತೆಯಾಗಿದ್ದು, ಸದ್ಯ ಇಬ್ಬರನ್ನೂ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಇಬ್ಬರಲ್ಲೂ ಜ್ವರ ಮತ್ತು ರೋಗದ ಲಕ್ಷಣಗಳನ್ನು ಕಂಡುಕೊಂಡ ಡಾಕ್ಟರ್ ತಕ್ಷಣ ರಕ್ತಪರೀಕ್ಷೆಗೆ ಒಳಪಡಿಸಿದರು. ಈ ವೇಳೆ ಝಿಕಾ ವೈರಸ್ ಇರುವುದಾಗಿ ವೈದ್ಯರು ದೃಢಪಡಿಸಿದ್ದಾರೆ. ಇನ್ನು ಇವರ ಜೊತೆ ನಿತ್ಯ ಸಂಪರ್ಕದಲ್ಲಿದ್ದವರನ್ನೂ ಸಹ ಟೆಸ್ಟ್ ಮಾಡಲಾಗಿದ್ದು, ಅದೃಷ್ಟವಶಾತ್ ಬೇರೆ ಯಾರಲ್ಲೂ ವೈರಸ್ ಪತ್ತೆಯಾಗಿಲ್ಲ ಎಂದು ವರದಿ ಹೇಳಿದೆ.

ಝಿಕಾ ವೈರಸ್ ರೋಗವು ಈಡಿಸ್ ಈಜಿಪ್ಟಿ ಸೊಳ್ಳೆಯಿಂದ ಬರುವಂತಹ ಒಂದು ರೀತಿಯ ಕಾಯಿಲೆಯಾಗಿದೆ. ಡೆಂಗ್ಯೂನಂತೆಯೇ ಈ ವೈರಸ್ ಕೂಡ ರೋಗಲಕ್ಷಣಗಳನ್ನು ಹೊಂದಿದೆ. ಈ ಕಾಯಿಲೆಯ ರೋಗಿಗಳಲ್ಲಿ ಜ್ವರ, ಕೀಲು ನೋವು, ದೇಹದ ನೋವು, ತಲೆನೋವು, ಕೆಂಪು ಕಣ್ಣುಗಳು, ವಾಂತಿ, ಅಸ್ವಸ್ಥತೆ, ಜ್ವರ, ದೇಹದ ದದ್ದು ಈ ರೀತಿಯ ರೋಗಲಕ್ಷಣಗಳು ಕಂಡು ಬರುತ್ತವೆ. ಈ ರೋಗವು ಸಾಂಕ್ರಾಮಿಕವಲ್ಲ, ಆದರೆ ಸೊಳ್ಳೆ ಉತ್ಪತ್ತಿಯಿಂದ ಹರಡುತ್ತವೆ. ಝಿಕಾ ವೈರಸ್ ಸೋಂಕಿತ ವ್ಯಕ್ತಿಗೆ ಕಚ್ಚಿದ ಸೊಳ್ಳೆ, ಇನ್ನೊಬ್ಬ ವ್ಯಕ್ತಿಯನ್ನು ಕಚ್ಚಿದರೆ ಆ ವೇಳೆ ವೈರಸ್ ಹರಡುವ ಸಾಧ್ಯತೆ ಹೆಚ್ಚಿರುತ್ತದೆ.

ತೆರಿಗೆ ಹೆಚ್ಚಳ ವಿರೋಧಿಸಿ ಕೀನ್ಯಾ ಸಂಸತ್‌ಗೆ ಬೆಂಕಿ



ನೈರೋಬಿ, ಜೂ.26– ನೂತನ ಹಣಕಾಸು ವಿಧೇಯಕದಲ್ಲಿ ಹೊಸ ರೂಪದ ಪರಿಸರ ತೆರಿಗೆ ವಿಧಿಸುವ ಪ್ರಸ್ತಾವನೆಯನ್ನು ವಿರೋಧಿಸಿ ಸಾವಿರಾರು ಜನರು ಕೀನ್ಯಾದ ಸಂಸತ್ ಭವನಕ್ಕೆ ಬೆಂಕಿ ಹಚ್ಚಿದ್ದಾರೆ. ಪ್ರತಿಭಟನಾಕಾರರು ಹಾಗೂ ಭದ್ರತಾ ಪಡೆಗಳ ನಡುವಿನ ಸಂಘರ್ಷದಲ್ಲಿ 10 ಮಂದಿ ಸಾವಿಗೀಡಾಗಿದ್ದಾರೆ. ನೈರೋಬಿಯಲ್ಲಿರುವ ಸಂಸತ್ ಭವನಕ್ಕೆ ದಾಂಗುಡಿ ಇಟ್ಟ ಪ್ರತಿಭಟನಾಕಾರರು ಆಡಳಿತ ಪಕ್ಷದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಹಣಕಾಸು ವಿಧೇಯಕದ ವಿರುದ್ಧ ಮತ ಚಲಾಯಿಸಿದ ಪ್ರತಿಪಕ್ಷ ಸದಸ್ಯರನ್ನು ಹೊರ ಹೋಗಲು ಬಿಟ್ಟ ಹೋರಾಟಗಾರರು, ಆಡಳಿತ ಪಕ್ಷದ ಸದಸ್ಯರನ್ನು ಕೂಡಿ ಹಾಕಿ ಕಟ್ಟಡಕ್ಕೆ ಬೆಂಕಿ ಹಚ್ಚಿದರು. ಒಳಗಿದ್ದ ಸಂಸದರು ಹಿಂಬಾಗಿಲ ಮೂಲಕ ಹೊರಕ್ಕೆ ಓಡಿ ಹೋಗಿ ಪ್ರಾಣ ಉಳಿಸಿಕೊಂಡಿದ್ದಾರೆ. ಪರಿಸ್ಥಿತಿ ನಿಯಂತ್ರಿಸಲು ಪೊಲೀಸರು ಹಾಗೂ ಭದ್ರತಾ ಪಡೆಗಳು ಪ್ರತಿಭಟನಾಕಾರರ ಮೇಲೆ ಗುಂಡಿನ ದಾಳಿ ನಡೆಸಿದ್ದು, ಭದ್ರತಾ ಪಡೆ ಹಾಗೂ ಹೋರಾಟಗಾರರ ನಡುವೆ ನಡೆದ ಸಂಘರ್ಷದಲ್ಲಿ 10 ಮಂದಿ ಮೃತಪಟ್ಟಿದ್ದಾರೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ದೇವಸ್ಥಾನದ ಗಂಟೆ ಮೇಲೆ ಶಾಸನ!



ಕಂಪ್ಲಿ, ಜೂ.26–ತಾಲೂಕಿನ ದೇವಸಮುದ್ರ ಗ್ರಾಮದ ಲಕ್ಷ್ಮೀ ನಾರಾಯಣ ದೇವಾಲಯದ ಗಂಟೆಯ ಮೇಲೆ 18ನೇ ಶತಮಾನದ ಶಾಸನವೊಂದು ಬೆಳಕಿಗೆ ಬಂದಿದೆ. ಗಂಗಾವತಿ ಸರಕಾರಿ ಪ್ರಥಮದರ್ಜೆ ಕಾಲೇಜಿನ ಇತಿಹಾಸ ಅಧ್ಯಾಪಕ ಡಾ.ಮಂಜಣ್ಣ ಈ ಶಾಸನವನ್ನು ಪತ್ತೆ ಹಚ್ಚಿದ್ದಾರೆ.

ದೇವಾಲಯದಲ್ಲಿ ಕಟ್ಟಿರುವ ತಾಮ್ರದ ಗಂಟೆಯ ಮೇಲೆ ಮೂರು ಸಾಲುಗಳಲ್ಲಿ ಶಾಸನ ಬರೆಯಲ್ಪಟ್ಟಿದೆ. 'ಶ್ರೀ ಲಕ್ಷ್ಮೀ ನಾರಾಯಣ ಸ್ವಸ್ತಿ ಶ್ರೀ ವಿಜಯಾಭ್ಯುದಯ ಶಾಲಿವಾಹನ ಶಕ ವರುಷಂಗಳ 1717ನೆಯ ಆನಂದ ನಾಮ ಸಂವತ್ಸರದ ಚೈತ್ರ ಶುದ್ಧ 1ರಲ್ಲು ದೇವಸಮುದ್ರದ ಸರ ದೇಸಾಯಿ ತಿಮ್ಮಯ್ಯನ ಮೊಮ್ಮಗ ಸೀನಜನು ಶ್ರೀ ಸ್ವಾಮಿಗೆ ಸಮರ್ಪಿಸಿದ ಘಂಟೆ' ಎಂದು ಬರೆಯಲಾಗಿದೆ.

ಶಾಸನದಲ್ಲಿ ಉಲ್ಲೇಖಿತ ಕಾಲ ಕ್ರಿ.ಶ. 1795ಕ್ಕೆ ಸರಿಹೊಂದುತ್ತದೆ. ಅಂದರೆ ಆ ಸಮಯದಲ್ಲಿ ದೇವಸಮುದ್ರದಲ್ಲಿ ಸರ್ ದೇಸಾಯಿಗಳು ಆಡಳಿತ ನಡೆಸುತ್ತಿದ್ದರೆಂದು ತಿಳಿದುಬರುತ್ತದೆ. ಮತ್ತು ವಿಜಯನಗರ ಕಾಲದ ಸದರಿ ದೇವಾಲಯವು ಕಾಲಕಾಲಕ್ಕೆ ಆಡಳಿತಗಾರರ ದೈವಭಕ್ತಿಗೆ ಒಳಗಾಗಿ ಪ್ರಭಾವಿಯಾಗಿತ್ತೆಂದು ತಿಳಿಯುತ್ತದೆ ಎಂದು ಡಾ.ಮಂಜಣ್ಣ ಅಭಿಪ್ರಾಯಪಟ್ಟಿದ್ದಾರೆ. ಶಾಸನ ಓದುವಲ್ಲಿ ಗಂಗಾವತಿ ಡಾ.ಶರಣಬಸಪ್ಪ ಕೋಲ್ಕಾರ ಹಾಗೂ ಶೋಧನೆಯಲ್ಲಿ ದೇವಸಮುದ್ರದ ವಿದ್ಯಾರ್ಥಿ ಕುರುಗೋಡು ಮಾರುತಿ ಸಹಕರಿಸಿದ್ದಾರೆಂದು ಅವರು ತಿಳಿಸಿದ್ದಾರೆ.

ಕೆಲಸ ಹುಡುಕಿಕೊಂಡು ಪಾಕಿಸ್ತಾನಕ್ಕೆ ಹೋದ ಭಾರತೀಯ ಶತ್ರು ಅಲ್ಲ




ಕೊಚ್ಚಿ, ಜೂ.26– ಭಾರತ ರಕ್ಷಣಾ ಕಾಯಿದೆ 1971ರ ನಿಯಮ 130 ಮತ್ತು 138ರ ಅಡಿಯಲ್ಲಿ ಒಬ್ಬ ವ್ಯಕ್ತಿಯು ಕೆಲಸ ಹುಡುಕಿಕೊಂಡು ಪಾಕಿಸ್ತಾನಕ್ಕೆ ಹೋಗಿರುವುದರಿಂದ ಶತ್ರುವಾಗುವುದಿಲ್ಲ ಎಂದು ಕೇರಳ ಹೈಕೋರ್ಟ್ ಹೇಳಿದೆ. ಶತ್ರುವಿನ ಜತೆ ವ್ಯವಹಾರ ಮಾಡದ ಹೊರತು ಈ ಕಾಯ್ದೆಯಡಿ ಶತ್ರುವಾಗುವುದಿಲ್ಲ ಎಂದೂ ಕೋರ್ಟ್ ಅಭಿಪ್ರಾಯಪಟ್ಟಿದೆ.

ಮಲಪ್ಪುರಂ ನಿವಾಸಿ ಉಮ್ಮರ್ ಕೋಯಾ ತಮ್ಮ ತಂದೆಯ ಆಸ್ತಿಯನ್ನು ಶತ್ರು ಆಸ್ತಿ ಕಾಯ್ದೆ 1968ರ ಅಡಿಯಲ್ಲಿ ಮುಟ್ಟುಗೋಲು ಹಾಕಿಕೊಳ್ಳುವಂತಿಲ್ಲ ಎಂದು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ವಾಸ್ತವವಾಗಿ, ಒಮರ್ ಕೋಯಾ ಅವರ ತಂದೆ ಕುಂಜಿ ಕೋಯಾ, 1953ರಲ್ಲಿ ಕೆಲಸ ಹುಡುಕಿಕೊಂಡು ಪಾಕಿಸ್ತಾನದ ಕರಾಚಿಗೆ ಹೋಗಿದ್ದರು. ಅಲ್ಲಿ ಕೆಲಕಾಲ ಹೋಟೆಲ್‌ನಲ್ಲಿ ಸಹಾಯಕರಾಗಿ ಕೆಲಸ ಮಾಡಿದರು. ನಂತರ ಭಾರತಕ್ಕೆ ಮರಳಿದರು. 1995ರಲ್ಲಿ ಮಲಪ್ಪುರಂನಲ್ಲಿ ಮೃತಪಟ್ಟಿದ್ದರು.

2022–23ರ ಆಸ್ತಿ ತೆರಿಗೆಯನ್ನು ಜಮಾ ಮಾಡಲು ಹೋದಾಗ ತೆರಿಗೆ ವಸೂಲಿ ಮಾಡಲು ನಿರಾಕರಿಸಿದ್ದರು. ಆಸ್ತಿ ಮೇಲೆ ತೆರಿಗೆ ಸಂಗ್ರಹಿಸದಂತೆ ತಹಸೀಲ್ದಾರ್ ಸೂಚನೆ ನೀಡಿದ್ದಾರೆ ಎಂದು ಗ್ರಾಮಾಧಿಕಾರಿಗೆ ತಿಳಿಸಿದರು. ಈ ಸೂಚನೆಯನ್ನು 'ಕಸ್ಟೋಡಿಯನ್ ಆಫ್ ಎನಿಮಿ ಪ್ರಾಪರ್ಟಿ ಆಫ್ ಇಂಡಿಯಾ' ಅಡಿಯಲ್ಲಿ ನೀಡಲಾಗಿತ್ತು. ಈ ಪ್ರಕರಣದಲ್ಲಿ ಕುಂಜಿ ಕೋಯಾ ಯಾವುದೇ ಶತ್ರುಗಳೊಂದಿಗೆ ವ್ಯಾಪಾರ ಮಾಡಿದರು ಅಥವಾ ಶತ್ರು ಸಂಸ್ಥೆಯೊಂದಿಗೆ ಯಾವುದೇ ವ್ಯವಹಾರ ಸಂಬಂಧವನ್ನು ಹೊಂದಿದ್ದರು ಎಂಬುದನ್ನು ಸಾಬೀತುಪಡಿಸಲು ಯಾವುದೇ ಪುರಾವೆಗಳಿಲ್ಲ. ಆದ್ದರಿಂದ, ನ್ಯಾಯಾಲಯವು ಭಾರತದ ಶತ್ರು ಆಸ್ತಿಯ ಕಸ್ಟೋಡಿಯನ್‌ನ ಪ್ರಕ್ರಿಯೆಗಳನ್ನು ರದ್ದುಗೊಳಿಸಿತು ಮತ್ತು ಅರ್ಜಿದಾರರಿಂದ ಆಸ್ತಿ ತೆರಿಗೆ ಸಂಗ್ರಹಿಸಲು ಕಂದಾಯ ಅಧಿಕಾರಿಗಳಿಗೆ ಸೂಚಿಸಿದೆ.

ದೇವರಿಂದಲೇ ತೆರಿಗೆ ಪಾವತಿ!



ಕೊಲ್ಲಂ, ಜೂ.26–ಮಹಾಭಾರತದ ದುರ್ಯೋಧನಿಗಾಗಿ ಕೇರಳದ ಕೊಲ್ಲಂ ಜಿಲ್ಲೆಯ ಪೊರುವಾಜಿಯಲ್ಲಿ ದೇವಾಲಯವಿದೆ. ಇಲ್ಲಿ ದುರ್ಯೋಧನ ದೇವರು ಎನ್ನುವುದು ಒಂದು ವೈಶಿಷ್ಟ್ಯವಾದರೆ, ದೇವರ ಹೆಸರಿನಲ್ಲಿ ಭೂ ಕಂದಾಯ ಪಾವತಿಯಾಗುವುದು ಮತ್ತೊಂದು ವೈಶಿಷ್ಟ್ಯ.

ಭೂ ಕಂದಾಯ ವ್ಯವಸ್ಥೆ ಜಾರಿಯಾದಾಗಿನಿಂದಲೂ ಈ ದೇವಾಲಯ ಈ ಪದ್ಧತಿಯನ್ನು ನಡೆಸಿಕೊಂಡು ಬಂದಿದೆ. ದುರ್ಯೋಧನನ ಹೆಸರಿನಲ್ಲಿ ತೆರಿಗೆ ಪಾವತಿಯು ಸ್ಥಳೀಯ ಸಮುದಾಯವು ತಮ್ಮ ದೇವತೆಯೊಂದಿಗೆ ಹೊಂದಿರುವ ಆಳವಾದ ಭಾವನಾತ್ಮಕ ಬಂಧವನ್ನು ಪ್ರತಿಬಿಂಬಿಸುತ್ತದೆ ಎಂದು ದೇವಾಲಯದ ಕಾರ್ಯದರ್ಶಿ ರಜನೀಶ್ ತಿಳಿಸಿದ್ದಾರೆ.

ಕಂದಾಯ ಪರಿಕಲ್ಪನೆಯನ್ನು ಪರಿಚಯಿಸಿದಾಗಿನಿಂದ ನಾವು ಭೂ ತೆರಿಗೆಯನ್ನು ಪಾವತಿಸುತ್ತಿದ್ದೇವೆ. ನಮ್ಮ ಭಾವನಾತ್ಮಕ ಬಾಂಧವ್ಯವನ್ನು ಪ್ರದರ್ಶಿಸುವುದನ್ನು ಹೊರತುಪಡಿಸಿ ದುರ್ಯೋಧನನ ಹೆಸರಿನಲ್ಲಿ ಹಾಗೆ ಮಾಡಲು ಯಾವುದೇ ನಿರ್ದಿಷ್ಟ ಕಾರಣವಿಲ್ಲ. ನಮ್ಮ ದೇವಾಲಯದಲ್ಲಿ, ದುರ್ಯೋಧನನನ್ನು ದೇವರು ಅಥವಾ ಭಗವಂತ ಎಂದು ಉಲ್ಲೇಖಿಸುವುದಿಲ್ಲ ಆದರೆ ಪ್ರೀತಿಯಿಂದ ಅಪ್ಪೂಪ್ಪನ್ (ಅಜ್ಜ) ಎಂದು ಕರೆಯುತ್ತಾರೆ. ಅದಕ್ಕಾಗಿಯೇ ಅವರ ಹೆಸರಿನಲ್ಲಿ ಐತಿಹಾಸಿಕವಾಗಿ ತೆರಿಗೆ ಪಾವತಿಸಲಾಗಿದೆ. ದಿನದ 24 ಗಂಟೆಗಳ ಕಾಲ ತೆರೆದಿರುವ ಈ ದೇವಾಲಯವು ಎಲ್ಲಾ ಜಾತಿ ಮತ್ತು ಧರ್ಮದ ಭಕ್ತರನ್ನು ಸ್ವಾಗತಿಸುತ್ತದೆ. ಅದರ ಪದ್ಧತಿಗಳು ವಿಶಿಷ್ಟವಾಗಿದೆ.

ಬಿಎಸ್‌ಎನ್‌ಎಲ್ ಪುನಶ್ಚೇತನಕ್ಕಾಗಿ ಹರಾಜು ಮೂಲಕ ಆಸ್ತಿ ಮಾರಾಟ!

BSNL

- ಮೈಸೂರು ಸೇರಿದಂತೆ ಹಲವೆಡೆ ಇರುವ ಭಾರೀ ಬೆಲೆ ಬಾಳುವ ಭೂಮಿ ಹರಾಜು
- ಬಂದ ಹಣದಲ್ಲಿ 4ಜಿ, 5ಜಿ ಸೇರಿದಂತೆ ಇನ್ನಿತರೆ ಅಭಿವೃದ್ಧಿ ಯೋಜನೆ ಉದ್ದೇಶ

ಮೈಸೂರು, ಜೂ.26–ದೇಶದ ಪ್ರತಿಷ್ಠಿತ ಬಿಎಸ್‌ಎನ್‌ಎಲ್ ಟೆಲಿಕಾಂ ಸಂಸ್ಥೆಯು ಖಾಸಗಿ ಟೆಲಿಕಾಂ ಕಂಪನಿಗಳೊಂದಿಗೆ ಸ್ಪರ್ಧಿಸುವಲ್ಲಿ ಸಂಪೂರ್ಣವಾಗಿ ವಿಫಲವಾಗಿದ್ದು, ಇದೀಗ ಕೆಲವು ಅಭಿವೃದ್ಧಿ ಯೋಜನೆಗಳನ್ನು ಕೈಗೆತ್ತಿಕೊಳ್ಳುವ ಸಲುವಾಗಿ ಮೈಸೂರು ನಗರದಲ್ಲಿರುವ ಕೋಟ್ಯಾಂತರ ರೂ. ಮೌಲ್ಯದ ಆಸ್ತಿಯನ್ನು ಹರಾಜು ಮೂಲಕ ಮಾರಾಟ ಮಾಡಲು ಮುಂದಾಗಿದೆ.

ಮೊದಲಿಗೆ ಕುವೆಂಪುನಗರ ವಿಶ್ವ ಮಾನವ ಜೋಡಿ ರಸ್ತೆಯಲ್ಲಿ ಜಗದಾಂಬ ಪೆಟ್ರೋಲ್ ಬಂಕ್ ಪಕ್ಕದಲ್ಲಿರುವ ಕೋಟ್ಯಾಂತರ ರೂ. ಮೌಲ್ಯದ 2400 ಚದರ ಮೀಟರ್ ಜಾಗವನ್ನು ಇ–ಹರಾಜು ಮೂಲಕ ಬಿಎಸ್‌ಎನ್‌ಎಲ್ ಮಾರಾಟ ಮಾಡಲು ಈಗಾಗಲೇ ಅಧಿಸೂಚನೆ ಹೊರಡಿಸಿದೆ.

ಮೈಸೂರಿನ ಜಯಲಕ್ಷ್ಮೀಪುರಂನಲ್ಲಿರುವ ಬಿಎಸ್‌ಎನ್‌ಎಲ್ ಕೇಂದ್ರದಲ್ಲಿ ಇಂದು ಸುದ್ದಿಗೋಷ್ಠಿ ನಡೆಸಿದ ಬಿಎಸ್‌ಎನ್‌ಎಲ್ ಟೆಲಿಕಾಂ ಕರ್ನಾಟಕ ವಲಯದ ಮುಖ್ಯ ಮಹಾಪ್ರಬಂಧಕ ಉಜ್ವಲ್ ಗುಲ್ಹಾನಿ ಅವರು ತಮ್ಮ ಸಂಸ್ಥೆ ಬೆಲೆ ಬಾಳುವ ಜಾಗಗಳನ್ನು ಮಾರಾಟ ಮಾಡಲು ಮುಂದಾಗಿರುವ ವಿಷಯವನ್ನು ಬಹಿರಂಗಪಡಿಸಿದರು. ಜಗದಾಂಬ ಪೆಟ್ರೋಲ್ ಬಂಕ್ ಬಳಿ ಇರುವ 2400 ಚ.ಮೀ. (25785 ಚದರ ಅಡಿ) ಜಾಗದ ಮೀಸಲು ಬೆಲೆಯನ್ನು ಬಿಎಸ್‌ಎನ್‌ಎಲ್ 21.51 ಕೋಟಿಗೆ ನಿಗದಿಪಡಿಸಿದೆ. ಇ–ಹರಾಜಿನಲ್ಲಿ ಭಾಗವಹಿಸುವವರು ಜುಲೈ 1ರಂದು ಮಧ್ಯಾಹ್ನ 3 ಗಂಟೆ ಒಳಗೆ ತಮ್ಮ ಬಿಡ್ ಸಲ್ಲಿಸಬಹುದು ಎಂದ ಅವರು, ಹರಾಜಿನಲ್ಲಿ ಭಾಗವಹಿಸುವವರು 1.06 ಕೋಟಿ ಇಎಂಡಿ ಪಾವತಿಸಬೇಕಾಗುತ್ತದೆ ಎಂದು ತಿಳಿಸಿದರು. ವಿವರಗಳಿಗಾಗಿ ಮೊಬೈಲ್ ಸಂಖ್ಯೆಗಳು 9449044779, 9483816096, 9443200026 ಅನ್ನು ಸಂಪರ್ಕಿಸಬಹುದು ಎಂದು ಹೇಳಿದ ಅವರು, https//www.mstcecommerce.com/auctionhome/propertysale/index.jsp ವೆಬ್‌ಸೈಟ್ ಮೂಲಕ ಹರಾಜಿನಲ್ಲಿ ಭಾಗವಹಿಸಬಹುದು ಎಂದು ಅವರು ಹೇಳಿದರು.



ಮೈಸೂರು ಜಯಲಕ್ಷ್ಮೀಪುರಂನಲ್ಲಿರುವ ಬಿಎಸ್‌ಎನ್‌ಎಲ್ ಮೈಸೂರು ಕೇಂದ್ರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬಿಎಸ್‌ಎನ್‌ಎಲ್ ಟೆಲಿಕಾಂ ಕರ್ನಾಟಕ ವಲಯದ ಮುಖ್ಯ ಮಹಾ ಪ್ರಬಂಧಕ ಉಜ್ವಲ್ ಗುಲ್ಹಾನಿ ಮಾತನಾಡಿದರು.

ಬಿಎಸ್‌ಎನ್‌ಎಲ್ ಮುಂದಿನ ದಿನಗಳಲ್ಲಿ ಮೈಸೂರು ನಗರದ ಜೆಎಸ್‌ಎಸ್ ಲೇಔಟ್, ಡಾ. ರಾಜ್ ಕುಮಾರ್ ಮುಖ್ಯ ರಸ್ತೆಯಲ್ಲಿರುವ ದೂರವಾಣಿ ವಿನಿಮಯ ಕೇಂದ್ರ, ದಟ್ಟಗಳ್ಳಿ 3ನೇ ಹಂತ ಕನಕದಾಸ ನಗರ ಬಿ–ಬ್ಲಾಕ್‌ನಲ್ಲಿರುವ ದೂರವಾಣಿ ವಿನಿಮಯ ಕೇಂದ್ರ, ಬೆಳವಾಡಿ, ಹೂಟಗಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ದೂರವಾಣಿ ವಿನಿಮಯ ಕೇಂದ್ರ, ಬನ್ನಿ ಮಂಟಪದಲ್ಲಿರುವ ದೂರವಾಣಿ ವಿನಿ ಮಯ ಕೇಂದ್ರ ಚಾಮುಂಡಿ ಬೆಟ್ಟದ ರಾಜೇಂದ್ರ ವಿಲಾಸ್ ಪ್ಯಾಲೇಸ್ ರಸ್ತೆಯಲ್ಲಿ ಮೈಕ್ರೋ ವೇವ್ ಸ್ಟೇಷನ್, ಮಡಿಕೇರಿಯಲ್ಲಿರುವ ಮೈಕ್ರೋವೇವ್ ಸ್ಟೇಷನ್ ಅನ್ನು ಮುಂದಿನ ದಿನಗಳಲ್ಲಿ ಹರಾಜು ಮಾಡಲಾಗುವುದು ಎಂದು ಅವರು ಹೇಳಿದರು.

ಆಸ್ತಿ ಮಾರಾಟ ಯಾಕೆ?: ಖಾಸಗಿ ಟೆಲಿಕಾಂ ಸಂಸ್ಥೆಗಳು ಈಗಾಗಲೇ 5ಜಿ ನೆಟ್‌ವರ್ಕ್ ಅನ್ನು ನೀಡುತ್ತಿದೆ. ವಿಚಿತ್ರವೆಂದರೆ ಸರ್ಕಾರಿ ಸ್ವಾಮ್ಯದ ಬಿಎಸ್‌ಎನ್‌ಎಲ್ 4ಜಿ ನೆಟ್‌ವರ್ಕ್ ಒದಗಿಸುವುದಕ್ಕಾಗಿಯೇ ತನ್ನ ಕೋಟ್ಯಾಂತರ ರೂ. ಮೌಲ್ಯದ ಆಸ್ತಿಗಳನ್ನು ಮಾರಾಟಕ್ಕಿಟ್ಟಿದೆ. ಬಿಎಸ್‌ಎನ್‌ಎಲ್ ಸ್ಟ್ಯಾಂಡ್–ಅಲೋನ್ ಮೇಕ್ ಇನ್ ಇಂಡಿಯಾ 4ಜಿ ನೆಟ್‌ವರ್ಕ್ ಅನ್ನು ಹೊರ ತರಲಿದ್ದು, ಮೆ॥ ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್ ಲಿಮಿಟೆಡ್ ಮೂಲಕ 4ಜಿ ನೆಟ್‌ವರ್ಕ್‌ನ ಸರಬರಾಜು ಮತ್ತು ಸ್ಥಾಪನೆ ಮಾಡಲಾಗುತ್ತಿದೆ. ನಂತರದ ದಿನಗಳಲ್ಲಿ ಅದೇ ನೆಟ್‌ವರ್ಕ್ ಅನ್ನು 5ಜಿಗೆ ಅಪ್‌ಗ್ರೇಡ್ ಮಾಡಬಹುದಾಗಿದೆ ಎಂದು ಉಜ್ವಲ್ ಗುಲಾನಿ ಹೇಳಿದರು.

ಮೈಸೂರು ಮತ್ತು ಚಾಮರಾಜ ನಗರ ಜಿಲ್ಲೆಗಳಲ್ಲಿ 337, ಕೊಡಗಿನಲ್ಲಿ 200, ಮಂಡ್ಯ ಜಿಲ್ಲೆಯಲ್ಲಿ 153 ಸೇರಿದಂತೆ ಮೈಸೂರು ವ್ಯಾಪಾರ ಕ್ಷೇತ್ರದಲ್ಲಿ ಒಟ್ಟು 690 4ಜಿ ಟವರ್‌ಗಳನ್ನು ಕಾರ್ಯಾರಂಭ ಮಾಡಲು ಬಿಎಸ್‌ಎನ್‌ಎಲ್ ಯೋಜಿಸಿದೆ ಎಂದರು.

ಬಿಎಸ್‌ಎನ್‌ಎಲ್ ಭಾರತ ಸರ್ಕಾರದ 4ಜಿ ಸ್ಯಾಚುರೇಷನ್ ಯೋಜನೆಯನ್ನು ಕೈಗೆತ್ತಿಕೊಂಡಿದ್ದು, ಇದರ ಮೇಲ್ವಿಚಾರಣೆಯನ್ನು ಪ್ರಧಾನಮಂತ್ರಿ ಕಾರ್ಯಾಲಯದಿಂದ ನಡೆಸಲಾಗುತ್ತಿದೆ ಈ ಯೋಜನೆಗೆ ಮೊದಲ ಹಂತದಲ್ಲಿ ಮೈಸೂರು, ಚಾಮರಾಜನಗರ, ಕೊಡಗು ಮತ್ತು ಮಂಡ್ಯ ಜಿಲ್ಲೆ ಗಳನ್ನು ಒಳಗೊಂಡಿರುವ ಗ್ರಾಮಾಂತರ ಭಾಗದಲ್ಲಿ 71 ಸ್ಥಳಗಳನ್ನು ಗುರುತಿಸಲಾಗಿದೆ ಎಂದು ಹೇಳಿದ ಅವರು, ಈ ಸ್ಥಳಗಳಲ್ಲಿ ಹಾಲಿ ಯಾವುದೇ ಖಾಸಗಿ ಟೆಲಿಕಾಂ ನೆಟ್‌ವರ್ಕ್ ಕವರೇಜ್ ಲಭ್ಯವಿಲ್ಲ ಎಂದು ಅವರು ತಿಳಿಸಿದರು. ಗೋಷ್ಠಿಯಲ್ಲಿ ಮಹಾ ಪ್ರಬಂಧಕ (ಎಲ್‌ಅಂಡ್‌ಬಿ) ದೀಪಕ್ ಕುಮಾರ್ ಶರ್ಮಾ, ಜಂಟಿ ಮಹಾ ಪ್ರಬಂಧಕ ಎಂಜಿನಿಯರ್ (ಸಿವಿಲ್) ಧರಂಬೀರ್ ಕುಮಾರ್, ಮುಖ್ಯ ಮಹಾ ಪ್ರಬಂಧಕ (ಬಿಡಬ್ಲ್ಯೂ) ಪರಮೇಶ್ವರಿ ದಯಾಳ್, ನವದೆಹಲಿಯ ಕಾರ್ಪೊರೇಟ್ ಕಚೇರಿಯ ವರಿಷ್ಠ ಮಹಾ ಪ್ರಬಂಧಕ ವಿಕಾಸ್ ಗುಪ್ತಾ ಉಪಸ್ಥಿತರಿದ್ದರು.

ಕಾರ್ಮಿಕ ಸಂಘಟನೆಗಳು ಬಿಎಸ್‌ಎನ್‌ಎಲ್ ಅನ್ನು ಖಾಸಗೀಕರಣ ಮಾಡಲಾಗುತ್ತಿದೆ ಎಂದು ಆರೋಪಿಸಿ ಕೆಲ ವರ್ಷಗಳಿಂದ ಪ್ರತಿಭಟನೆಗಳನ್ನು ನಡೆಸುತ್ತಿತ್ತು. ಖಾಸಗಿ ಟೆಲಿಕಾಂಗಳಿಗೆ ಪೈಪೋಟಿ ನಡೆಸಲು ಅನುವಾಗುವಂತೆ ಕೆಲವು ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಂಘಟನೆಗಳು ಆಗ್ರಹಿಸು ತ್ತಿತ್ತು. ಕೇಂದ್ರ ಸರ್ಕಾರವಂತೂ ಬಿಎಸ್‌ಎನ್‌ಎಲ್ ಅನ್ನು ಖಾಸಗೀಕರಣ ಮಾಡುವ ಆರೋಪವನ್ನು ತಳ್ಳಿ ಹಾಕುತ್ತಲೇ ಬರುತ್ತಿದೆ ವಿಪರ್ಯಾಸವೆಂದರೆ ಮೈಸೂರು ನಗರವೊಂದರಲ್ಲೇ ಕೆಲವು ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳುವ ಸಲುವಾಗಿ ಬಿಎಸ್‌ಎನ್‌ಎಲ್ ತನ್ನ ಕೋಟ್ಯಾಂತರ ರೂ. ಮೌಲ್ಯದ ಆಸ್ತಿ ಮಾರಾಟಕ್ಕೆ ಮುಂದಾಗಿದೆ.

ಹಿರಿಯ ನಾಗರಿಕರಿಗೆ ಸನ್ಮಾನ...



ಎಸ್‌ಬಿಎಂ ಮಂಜು ಅವರ ಹುಟ್ಟುಹಬ್ಬದ ಅಂಗವಾಗಿ ಗೋಕುಲಂನ ಸಾಂಸ್ಕೃತಿಕ ಭವನದಲ್ಲಿ ಎಸ್‌ಬಿಎಂ ಸ್ನೇಹ ಬಳಗದ ವತಿಯಿಂದ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಹಿರಿಯ ನಾಗರಿಕರಿಗೆ ಗೌರವ ಸಮರ್ಪಣೆ ಮಾಡಲಾಯಿತು. ಚಿತ್ರದಲ್ಲಿ ಅರ್ಜುನ್ ಗುರೂಜಿ, ಮೈಸೂರು ಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು, ಪಾಲಿಕೆ ಎಸ್‌ಇ ಕೆ.ಜೆ.ಸಿಂಧು, ಬಿಜೆಪಿ ಚಾಮರಾಜ ಕ್ಷೇತ್ರದ ಅಧ್ಯಕ್ಷ ದಿನೇಶ್‌ಗೌಡ, ಇಂಜಿನಿಯರ್ ಜಗದೀಶ್, ಮಹದೇವ್, ರಾಮಕೃಷ್ಣ, ಸತೀಶ್, ರಘು, ಕೃಷ್ಣಪ್ಪ, ಮೋಹನ್, ಹನುಮೇಗೌಡ ಇನ್ನಿತರರು ಉಪಸ್ಥಿತರಿದ್ದರು.

ಮಾದಕ ವಸ್ತು ಕುರಿತು ರೈಲು ನಿಲ್ದಾಣದಲ್ಲಿ ಜಾಗೃತಿ



ಮೈಸೂರು ರೈಲ್ವೆ ನಿಲ್ದಾಣದಲ್ಲಿ ರೈಲ್ವೆ ಪೊಲೀಸರು ಮಾದಕ ವಸ್ತುಗಳ ವಿರೋಧಿ ದಿನದ ಬಗ್ಗೆ ಪ್ರಯಾಣಿಕರಿಗೆ ಭಿತ್ತಿಪತ್ರ ವಿತರಿಸಿ, ಜಾಗೃತಿ ಮೂಡಿಸಿದರು.

ಮೈಸೂರು,ಜೂ.26(ಎಂಟಿವೈ)–ಮೈಸೂರಿನ ರೈಲ್ವೆ ನಿಲ್ದಾಣದಲ್ಲಿ ಬುಧವಾರ ರೈಲ್ವೆ ಪೊಲೀಸರು 'ಅಂತರ ರಾಷ್ಟ್ರೀಯ ಮಾದಕ ಪದಾರ್ಥಗಳ ದುರ್ಬಳಕೆ ಮತ್ತು ಅಕ್ರಮ ಸಾಗಣೆ ವಿರೋಧಿ ದಿನ'ದ ಅಂಗವಾಗಿ ಪ್ರಯಾಣಿಕರಿಗೆ ಜಾಗೃತಿ ಮೂಡಿಸಿದರು.

ಮೈಸೂರಿನ ರೈಲ್ವೆ ನಿಲ್ದಾಣದಲ್ಲಿ ವಿವಿಧೆಡೆ ತೆರಳಲು ಕಾದಿದ್ದ ಪ್ರಯಾಣಿಕರು ಹಾಗೂ ನಿಲ್ದಾಣದಲ್ಲಿ ನಿಂತಿದ್ದ ರೈಲುಗಳಲ್ಲಿ ಆಸೀನರಾಗಿದ್ದ ಪ್ರಯಾಣಿಕರಿಗೆ ಭಿತ್ತಿಪತ್ರ ವಿತರಿಸಿ ಮಾದಕ ವಸ್ತುಗಳ ಸೇವನೆ ಹಾಗೂ ಕಳ್ಳಸಾಗಾಣೆ ಕುರಿತಂತೆ ಜಾಗೃತಿ ಮೂಡಿಸಿದರು. ಅಲ್ಲದೆ, ಮಾದಕ ವಸ್ತುಗಳ ಸರಬರಾಜು ಮಾಡುವವರ ಬಗ್ಗೆ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡುವಂತೆ ಕೋರಿದರು.

ಜಾಗೃತಿ ಜಾಥಾ: ರೈಲ್ವೆ ನಿಲ್ದಾಣದಲ್ಲಿ ಜಾಗೃತಿ ಮೂಡಿಸಿದ ಬಳಿಕ ರೈಲ್ವೆ ನಿಲ್ದಾಣದಲ್ಲಿ ಪ್ರಯಾಣಿಕರ ಲಗೇಜ್ ಸಾಗಿಸುವ ಕೂಲಿ ಕಾರ್ಮಿಕರೊಂದಿಗೆ ರೈಲ್ವೆ ಮ್ಯೂಸಿಯಂನಿಂದ ಕೆ.ಆರ್.ಎಸ್ ರಸ್ತೆ, ಜೆಎಲ್‌ಬಿ ರಸ್ತೆ ಮೂಲಕ ರೈಲ್ವೆ ನಿಲ್ದಾಣದ ಮುಖ್ಯ ದ್ವಾರದವರೆಗೆ ಜಾಗೃತಿ ಜಾಥಾ ನಡೆಸಲಾಯಿತು. ಈ ವೇಳೆ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮ ಕುರಿತಂತೆ ಘೋಷಣಾ ಫಲಕ ಹಿಡಿದು ಸಾಗುವ ಮೂಲಕ ಜನರ ಗಮನ ಸೆಳೆದರು.



ರೈಲ್ವೆ ನಿಲ್ದಾಣದಲ್ಲಿ ಲಗೇಜ್ ಹೊರುವ ಕೂಲಿ ಕಾರ್ಮಿಕರೊಂದಿಗೆ ಜಾಗೃತಿ ಜಾಥಾ.

ಈ ಸಂದರ್ಭದಲ್ಲಿ ಮೈಸೂರು ರೈಲ್ವೆ ಪೊಲೀಸ್ ಇನ್ಸ್‌ಪೆಕ್ಟರ್ ಕೆ.ಎಂ.ಮಂಜು, ಸಬ್‌ಇನ್ಸ್‌ಪೆಕ್ಟರ್ ಸಿ.ಜಿ.ಮಹೇಶ್ ಸೇರಿದಂತೆ ಇನ್ನಿತರ ಸಿಬ್ಬಂದಿ ಉಪಸ್ಥಿತರಿದ್ದರು.

ಇಂಧನ, ಹಾಲಿನ ದರ ಏರಿಕೆ ಕೈಬಿಡಲು ಆಗ್ರಹಿಸಿ ಸಿಪಿಐ(ಎಂ) ಪ್ರತಿಭಟನೆ




ಮೈಸೂರಿನ ಗಾಂಧಿ ವೃತ್ತದಲ್ಲಿ ಬೆಲೆ ಏರಿಕೆ ವಿರೋಧಿಸಿ ಸಿಪಿಐ(ಎಂ) ಮುಖಂಡರು ಪ್ರತಿಭಟನೆ ನಡೆಸಿದರು.

ಮೈಸೂರು, ಜೂ.26(ಎಂಟಿವೈ)–ಇಂಧನ, ಹಾಲಿನ ಬೆಲೆ ಏರಿಕೆ ಹಿಂಪಡೆಯುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಭಾರತ ಕಮ್ಯುನಿಸ್ಟ್ ಪಕ್ಷ(ಮಾರ್ಕ್ಸ್‌ವಾದಿ)ದ ಮುಖಂಡರು ಪ್ರತಿಭಟನೆ ನಡೆಸಿದರು. ಮೈಸೂರಿನ ಮಹಾತ್ಮಗಾಂಧಿ ವೃತ್ತ ದಲ್ಲಿ ಬುಧವಾರ ಬೆಳಗ್ಗೆ ಪ್ರತಿಭಟನೆ ನಡೆಸಿದ ಸಿಪಿಐ(ಎಂ) ಮುಖಂಡರು ರಾಜ್ಯ ಸರ್ಕಾರ ಇಂಧನ ಬೆಲೆ, ಹಾಲಿನ ಬೆಲೆ ಹೆಚ್ಚಳ ಮಾಡಿದ್ದು, ಇದರಿಂದ ಜನ ಸಾಮಾನ್ಯರಿಗೆ ಹೊರೆಯಾಗಿ ಪರಿಣಮಿಸಿದೆ. ಇದರಿಂದ ಇಂಧನ ಮತ್ತು ಹಾಲಿನ ದರ ಕಡಿಮೆ ಮಾಡುವುದರೊಂದಿಗೆ ಬಸ್ ಪ್ರಯಾಣ ದರ, ಕುಡಿಯುವ ನೀರು ಹಾಗೂ ಕಸ ವಿಲೇವಾರಿ ದರ ಏರಿಕೆಗೆ ಸಲ್ಲಿಸಿರುವ ಪ್ರಸ್ತಾಪವನ್ನು ಹಿಂಪಡೆಯಬೇಕು. ನಗದೀಕರಣದ ಹೆಸರಿನಲ್ಲಿ ಸಾರ್ವಜನಿಕ ಭೂಮಿ ಮತ್ತಿತರೆ ಆಸ್ತಿಗಳ ಮಾರಾಟವನ್ನು ಕೈಬಿಡುವಂತೆ ಪ್ರತಿಭಟನಾಕಾರರು ಆಗ್ರಹಿಸಿದರು.

ಒಕ್ಕೂಟ ಸರ್ಕಾರದಿಂದ ಪಡೆಯಬೇಕಾದ ನ್ಯಾಯಯುತ ತೆರಿಗೆ ಪಾಲು ಮತ್ತು ತೆರಿಗೆ ಬಾಕಿ, ಬರ ಪರಿಹಾರದ ಬಾಕಿಯನ್ನು ಪಡೆಯಬೇಕು. ದೊಡ್ಡ ಬಂಡವಾಳದಾರರಿಗೆ ನೀಡುವ ಸಹಾಯ ಧನ ಕಡಿತ, ಶ್ರೀಮಂತರ ಮೇಲಿನ ತೆರಿಗೆ ವಸೂಲಿಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿನ ನೂರು ಕೋಟಿ ಹಗರಣ ವನ್ನು ನ್ಯಾಯಾಂಗ ತನಿಖೆ ನಡೆಸಬೇಕು. ಇತರೆ ಸಮುದಾಯಗಳ ಅಭಿವೃದ್ಧಿ ನಿಗಮಗಳಲ್ಲಿನ ಹಣಕಾಸು ನಿರ್ವಹಣೆ ಕುರಿತು ತನಿಖೆ ನಡೆಸಬೇಕು. ದುರ್ಬಲರಿಗೆ, ವಸತಿಹೀನರಿಗೆ ಮನೆ ನಿರ್ಮಿಸಲು ಪ್ರತಿ ತಾಲೂಕಿನಲ್ಲಿ ಕನಿಷ್ಠ 500 ಎಕರೆ ಜಮೀನು ಒದಗಿಸಬೇಕು. ದುರ್ಬಲರ ಪುನರ್ವಸತಿಗೆ ಗಣತಿ ಮಾಡಿ, ಎಲ್ಲರಿಗೂ ಆದ್ಯತೆ ಮೇಲೆ ನೆರವು ನೀಡಬೇಕು ಎಂದು ಒತ್ತಾಯಿಸಿದರು.

ಮೈಸೂರಲ್ಲಿ ನಾಳೆಯಿಂದ 'ದ ಜ್ಯುವೆಲರಿ ಶೋ'



ಮೈಸೂರು, ಜೂ.26–ಮೈಸೂರಿನ ರ‍್ಯಾಡಿಸನ್ ಬ್ಲೂ ಹೋಟೆಲ್‌ನಲ್ಲಿ ಜೂನ್ 28ರಿಂದ 30ರವರೆಗೆ 'ದ ಜ್ಯುವೆಲರಿ ಶೋ' ಪ್ರದರ್ಶನ ಮತ್ತು ಮಾರಾಟ ಉತ್ಸವ ನಡೆಯಲಿದೆ. ಈ ಉತ್ಸವವನ್ನು ಜೂ.28ರಂದು ಮಧ್ಯಾಹ್ನ 12.30ಕ್ಕೆ ನಟಿ ಆರಾಧನ ಅವರು ಉದ್ಘಾಟಿಸಲಿದ್ದಾರೆ. ಈ ಉತ್ಸವವನ್ನು ಗೋಲ್ಡನ್ ಕ್ರೀಪರ್ ಸಂಸ್ಥೆಯ ಬಿ.ಎನ್.ಜಗದೀಶ್ ಮತ್ತು ಹೇಮಲತಾ ಜಗದೀಶ್ ಆಯೋಜಿಸಿದ್ದಾರೆ. ಬೆಂಗಳೂರಿನ ಗಜರಾಜ್, ಎಂ.ಪಿ.ಜ್ಯುವೆಲರ್ಸ್, ದವನಂ, ಪಂಚಕೇಸರಿ, ಬದೇರ, ಪಿಎಂಜೆ, ಸಿಂಹ ಜ್ಯುವೆಲರ್ಸ್, ಶ್ರೀ ಕುಮಾರನ್ ತಂಗ ಮಾಳಿಗೈ, ಶ್ರೀ ಗಣೇಶ್ ಜೆವೆಲ್ಸ್, ವರಶ್ರೀ, ವಂಡರ್ ಡೈಮಂಡ್ಸ್, ರೂಪಂ ಸಿಲ್ವರ್, ಸ್ಯಾಂಚಿಸ್, ಮದನ್ ಜೆಮ್ಸ್, ರಾಜ್ ಡೈಮಂಡ್ಸ್ (ಮೈಸೂರು), ಡರ್ಲಾ ಗೋಲ್ಡ್ (ಮೈಸೂರು), ಸುನಿಲ್ ಜ್ಯುವೆಲರ್ಸ್ (ಜೈಪುರ) ಮುಂತಾದ ಆಭರಣ ಮಳಿಗೆಗಳು ಈ ಉತ್ಸವದಲ್ಲಿ ಭಾಗವಹಿಸುತ್ತಿದ್ದು, ಉತ್ಸವವು ಎಲ್ಲಾ ರೀತಿಯ ಗ್ರಾಹಕರಿಗೂ ತೃಪ್ತಿದಾಯಕವಾಗಿರುತ್ತದೆ ಎಂದು ಗೋಲ್ಡನ್ ಕ್ರೀಪರ್ ಸಂಸ್ಥೆ ತಿಳಿಸಿದೆ.



ನಟಿ ಆರಾಧನ

ಮಾನವ ಸರಪಳಿ ಮೂಲಕ ಮಾದಕ ವಸ್ತುಗಳ ಬಗ್ಗೆ ಜನ ಜಾಗೃತಿ

ಮೈಸೂರು, ಜೂ.26(ಎಂಟಿವೈ)–'ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಕಳ್ಳಸಾಗಾಣಿಕೆ' ವಿರುದ್ಧ ರಾಷ್ಟ್ರೀಯ ದಿನದ ಅಂಗವಾಗಿ ಮೈಸೂರು ಅರಮನೆಯ ಮುಂಭಾಗದ ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಮಾನವ ಸರಪಳಿ ನಡೆಸಿ, ಮಾದಕ ವಸ್ತುಗಳ ಸೇವನೆಯಿಂದ ದೂರ ಇರುವುದಾಗಿ ಪ್ರತಿಜ್ಞೆ ಸ್ವೀಕರಿಸಿದರು.

ಮಾದಕ ವಸ್ತುಗಳ ಸೇವನೆಯ ದುಶ್ಚಟಕ್ಕೆ ಯುವ ಹಾಗೂ ವಿದ್ಯಾರ್ಥಿ ಸಮೂಹ ಬಲಿಯಾಗುತ್ತಿರುವ ಹಿನ್ನೆಲೆಯಲ್ಲಿ ಜಾಗೃತಿ ಮೂಡಿಸಲು ಪುಷ್ಪಾಂಜಲಿ ಸೇವಾ ಸಂಸ್ಥೆ ಮತ್ತು ಅಗರ್ವಾಲ್ ಸಮಾಜ ಸೇರಿದಂತೆ ವಿವಿಧ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ವಿವಿಧ ಕಾಲೇಜುಗಳ ಎನ್‌ಸಿಸಿ ಕೆಡೆಟ್‌ಗಳು, ಮಹಾವೀರ ವಿದ್ಯಾಸಂಸ್ಥೆ, ಗೋಪಾಲಸ್ವಾಮಿ ಕಾಲೇಜು, ವಾಗ್ದೇವಿ ವಿದ್ಯಾಲಯ, ಗೀತಾ ಶಿಶು ಶಿಕ್ಷಣ ಸಂಸ್ಥೆ ಸೇರಿದಂತೆ ಇನ್ನಿತರ ಕಾಲೇಜುಗಳ ವಿದ್ಯಾರ್ಥಿಗಳು ಪಾಲ್ಗೊಂಡು ಚಾಮರಾಜ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ, ಮಾದಕ ವಸ್ತುಗಳ ದುಶ್ಚಟದಿಂದ ದೂರ ಇರುವುದಾಗಿ ಪ್ರತಿಜ್ಞೆ ಸ್ವೀಕರಿಸಿದರು.





ಮೈಸೂರು ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಾಲಯದ ಬಳಿ ಮಾದಕ ವಸ್ತು ವಿರೋಧಿ ದಿನದ ಅಂಗವಾಗಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸುತ್ತಿರುವುದು. ಮತ್ತೊಂದು ಚಿತ್ರದಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳನ್ನು ಕಾಣಬಹುದು.

ಇದೇ ವೇಳೆ ಅಂಕಣಕಾರ ಡಾ.ವಿ. ರಂಗನಾಥ್ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರಲ್ಲದೆ, ಇತ್ತೀಚಿನ ದಿನಗಳಲ್ಲಿ ಎಷ್ಟೇ ಜಾಗೃತಿ ಮೂಡಿಸುತ್ತಿದ್ದರೂ ಮಾದಕ ವಸ್ತುಗಳ ಸೇವನೆಗೆ ತುತ್ತಾಗುತ್ತಿರುವವರ ಸಂಖ್ಯೆ ಹೆಚ್ಚಾಗುತ್ತಲೇ ಇದೆ. ಯುವ ಜನರು ಮಾದಕ ವಸ್ತುಗಳ ಸೇವನೆ ದಾಸರಾಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿ ಸಮೂಹ ಮಾದಕ ವಸ್ತುಗಳ ಚಟದಿಂದ ದೂರ ಇರಬೇಕು ಎಂದು ಸಲಹೆ ನೀಡಿದರು.

ಅಗರ್‌ವಾಲ್ ಸಮಾಜದ ಮುಖ್ಯಸ್ಥ ಡಾ.ಎಸ್.ಕೆ.ಮಿತ್ತಲ್ ಮಾತನಾಡಿ, ಮಾದಕ ವಸ್ತುಗಳ ಸೇವನೆ ಬದುಕನ್ನೇ ನಾಶ ಮಾಡುತ್ತದೆ. ಕೆಲವರು, ವಿದ್ಯಾರ್ಥಿಗಳು, ಯುವಕರೇ ಮಾದಕ ವಸ್ತುಗಳ ಸೇವನೆಗೆ ಪ್ರೇರೇಪಿಸುತ್ತಾರೆ. ಇದನ್ನು ಗಂಭೀರವಾಗಿ ಪರಿಗಣಿಸಬೇಕು. ಮಾದಕ ವಸ್ತುಗಳ ಚಟಕ್ಕೆ ಬಲಿಯಾಗುತ್ತಿರುವವರನ್ನು ರಕ್ಷಣೆ ಮಾಡುವುದು ಎಲ್ಲರ ಕರ್ತವ್ಯ ಎಂದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಚೇತನ್ ಗಿರಿ ಮಹಾರಾಜ್ ಸ್ವಾಮೀಜಿ ವಹಿಸಿದ್ದರು. ಈ ಸಂದರ್ಭದಲ್ಲಿ ಎನ್‌ಸಿಸಿ ಗ್ರೂಪ್ ಕಮಾಂಡರ್ ಕರ್ನಲ್ ರೋಹಿತ್ ಠಾಕೂರ್, ಉಚ್ಚ ಶಿಕ್ಷಣಾಧಿಕಾರಿಗಳು ಅರುಣ್‌ಕುಮಾರ್, ಗೋಪಾಲಸ್ವಾಮಿ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ಮಂಜುನಾಥ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ದತ್ತಾತ್ರೇಯ ಸಿಂಧೆ, ನವೀನ ಗುಪ್ತ, ಹರಿಸಿಂಗ್ ಲಂಬ, ಅಜಯ್ ಶಾಸ್ತ್ರಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ


ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಜೂನ್ 27 ಗುರುವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 72 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಗಣ್ಯಾತಿ ಗಣ್ಯರ ಹನಿಟ್ರ್ಯಾಪ್ ಮೂಲಕ ಬ್ಲಾಕ್‌ಮೇಲ್ ದಂಧೆ

ಬೆಂಗಳೂರು ಸಿಸಿಬಿ ಪೊಲೀಸರಿಂದ ಇಬ್ಬರು ಖತರ್ನಾಕ್‌ಗಳ ಬಂಧನ

"ನನಗೆ ಹನಿಟ್ರ್ಯಾಪ್ ನಡೆದಿಲ್ಲ. ಗೌರವಯುತವಾಗಿ ಬದುಕುತ್ತಿರುವ ನನ್ನ ಪರಿಚಿತರನ್ನು ಹನಿಟ್ರ್ಯಾಪ್ ಮಾಡಿ ಬ್ಲಾಕ್‌ಮೇಲ್ ಮಾಡಲಾಗುತ್ತಿತ್ತು. ನನ್ನ ಕ್ಷೇತ್ರದಲ್ಲಿ ಇಂತಹ ಚಟುವಟಿಕೆಗಳು ನಡೆಯುವುದನ್ನು ತಡೆಯುವ ಸಲುವಾಗಿ ಪೊಲೀಸರಿಗೆ ದೂರು ನೀಡಿದ್ದೇನೆ. ನನ್ನ ಕ್ಷೇತ್ರದ 8ರಿಂದ 10 ಮಂದಿಗೆ ಹನಿಟ್ರ್ಯಾಪ್ ಮಾಡಲಾಗಿದೆ. ಅವರೆಲ್ಲಾ ನನ್ನ ಪರಿಚಿತರು. ಅವರಲ್ಲಿ



ಉದ್ಯಮಿಗಳು, ಡಾಕ್ಟರ್, ಎಂಜಿನಿಯರ್, ಪ್ರೊಫೆಸರ್‌ಗಳು ಬ್ಲಾಕ್‌ಮೇಲ್‌ಗೆ ಒಳಗಾಗಿದ್ದಾರೆ. ಹನಿಟ್ರ್ಯಾಪ್ ಮಾಡುತ್ತಿರುವವರು ಮೈಸೂರಿನವರಾದರೂ, ಇದುವರೆಗೂ ನಾನು ಅವರನ್ನು ನೋಡಿಲ್ಲ. ಅವರು ಯಾರು ಎಂಬುದು ಗೊತ್ತಿಲ್ಲ. ದೂರವಾಣಿ ಸಂಖ್ಯೆ ಮೂಲಕ ಇಬ್ಬರನ್ನು ಪೊಲೀಸರು ಬಂಧಿಸಿ ತನಿಖೆ ನಡೆಸುತ್ತಿದ್ದಾರೆ. ಮೈಸೂರು ಮಾತ್ರವಲ್ಲದೆ, ಬೆಂಗಳೂರಿನಲ್ಲೂ ಈ ಜಾಲ ಕೆಲಸ ಮಾಡುತ್ತಿರುವುದರಿಂದ ಬೆಂಗಳೂರಲ್ಲಿ ದೂರು ಸಲ್ಲಿಸಿದ್ದೇನೆ. – ಕೆ.ಹರೀಶ್‌ಗೌಡ, ಶಾಸಕ

■ ಮೈಸೂರು ಚಾಮರಾಜ ಕ್ಷೇತ್ರದ ಹಲವರ ಬ್ಲಾಕ್‌ಮೇಲ್ ■ ಶಾಸಕ ಹರೀಶ್‌ಗೌಡರಿಂದ ದೂರು

ಮೈಸೂರು, ಜೂ.26–ತಿರುಚಿದ ವೀಡಿಯೋಗಳನ್ನು ತೋರಿಸಿ ಪ್ರತಿಷ್ಠಿತ ಉದ್ಯಮಿಗಳನ್ನು ಗುರಿಯಾಗಿಸಿಕೊಂಡು ಹನಿಟ್ರ್ಯಾಪ್ ಮೂಲಕ ಬ್ಲಾಕ್‌ಮೇಲ್ ಮಾಡುತ್ತಿದ್ದ ಇಬ್ಬರನ್ನು ಬೆಂಗಳೂರಿನ ಸಿಸಿಬಿ ಪೊಲೀಸರು ಬಂಧಿಸಿದ್ದು, ಅವರಿಂದ ಒಂದು ಮೊಬೈಲ್ ಮತ್ತು ಪೆನ್‌ಡ್ರೈವ್ ವಶಪಡಿಸಿಕೊಂಡಿದ್ದಾರೆ.

ಬಂಧಿತರಲ್ಲಿ ಓರ್ವ ಈ ಹಿಂದೆ ಮೈಸೂರಿನಲ್ಲಿ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದು, ಈ ದಂಧೆಯಲ್ಲಿ ತೊಡಗಿಕೊಂಡಿದ್ದ ಮಹಿಳೆಯರನ್ನು ಬಳಸಿಕೊಂಡು ವೀಡಿಯೋ ಚಿತ್ರೀಕರಣ ಮಾಡಿಟ್ಟುಕೊಂಡಿದ್ದರು. ನಂತರ ಸದರಿ ವೀಡಿಯೋ ಬಳಸಿಕೊಂಡು ಪ್ರತಿಷ್ಠಿತ ಉದ್ಯಮಿಗಳನ್ನು ಗುರಿಯಾಗಿಸಿಕೊಂಡು, 'ನಮ್ಮ ಬಳಿ ನಿಮಗೆ ಸೇರಿದ ವೀಡಿಯೋ ತುಣುಕುಗಳು ಇವೆ. ಅದನ್ನು ಸಾಮಾಜಿಕ ಜಾಲ ತಾಣದಲ್ಲಿ ಹಾಕುವುದಾಗಿ ಬೆದರಿಸಿ ಹಣ ವಸೂಲಿ ಮಾಡಲು ಯತ್ನಿಸುತ್ತಿದ್ದರು ಎಂಬುದು ಪ್ರಾಥಮಿಕ ವಿಚಾರಣೆಯಿಂದ ತಿಳಿದು ಬಂದಿದ್ದು, ಈ ಕೃತ್ಯದಲ್ಲಿ ಇನ್ನೂ ಕೆಲ ವ್ಯಕ್ತಿಗಳು ಭಾಗಿಯಾಗಿದ್ದಾರೆ. ಅವರ ಪತ್ತೆಗಾಗಿ ತನಿಖೆ ಮುಂದುವರೆದಿದೆ ಎಂದು ಬೆಂಗಳೂರು ಸಿಸಿಬಿ ಪ್ರಕಟಣೆ ತಿಳಿಸಿದೆ. ಸಿಸಿಬಿ ಪೊಲೀಸರು ಸಂತೋಷ್ ಅಲಿಯಾಸ್ ಸುರೇಶ್ ರಾಜನ್ ಮತ್ತು ಪುಟ್ಟರಾಜು


ಸಂತೋಷ್


ಪುಟ್ಟರಾಜು

ಎಂಬುವರನ್ನು ಬಂಧಿಸಿದ್ದು, ನವೀನ್ ಹಾಗೂ ಇತರರಿಗಾಗಿ ಹುಡುಕಾಟ ನಡೆದಿದೆ. ವಿಶೇಷವೆಂದರೆ ಈ ಆರೋಪಿಗಳು ಮೈಸೂರಿನ ಚಾಮರಾಜ ಕ್ಷೇತ್ರಕ್ಕೆ ಒಳಪಟ್ಟ ಉದ್ಯಮಿಗಳು, ವೈದ್ಯರು, ಎಂಜಿನಿಯರ್‌ಗಳು, ಪ್ರೊಫೆಸರ್‌ಗಳನ್ನು ಬ್ಲಾಕ್‌ಮೇಲ್ ಮಾಡಿದ್ದಾರೆ. ಅಲ್ಲದೇ ಶಾಸಕ ಕೆ.ಹರೀಶ್ ಗೌಡರಿಗೂ ಬೆದರಿಕೆ ಹಾಕಿದ್ದಾರೆ. ಜೂ.10ರಂದು ಸ್ವತಃ ಹರೀಶ್‌ಗೌಡರೇ ನೀಡಿದ ದೂರಿನನ್ವಯ ಪೊಲೀಸರು ಇವರಿಬ್ಬರನ್ನು ಬಂಧಿಸಿದ್ದಾರೆ.

ವಿವರ: ಸಂತೋಷ್ ಎಂಬಾತ ತಾನು ರಿಯಲ್ ಎಸ್ಟೇಟ್ ಮತ್ತು ಕಾಂಟ್ರಾಕ್ಟ್ ಕೆಲಸ ಮಾಡಿಕೊಂಡಿರುವುದಾಗಿಯೂ, ನವೀನ್ ಎಂಬಾತ ತಾನು ವಕೀಲನಾಗಿದ್ದು, ಸಿವಿಲ್ ವ್ಯಾಜ್ಯಗಳನ್ನು ನಡೆಸುವುದಾಗಿ ತಿಳಿಸಿ 2019ರಲ್ಲಿ ಹರೀಶ್‌ಗೌಡರಿಗೆ ಪರಿಚಯವಾಗಿದ್ದರು. ನಂತರ ಈ ವ್ಯಕ್ತಿಗಳು ಈಗ ಶಾಸಕರು ಭಾಗವಹಿಸುವ ಖಾಸಗಿ ಕಾರ್ಯಕ್ರಮಗಳಿಗೆ ಅವರ ಹೆಸರನ್ನೇ ಹೇಳಿಕೊಂಡು ಕೆಲ ಮಹಿಳೆಯರೊಂದಿಗೆ ತೆರಳಿ, ಕಾರ್ಯಕ್ರಮಗಳಲ್ಲಿ ಭಾಗಿಯಾಗುವ ಪ್ರತಿಷ್ಠಿತ ವ್ಯಕ್ತಿಗಳೊಂದಿಗೆ ಮಹಿಳೆಯರೂ ಇರುವಂತೆ ಫೋಟೋ ಹಾಗೂ ವೀಡಿಯೋ ತೆಗೆದುಕೊಳ್ಳುತ್ತಿದ್ದರು. ಮಹಿಳೆಯರ ಮುಖಾಂತರವಾಗಿಯೇ ಪ್ರತಿಷ್ಠಿತರ ಮೊಬೈಲ್ ನಂಬರ್‌ಗಳನ್ನು ಪಡೆದುಕೊಂಡು ಮತ್ತೆ ಯಾವ ಖಾಸಗಿ ಕಾರ್ಯಕ್ರಮಗಳಿಗೆ ಹೋಗುತ್ತಾರೆ ಎಂಬುದನ್ನು ತಿಳಿದುಕೊಂಡು ಅಲ್ಲಿಗೂ ಕೂಡ ಹೋಗಿ, ಇದೇ ಕೆಲಸ ಮಾಡುತ್ತಿದ್ದರು. ನಂತರ ಪ್ರತಿಷ್ಠಿತ ವ್ಯಕ್ತಿಗಳು ಮಹಿಳೆಯರೊಂದಿಗೆ ಇರುವ ಫೋಟೋ ಹಾಗೂ ವೀಡಿಯೋ ತೋರಿಸಿ ಹಣಕ್ಕೆ ಬೇಡಿಕೆ ಇಡುತ್ತಿದ್ದರು. ಹಣ ಕೊಡದಿದ್ದರೆ ಕುಟುಂಬದವರಿಗೆ, ಸಂಬಂಧಿಕರಿಗೆ ವೀಡಿಯೋಗಳನ್ನು ರವಾನಿಸುವುದಾಗಿಯೂ, ಸಾಮಾಜಿಕ ಜಾಲ ತಾಣದಲ್ಲಿ ಅಪ್‌ಲೋಡ್ ಮಾಡುವುದಾಗಿಯೂ ಬೆದರಿಸಿ ಹಣ ವಸೂಲಿ ಮಾಡುತ್ತಿದ್ದರು ಎಂದು ಶಾಸಕ ಕೆ.ಹರೀಶ್‌ಗೌಡ ಸಿಸಿಬಿಗೆ ನೀಡಿದ ದೂರಿನಲ್ಲಿ ತಿಳಿಸಿದ್ದಾರೆ. ಇವರು ಹನಿಟ್ರ್ಯಾಪ್ ಮಾಡುತ್ತಿರುವ ಬಗ್ಗೆ ತಮಗೆ ತಿಳಿದು ಬಂದಿದ್ದು, ಇವರಿಬ್ಬರ ಬಳಿ ಅದಕ್ಕೆ ಆಕ್ಷೇಪ ವ್ಯಕ್ತಪಡಿಸಿ, ಪೊಲೀಸರಿಗೆ ದೂರು ಕೊಡುತ್ತೇನೆ ಎಂದು ಹೇಳಿದಾಗ ಅವರು ತಮಗೆ ಸಂಬಂಧಿಸಿದ ಕೆಲವು ಫೋಟೋಗಳನ್ನು ತೋರಿಸಿ ಹಣ ನೀಡುವಂತೆ ಕೇಳಿದರು. ಇಲ್ಲದಿದ್ದರೆ ಅವುಗಳನ್ನು ಸ್ನೇಹಿತರು ಹಾಗೂ ಕುಟುಂಬದವರಿಗೆ ತೋರಿಸಿ ಮಾನ–ಮರ್ಯಾದೆ ತೆಗೆಯುವುದಾಗಿಯೂ, ತಮ್ಮ ವ್ಯವಹಾರಕ್ಕೆ ತೊಂದರೆ ಕೊಡುವುದಾಗಿಯೂ ಬೆದರಿಸಿದ್ದಲ್ಲದೇ, ಪೊಲೀಸರಿಗೆ ದೂರು ಕೊಟ್ಟರೆ ಮಾನ–ಮರ್ಯಾದೆ ಹೋಗುವಂತೆ ಮಾಡುತ್ತೇವೆ. ಮತ್ತು ಯಾವುದೇ ಅನುಮಾನ ಬಾರದಂತೆ ಒಂದು ಗತಿ ಕಾಣಿಸುತ್ತೇವೆ. ಅಲ್ಲದೇ ನಮ್ಮ ಹೆಣ್ಣು ಮಕ್ಕಳ ಮುಖಾಂತರ ನಿಮ್ಮ ಮೇಲೆ ರೇಪ್ ಕೇಸ್ ಹಾಕಿಸುತ್ತೇವೆ ಎಂದು ಬೆದರಿಸಿದ್ದಾಗಿ ದೂರಿನಲ್ಲಿ ತಿಳಿಸಲಾಗಿದೆ. ಈ ದೂರನ್ನಾಧರಿಸಿ ಇಬ್ಬರನ್ನು ಬಂಧಿಸಿರುವ ಪೊಲೀಸರು ಉಳಿದವರಿಗಾಗಿ ಹುಡುಕಾಟ ನಡೆಸಿದ್ದಾರೆ.

ಸಿಎಂ ಸಿದ್ದರಾಮಯ್ಯ ದೆಹಲಿ ಯಾತ್ರೆ

ಕೆಪಿಸಿಸಿ ಅಧ್ಯಕ್ಷರ ಬದಲಾವಣೆ; ಸಚಿವರ ಖಾತೆ ಮರು ಹಂಚಿಕೆ; ಡಿಸಿಎಂ ಸ್ಥಾನಕ್ಕೆ ಹಲವರ ಡಿಮ್ಯಾಂಡ್ ಪ್ರಸ್ತಾಪ; ಕೇಂದ್ರದಲ್ಲಿ ನನೆಗುದಿಗೆ ಬಿದ್ದಿರುವ ಯೋಜನೆಗಳಿಗೆ ಅನುಮತಿ ಪಡೆಯುವುದು; ಕರ್ನಾಟಕ ಪ್ರತಿನಿಧಿಸುವ ಸಚಿವರು, ಸಂಸದರೊಂದಿಗೆ ಸಭೆ; ವಿಪಕ್ಷ ನಾಯಕ ರಾಹುಲ್ ಗಾಂಧಿಗೆ ಅಭಿನಂದನೆ

ಬೆಂಗಳೂರು, ಜೂ.26(ಕೆಎಂಶಿ)– ಪ್ರದೇಶ ಕಾಂಗ್ರೆಸ್ ಅಧ್ಯಕ್ಷರ ಬದಲಾವಣೆ, ಸಚಿವರ ಖಾತೆಗಳ ಮರು ಹಂಚಿಕೆ ಸೇರಿದಂತೆ ಕೆಲವು ರಾಜಕೀಯ ವಿಚಾರಗಳ ಕುರಿತು ವರಿಷ್ಠರ ಜೊತೆ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮೂರು ದಿನಗಳ ದೆಹಲಿ ಪ್ರವಾಸ ಕೈಗೊಳ್ಳುತ್ತಿದ್ದಾರೆ.

ಕೇಂದ್ರದ ಮುಂದೆ ಬಾಕಿ ಉಳಿದಿರುವ ರಾಜ್ಯದ ಯೋಜನೆಗಳಿಗೆ ಅನುಮತಿ



ಪಡೆಯುವುದು, ಕೇಂದ್ರ ಸಂಪುಟದಲ್ಲಿ ಕರ್ನಾಟಕವನ್ನು ಪ್ರತಿನಿಧಿಸುತ್ತಿರುವ ನೂತನ ಸಚಿವರುಗಳಿಗೆ ಅಭಿನಂದನೆ ಮತ್ತು ರಾಜ್ಯದ ಸಂಸದರೊಂದಿಗೆ ಚರ್ಚೆ ನಡೆಸಲು ಈ ಪ್ರವಾಸ ಕೈಗೊಂಡಿದ್ದಾರೆ. ದೆಹಲಿಯ ಲೀಲಾ ಪ್ಯಾಲೇಸ್ ಹೋಟೆಲ್‌ನಲ್ಲಿ ನಾಳೆ ಸಂಜೆ ಸಭೆ ನಡೆಯಲಿದ್ದು, ರಾಜ್ಯದ ಲೋಕಸಭಾ ಮತ್ತು ರಾಜ್ಯಸಭೆಯ ಎಲ್ಲ ಸದಸ್ಯರ ಜೊತೆ ಸಮಾಲೋಚನೆ

● 9ನೇ ಪುಟಕ್ಕೆ

ಡ್ರಗ್ಸ್ ಮುಕ್ತ ಕರ್ನಾಟಕ ಘೋಷಣೆ

ಬೆಂಗಳೂರು, ಜೂ.26(ಕೆಎಂಶಿ)– ರಾಜ್ಯ ಸರ್ಕಾರ ಡ್ರಗ್ಸ್ ಮುಕ್ತ ಕರ್ನಾಟಕ ನಿರ್ಮಾಣದ ಘೋಷಣೆ ಮಾಡಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ.


ಪರಮೇಶ್ವರ್

ಅಂತಾರಾಷ್ಟ್ರೀಯ ಮಾದಕ ವಸ್ತು ವ್ಯಸನ ಮತ್ತು ಮಾನವ ಕಳ್ಳ ಸಾಗಾಣಿಕೆ ವಿರೋಧಿ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಂಪೂರ್ಣವಾಗಿ ಡ್ರಗ್ಸ್ ಮಟ್ಟ ಹಾಕುವಲ್ಲಿ ಗೃಹ ಇಲಾಖೆ ಯುದ್ಧವನ್ನೇ ಸಾರಿದೆ ಎಂದರು. ರಾಜ್ಯದಲ್ಲಿ 40 ಕೋಟಿ ರೂ. ಮೌಲ್ಯದ ಡ್ರಗ್ಸ್ ನಾಶಪಡಿಸಲಾಗಿದೆ, 10 ಟನ್ ಗಾಂಜಾ ಸುಟ್ಟು ಹಾಕಲಾಗಿದೆ, ಇಷ್ಟೊಂದು ಪ್ರಮಾಣದ ಡ್ರಗ್ಸ್ ಯುವ ಜನರ ಕೈಸೇರಿದ್ದರೆ ಎಷ್ಟು ಕುಟುಂಬಗಳು ಹಾಳಾಗುತ್ತಿದ್ದವೋ ಎಂಬ ಆತಂಕ ವ್ಯಕ್ತಪಡಿಸಿದರು. ಪ್ರತಿಯೊಬ್ಬರು ಡ್ರಗ್ಸ್‌ನಿಂದ ದೂರ ಇರುತ್ತೇವೆ ಎಂದು ಸಂಕಲ್ಪ ಮಾಡಬೇಕು, ಐಟಿ ಕಂಪನಿಗಳು, ಕೈಗಾರಿಕೆಗಳು ಡ್ರಗ್ಸ್ ನಿಯಂತ್ರಣಕ್ಕೆ ಸಹಕರಿಸಬೇಕು.

ಕೊಲೆ ಪ್ರಕರಣಗಳನ್ನು ಪತ್ತೆ ಹಚ್ಚುವಾಗ 17 ರಿಂದ 20 ವರ್ಷದೊಳಗಿನವರು ಭಾಗಿಯಾಗುತ್ತಿರುವುದು ಬೆಳಕಿಗೆ ಬರುತ್ತಿದೆ. ತಪ್ಪಿತಸ್ಥರನ್ನು

● 9ನೇ ಪುಟಕ್ಕೆ

ಅತ್ಯಾಚಾರ ಪ್ರಕರಣ: ಪ್ರಜ್ವಲ್ ರೇವಣ್ಣ ಜಾಮೀನು ಅರ್ಜಿ ವಜಾ

ಬೆಂಗಳೂರು, ಜೂ.26– ಹಲವು ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಬಂಧನಕ್ಕೊಳಗಾಗಿರುವ ಹಾಸನ



ಜೆಡಿಎಸ್ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಜಾಮೀನು ಅರ್ಜಿಯನ್ನು ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಬುಧವಾರ ವಜಾಗೊಳಿಸಿದೆ.

ಹೊಳೆನರಸೀಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಅತ್ಯಾಚಾರ ಪ್ರಕರಣದಲ್ಲಿ ಜಾಮೀನು ಕೋರಿ ಪ್ರಜ್ವಲ್ ರೇವಣ್ಣ ಅವರು ಸಲ್ಲಿಸಿದ್ದ ಜಾಮೀನು ಅರ್ಜಿಯ ವಿಚಾರಣೆ ನಡೆಸಿದ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ನ್ಯಾಯಾಧೀಶ ಸಂತೋಷ್ ಗಜಾನನ ಭಟ್, ಆದೇಶವನ್ನು ಕಾಯ್ದಿರಿಸಿದ್ದರು. ಇಂದು ಜಾಮೀನು ಅರ್ಜಿ ವಜಾಗೊಳಿಸಿ ಆದೇಶ ಹೊರಡಿಸಿದ್ದಾರೆ. ವಿಶೇಷ ಕೋರ್ಟ್ ಜಾಮೀನು ಅರ್ಜಿ ವಜಾಗೊಳಿಸಿರುವುದರಿಂದ ಪ್ರಜ್ವಲ್ ರೇವಣ್ಣ ಈಗ ಹೈಕೋರ್ಟ್ ಮೊರೆ ಹೋಗುವುದು ಅನಿವಾರ್ಯವಾಗಿದೆ. ನ್ಯಾಯಾಂಗ ಬಂಧನದಲ್ಲಿರುವ ಪ್ರಜ್ವಲ್ ರೇವಣ್ಣ ಅವರನ್ನು ಮೂರನೇ ಪ್ರಕರಣದಲ್ಲಿ ಇಂದು ಎಸ್‌ಐಟಿ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದು,

● 9ನೇ ಪುಟಕ್ಕೆ

ಕೊಡಗಿನಲ್ಲಿ ಆರ್ದ್ರಾ ಮಳೆ ಅಬ್ಬರ

● ಭಾಗಮಂಡಲ ತ್ರಿವೇಣಿ ಸಂಗಮ ಬಹುತೇಕ ಭರ್ತಿ
● ಜಿಲ್ಲೆಯಲ್ಲಿ ಮಳೆಯಿಂದಾಗಿ ಸಣ್ಣಪುಟ್ಟ ಅನಾಹುತ ವರದಿ


ತಲಕಾವೇರಿ ವ್ಯಾಪ್ತಿಯಲ್ಲಿ ಭಾರಿ ಮಳೆಯಾಗುತ್ತಿರುವುದರಿಂದ ಭಾಗಮಂಡಲ ತ್ರಿವೇಣಿ ಸಂಗಮ ಬಹುತೇಕ ಭರ್ತಿಯಾಗಿರುವುದು.

ಮಡಿಕೇರಿ, ಜೂ.26–ಕೊಡಗು ಜಿಲ್ಲೆಯಲ್ಲಿ ಆರಿದ್ರ ಮಳೆ ಅಬ್ಬರ ಜೋರಾಗುತ್ತಿದ್ದು, ಮಡಿಕೇರಿ ನಗರ ಸಹಿತ ಸುತ್ತಮುತ್ತಲಿನ ಗ್ರಾಮಗಳಲ್ಲಿ ಭಾರಿ ಮಳೆಯಾಗಿದೆ. ಜೊತೆಗೆ ಸಣ್ಣಪುಟ್ಟ ಅನಾಹುತ ಸಂಭವಿಸಿದೆ.

ಭಾಗಮಂಡಲ, ತಲಕಾವೇರಿ ವ್ಯಾಪ್ತಿಯಲ್ಲಿ ಭಾರಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಭಾಗಮಂಡಲ ತ್ರಿವೇಣಿ ಸಂಗಮ ಬಹುತೇಕ ಭರ್ತಿಯಾಗಿದೆ. ಅಲ್ಲಿನ ಬಸವನಕಟ್ಟೆವರೆಗೆ ನೀರು ಆವರಿಸಿದೆ. ನಾಪೋಕ್ಲು ವ್ಯಾಪ್ತಿಯಲ್ಲಿ ಮಂಗಳವಾರ ಮತ್ತು ಬುಧವಾರ 5 ಇಂಚಿಗೂ ಅಧಿಕ ಮಳೆ ಸುರಿದಿದೆ. ಗಾಳಿ ಸಹಿತ ಮಳೆಯಿಂದ ಚೆಟ್ಟಳ್ಳಿ–ನೀರುಕೊಲ್ಲಿ ರಸ್ತೆಯಲ್ಲಿ ಬುಧವಾರ ಮರ ಬಿದ್ದು ಕೆಲಕಾಲ ವಾಹನ ಸಂಚಾರ ಸ್ಥಗಿತವಾಗಿತ್ತು. ಅರಣ್ಯ ಇಲಾಖೆ ಸಿಬ್ಬಂದಿ ಮರ ತೆರವುಗೊಳಿಸಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ನಾಪೋಕ್ಲು ಸೇರಿದಂತೆ ನೆಲಜಿ, ಕಕ್ಕಬ್ಬೆ, ಬಲ್ಲಮಾವಟಿ ಕೊಳಕೇರಿ, ಕೈಕಾಡು, ಬೇತು, ಕೊಟ್ಟಮುಡಿ,

● 9ನೇ ಪುಟಕ್ಕೆ

ಇಂದು ಶಾಲೆಗಳಿಗೆ ರಜೆ

ಮಡಿಕೇರಿ, ಪೊನ್ನಂಪೇಟೆ ಹಾಗೂ ವಿರಾಜಪೇಟೆ ತಾಲೂಕು ವ್ಯಾಪ್ತಿಯ ಹಲವೆಡೆ ಧಾರಾಕಾರವಾಗಿ ಮಳೆ ಸುರಿಯುತ್ತಿದ್ದು, ಮುಂಜಾಗ್ರತಾ ಕ್ರಮ ಹಾಗೂ ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಈ ಮೂರು ತಾಲೂಕಿನ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಗುರುವಾರ (ಜೂ.27) ಒಂದು ದಿನ ರಜೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಪ್ರಕಾಶ್ ಘೋಷಿಸಿದ್ದಾರೆ. ಭಾಗಮಂಡಲ, ನಾಪೋಕ್ಲು, ಪಡಿಯಾಣಿ, ಕೊಟ್ಟಮುಡಿ, ಕೊಣ್ಣಂಗೇರಿ, ಬಲಮುರಿ ಗ್ರಾಮ ಮತ್ತು ಕಾವೇರಿ ನದಿ ಪಾತ್ರದ ವ್ಯಾಪ್ತಿಯಲ್ಲಿ ಭಾರಿ ಮಳೆಯಾಗುತ್ತಿರುವುದರಿಂದ ನೀರಿನ ಪ್ರಮಾಣ ಗಣನೀಯ ಏರಿಕೆಯಾಗಲಿದೆ.

ನನ್ನ ಮೇಲಿನ ಜನರ ಪ್ರೀತಿ ಬಿಜೆಪಿ ಅರ್ಥ ಮಾಡಿಕೊಂಡಿಲ್ಲ

● ಪ್ರತಿಕೃತಿ ದಹನಕ್ಕೆ ಜಿಲ್ಲೆಯಲ್ಲಿ ಬಿಜೆಪಿ ವಿರುದ್ಧ ವ್ಯಾಪಕ ವಿರೋಧ ● ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಹೇಳಿಕೆ



ಸುದ್ದಿಗೋಷ್ಠಿಯಲ್ಲಿ ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿದರು. ವಿಧಾನಪರಿಷತ್ ಮಾಜಿ ಸದಸ್ಯರಾದ ಶಾಂತೆಯಂಡ ವೀಣಾ ಅಚ್ಚಯ್ಯ, ಚೆಪ್ಪುಡಿರ ಅರುಣ್ ಮಾಚಯ್ಯ, ಪಕ್ಷದ ಪ್ರಚಾರ ಸಮಿತಿಯ ಅಧ್ಯಕ್ಷ ಟಿ.ಪಿ.ರಮೇಶ್, ಕೆಪಿಸಿಸಿ ಸದಸ್ಯ ಬಿ.ಎಸ್.ರಮಾನಾಥ್ ಇದ್ದರು.

> ವಿರಾಜಪೇಟೆಯಲ್ಲಿ ಬಿಜೆಪಿ ನಡೆಸಿದ ಪ್ರತಿಭಟನೆ ಸಂದರ್ಭ ತನ್ನ ಪ್ರತಿಕೃತಿ ದಹಿಸಿರುವುದಕ್ಕೆ ಬೇಸರಗೊಂಡು ಜನರೇ ನನ್ನ ಪರ ಸ್ವಯಂಪ್ರೇರಿತರಾಗಿ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಬಿಜೆಪಿ ಮಾಡುತ್ತಿರುವ ಆರೋಪದಂತೆ ಪ್ರತಿಕ್ರಿಯೆ ನೀಡಲು ನಾನು ಯಾರಿಗೂ ಹೇಳಿಲ್ಲ ಬಿಜೆಪಿಗರ ಆರೋಪದಂತೆ ನಾನು ಹೇಳಿರುವುದು ಸಾಬೀತಾದರೆ ತನ್ನ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುತ್ತೇನೆ.
> –ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ, ವಿರಾಜಪೇಟೆ ಶಾಸಕ

ಮಡಿಕೇರಿ, ಜೂ.26–ಪಕ್ಷಾತೀತ ಮತ್ತು ಜಾತ್ಯತೀತವಾದ ನನ್ನ ನಿಲುವು ಹಾಗೂ ಕಾರ್ಯವೈಖರಿಯಿಂದ ಜನತೆ ತನ್ನಲ್ಲಿಟ್ಟಿರುವ ವಿಶ್ವಾಸ, ಪ್ರೀತಿಯನ್ನು ಬಿಜೆಪಿಗರು ಅರ್ಥೈಸಿಕೊಂಡಿಲ್ಲ. ಇದರಿಂದಾಗಿಯೇ ಬಿಜೆಪಿಯವರು ಪ್ರತಿಭಟನೆ ವೇಳೆ ನನ್ನ ಪ್ರತಿಕೃತಿ ದಹನ ಮಾಡಿದ್ದು, ಇದಕ್ಕೆ ಜಿಲ್ಲೆಯಲ್ಲಿ ವ್ಯಾಪಕ ವಿರೋಧಗಳು ವ್ಯಕ್ತವಾಗುತ್ತಿವೆ ಎಂದು ವಿರಾಜಪೇಟೆ ಶಾಸಕ ಎ.ಎಸ್.ಪೊನ್ನಣ್ಣ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶಾಸಕರು, ನಾನು ಅಭಿವೃದ್ಧಿ ಕಾರ್ಯಗಳ ಮೂಲಕ ಮತ್ತು ಸಮಸ್ಯೆಗಳಿಗೆ ಸ್ಪಂದಿಸುವ ರೀತಿಯಿಂದ ಜನರ ಪ್ರೀತಿ ಗಳಿಸಿದ್ದೇನೆ. ಪ್ರತಿಕೃತಿ ದಹಿಸಿದ ಬಿಜೆಪಿಯ ನಡೆಯನ್ನು ಇದೇ ಕಾರಣಕ್ಕೆ ಜನ ನನ್ನ ಮೇಲಿನ ಅಭಿಮಾನದಿಂದ ಕೊಡವರು ಮಾತ್ರವಲ್ಲದೆ ಅಲ್ಪಸಂಖ್ಯಾತರು, ಪರಿಶಿಷ್ಟರು, ಆದಿವಾಸಿಗಳು, ಸೇರಿದಂತೆ ಎಲ್ಲಾ ಸಮುದಾಯದವರು ಖಂಡಿಸುತ್ತಿದ್ದಾರೆ. ಇದನ್ನು ಬಿಜೆಪಿ ಅರ್ಥ ಮಾಡಿಕೊಂಡಿಲ್ಲ ಎಂದರು.

ಬಿಜೆಪಿ ಕಾರ್ಯ: ಇಂಧನ ಬೆಲೆ ಏರಿಕೆ ವಿರೋಧಿಸಿ ರಾಜ್ಯವ್ಯಾಪಿ ಬಿಜೆಪಿ ಪ್ರತಿಭಟನೆ ನಡೆಸಿದೆ. ಆದರೆ, ವಿರಾಜಪೇಟೆಯಲ್ಲಿ ಬಿಜೆಪಿಯ ಪ್ರತಿಭಟನೆ ಹಾದಿ ತಪ್ಪಿದೆ. ರಾಜ್ಯದ ಎಲ್ಲೂ ಪ್ರತಿಕೃತಿ ದಹಿಸಿಲ್ಲ, ಬದಲಿಗೆ ಸೈಕಲ್ ತುಳಿದಿದ್ದಾರೆ. ವಿರಾಜಪೇಟೆಯಲ್ಲಿ ಮಾತ್ರ ಪ್ರತಿಕೃತಿ ದಹಿಸಲಾಗಿದೆ. ಇದು ಸಹಜವಾಗಿಯೇ ಜನರ ಬೇಸರಕ್ಕೆ ಕಾರಣವಾಗಿದೆ ಎಂದು ಶಾಸಕ ಪೊನ್ನಣ್ಣ ಹೇಳಿದರು.

ಬಿಜೆಪಿಯವರ ಸರಣಿ ಹೇಳಿಕೆಗಳು ಆ ಪಕ್ಷದ ನಾಯಕರೇ ಹೇಳಿ ಮಾಡಿಸಿದ್ದಾರೆ. ಜನರು ನೀಡುತ್ತಿರುವ ಪ್ರತಿಕ್ರಿಯೆಯಲ್ಲಿ ನನ್ನ ಪಾತ್ರವಿಲ್ಲ. ಕೊಡವ ಪದ್ಧತಿಯಲ್ಲಿ ಶವಯಾತ್ರೆ ಮಾಡಿ, ಪ್ರತಿಕೃತಿ ದಹಿಸುವಂತಿಲ್ಲ. ಕೊಡವ ಸಮಾಜಗಳ ಒಕ್ಕೂಟ ಮತ್ತು ಅಖಿಲ ಕೊಡವ ಸಮಾಜದಲ್ಲಿರುವವರೆಲ್ಲರೂ ಕಾಂಗ್ರೆಸಿನವರಲ್ಲ. ಅವರವರ ಭಾವನೆಗೆ ತಕ್ಕ ಹಾಗೆ ನನ್ನ ಪರ ಧ್ವನಿ ಎತ್ತಿದ್ದಾರೆ. ಜನರ ಭಾವನೆಯನ್ನು ಬಿಜೆಪಿ ಅರ್ಥ ಮಾಡಿಕೊಳ್ಳಬೇಕಾಗಿತ್ತು ಎಂದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಭಟನೆಯನ್ನು ನಾನು ಸ್ವಾಗತಿಸುತ್ತೇನೆ. ಆದರೆ, ವಿರಾಜಪೇಟೆಯಲ್ಲಿ ಬಿಜೆಪಿ ಮಾಡಿದ ಪ್ರತಿಭಟನೆ ದಾರಿ ತಪ್ಪಿದೆ. ಹೊಸ ನಾಯಕತ್ವಕ್ಕೆ ಬೆಂಬಲ ನೀಡಿ ಎಂದು ಜನರ ಬಳಿ ಮನವಿ ಮಾಡಿ, ಪ್ರೀತಿ ಗಳಿಸಿ ಗೆದ್ದಿದ್ದೇನೆಯೇ ಹೊರತು, ಹಿಂಬಾಗಿಲಿನಿಂದ ಹೋಗಿಲ್ಲ. ಜಿಲ್ಲೆಯಲ್ಲಿ ಕೆಲ ಮಂದಿಯ ಬಳಿ ಮಾತ್ರ ನಾಯಕತ್ವ ಉಳಿಯಬೇಕೆ? ಜಿಲ್ಲೆಗೆ ಹೊಸ ನಾಯಕತ್ವ ಬರಬಾರದೆ? ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಹಸ್ತಕ್ಷೇಪ ಮಾಡಲಾರೆ: ನಾನು ದ್ವೇಷ ರಾಜಕಾರಣ ಮಾಡುವವನಲ್ಲ. ಹಿಂದೆ ಯಾರ್ಯಾರು ಯಾವೆಲ್ಲ ಹಗರಣ ಮಾಡಿದ್ದಾರೆ, ಭೂ ಕಬಳಿಕೆ ಮಾಡಿದ್ದಾರೆ, ಭ್ರಷ್ಟಾಚಾರ ಮಾಡಿದ್ದಾರೆ, ಜೈಲಿಗೆ ಹೋಗುವುದರಿಂದ ಹೇಗೆ ತಪ್ಪಿಸಿಕೊಂಡಿದ್ದಾರೆ ಎನ್ನುವುದು ನನಗೆ ತಿಳಿದಿದೆ. ನಾನು ಈ ಪ್ರಕರಣಗಳಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ. ಯಾರಿಗೂ ಕೆಡುಕು ಬಯಸುವವನು ನಾನಲ್ಲ, ಜನರೇ ಅವರಿಗೆ ಈಗಾಗಲೇ ರಾಜಕೀಯ ಶಿಕ್ಷೆ ನೀಡಿದ್ದಾರೆ ಎಂದು ಅನಿಸಿಕೆ ವ್ಯಕ್ತಪಡಿಸಿದರು.

ಪ್ರಕರಣ ಮುಕ್ತಾಯಗೊಳಿಸಿ: ವಿರಾಜಪೇಟೆಯಲ್ಲಿ ನಡೆದ ಪ್ರತಿಭಟನೆ ಸಂಬಂಧಿಸಿದಂತೆ ಸಾರ್ವಜನಿಕ ಹಿತಾಸಕ್ತಿಯಿಂದ ಪೊಲೀಸರೇ ಸ್ವಯಂ ಪ್ರೇರಣೆಯಿಂದ ಬಿಜೆಪಿಯವರ ವಿರುದ್ಧ ದೂರು ದಾಖಲಿಸಿಕೊಂಡಿದ್ದಾರೆ. ಇದರಲ್ಲಿ ನನ್ನ ಪಾತ್ರವಿಲ್ಲ ಎಂದು ಸ್ಪಷ್ಟಪಡಿಸಿದ ಪೊನ್ನಣ್ಣ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾನೂನಾತ್ಮಕವಾಗಿ ಈ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಮನವಿ ಮಾಡುವುದಾಗಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ, ವಿಧಾನಪರಿಷತ್ ಮಾಜಿ ಸದಸ್ಯರಾದ ಶಾಂತೆಯಂಡ ವೀಣಾ ಅಚ್ಚಯ್ಯ, ಚೆಪ್ಪುಡಿರ ಅರುಣ್ ಮಾಚಯ್ಯ, ಪಕ್ಷದ ಪ್ರಚಾರ ಸಮಿತಿಯ ಅಧ್ಯಕ್ಷ ಟಿ.ಪಿ.ರಮೇಶ್, ಕೆಪಿಸಿಸಿ ಸದಸ್ಯ ಬಿ.ಎಸ್.ರಮಾನಾಥ್ ಉಪಸ್ಥಿತರಿದ್ದರು.

ಫಸಲು ನಾಶಗೊಳಿಸಿದ ಒಂಟಿ ಸಲಗ



ಸುಂಟಿಕೊಪ್ಪ: ಉಲುಗುಲಿ ಗ್ರಾಮದ ತೋಟವೊಂದಕ್ಕೆ ಮಂಗಳವಾರ ರಾತ್ರಿ ಒಂಟಿಸಲಗ ದಾಳಿ ನಡೆಸಿ, ಅಪಾರ ಪ್ರಮಾಣದ ಫಸಲನ್ನು ನಾಶಗೊಳಿಸಿದೆ.

ಗ್ರಾಮದ ಓಡಿಯಪ್ಪನ ಸುದೇಶ್ ಕುಮಾರ್ ಅವರ ತೋಟಕ್ಕೆ ಒಂಟಿಸಲಗ ದಾಳಿ ನಡೆಸಿ ತೆಂಗು, ಕಾಫಿ ಬಾಳೆ, ಏಲಕ್ಕಿ ಸೇರಿದಂತೆ ಹಲವು ಫಸಲು ಭರಿತ ಗಿಡಗಳನ್ನು ತಿಂದು ತುಳಿದು ಹಾಕಿದೆ.

ಕಳೆದ 2 ದಿನಗಳಿಂದ ಒಂಟಿಸಲಗ ಸುತ್ತಮುತ್ತಲಿನ ತೋಟಗಳಲ್ಲಿ ಬೀಡುಬಿಟ್ಟಿದ್ದು, ಫಸಲನ್ನು ತಿಂದು ಹಾಕಿದೆ. ತೆಂಗು ಮತ್ತು ಬಾಳೆ ಗಿಡಗಳನ್ನು ಬುಡ ಸಹಿತ ಕಿತ್ತು ನಾಶಪಡಿಸಿದೆ. ಇದರಿಂದ 50 ಸಾವಿರ ರೂ.ಗೂ ಹೆಚ್ಚು ನಷ್ಟವಾಗಿದೆ ಎಂದು ಬೆಳೆಗಾರ ಓಡಿಯಪ್ಪ ಸುದೇಶ್ ಕುಮಾರ್ ಅಳಲು ತೋಡಿಕೊಂಡಿದ್ದಾರೆ.

ಕಾಡಾನೆ ಹಾವಳಿಯಿಂದ ತೋಟದಲ್ಲಿ ಕಾರ್ಮಿಕರು ಕೆಲಸ ಕಾರ್ಯನಿರ್ವಹಿಸಲು ಹಿಂದೇಟು ಹಾಕುತ್ತಿದ್ದಾರೆ. ಈ ಭಾಗದಿಂದ ಶಾಲಾ–ಕಾಲೇಜುಗಳಿಗೆ ವಿದ್ಯಾರ್ಥಿಗಳು ಜೀವ ಭಯದಲ್ಲೇ ತೆರಳುವಂತಾಗಿದೆ ಎಂದು ಆತಂಕ ವ್ಯಕ್ತಪಡಿಸಿರುವ ಇಲ್ಲಿನ ನಿವಾಸಿಗಳು, ಕೂಡಲೆ ಅರಣ್ಯ ಇಲಾಖೆ ಕಾಡಾನೆ ಹಾವಳಿಯನ್ನು ಶಾಶ್ವತವಾಗಿ ಪರಿಹರಿಸಬೇಕು ಎಂದು ಒತ್ತಾಯಿಸಿದ್ದಾರೆ.

ಮಾರ್ಗಸೂಚಿಯಂತೆ ಟಿಇಟಿ ಪರೀಕ್ಷೆ ನಡೆಸಿ

ಸಭೆಯಲ್ಲಿ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಡಿಸಿ ವೆಂಕಟ್‌ರಾಜಾ ಸೂಚನೆ



ಟಿಇಟಿ ಪರೀಕ್ಷೆ ಸಂಬಂಧ ನಡೆದ ಸಭೆಯಲ್ಲಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾತನಾಡಿದರು. ಡಿಡಿಪಿಐ ಸಿ.ರಂಗಧಾಮಪ್ಪ ಇದ್ದರು.

ಮಡಿಕೇರಿ ಜೂ.26–ಮಾರ್ಗಸೂಚಿಯಂತೆ ಶಿಕ್ಷಕರ ಅರ್ಹತಾ ಪರೀಕ್ಷೆ (ಟಿಇಟಿ) ನಡೆಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಟಿಇಟಿ ಪರೀಕ್ಷೆ ಸಂಬಂಧ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಪರೀಕ್ಷೆಯಲ್ಲಿ ಯಾವುದೇ ಲೋಪ ಉಂಟಾಗದಂತೆ ಗಮನಹರಿಸಬೇಕು ಎಂದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಸಿ.ರಂಗಧಾಮಪ್ಪ ಮಾತನಾಡಿ, ಟಿಇಟಿ ಪರೀಕ್ಷೆ ಜೂ.30ರಂದು ನಡೆಯಲಿದೆ. ಒಟ್ಟು ಮೂರು ಪರೀಕ್ಷಾ ಕೇಂದ್ರ ಸ್ಥಾಪಿಸಲಾಗಿದೆ. ನಗರದ ಸರ್ಕಾರಿ ಪದವಿಪೂರ್ವ ಕಾಲೇಜು ಇಲ್ಲಿ ಎರಡು ಕೇಂದ್ರ ಹಾಗೂ ಸಂತ ಮೈಕಲರ ಶಾಲೆಯ ಒಂದು ಕೇಂದ್ರದಲ್ಲಿ ಪರೀಕ್ಷೆ ನಡೆಯಲಿದೆ. ಒಟ್ಟು 759 ಪರೀಕ್ಷಾರ್ಥಿಗಳು ಹಾಜರಾಗಲಿದ್ದಾರೆ ಎಂದು ಮಾಹಿತಿ ನೀಡಿದರು.

ಪರೀಕ್ಷಾರ್ಥಿಗಳು ಅಂದು ಬೆಳಗ್ಗೆ 9 ಗಂಟೆಗೆ ಪರೀಕ್ಷಾ ಕೇಂದ್ರಕ್ಕೆ ಹಾಜರಾಗಬೇಕು. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಮಾರ್ಗ ಅಧಿಕಾರಿ, ಸ್ಥಾನಿಕ ಜಾಗೃತ ದಳವನ್ನು ನೇಮಿಸಲಾಗಿದೆ. ವಿವರಗಳಿಗೆ ಪರೀಕ್ಷಾ ನೋಡಲ್ ಅಧಿಕಾರಿ ಕೆ.ಆರ್.ಬಿಂದು (ಮೊ.ಸಂ.9611720320), ಸಹಾಯವಾಣಿ ಸಂಖ್ಯೆ (ಉಪ ನಿರ್ದೇಶಕರು (ಆಡಳಿತ): 9448999344 ಅಥವಾ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ (ಮೊ.ಸಂ:9036937599) ಅವರನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಸದಾಶಿವ ಪಲ್ಲೇದ್, ಡಿವೈಎಸ್‌ಪಿ ಮಹೇಶ್ ಕುಮಾರ್, ಪ್ರಾಂಶುಪಾಲ ವಿಜಯ್, ಪರೀಕ್ಷಾ ನೋಡಲ್ ಅಧಿಕಾರಿ ಕೆ.ಆರ್.ಬಿಂದು, ಕೂಡಿಗೆ ಡಯಟ್ ಉಪನ್ಯಾಸಕರಾದ ಗೀತಾ, ಜಾನ್ಸನ್, ಸುಕ್ರುದೇವ್‌ಗೌಡ ಇತರರು ಇದ್ದರು.

ಕೆಆರ್‌ಎಸ್ ಹಿನ್ನೀರಿನಲ್ಲಿ ಅಕ್ರಮ ಒತ್ತುವರಿ

ಬೇಲಿ ನಿರ್ಮಾಣ ಕಾಮಗಾರಿ ತಡೆದ ಅಧಿಕಾರಿಗಳು, ಜಮೀನು ಮಾಲೀಕರಿಗೆ ಎಚ್ಚರಿಕೆ



ಒತ್ತುವರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸುತ್ತಿರುವ ಅಧಿಕಾರಿಗಳು.

ಶ್ರೀರಂಗಪಟ್ಟಣ,ಜೂ.26– ಕೆಆರ್‌ಎಸ್ ಹಿನ್ನೀರಿನ ನದಿ ಪಾತ್ರವನ್ನು ಒತ್ತುವರಿ ಮಾಡಿಕೊಂಡು ಬೇಲಿ ನಿರ್ಮಿಸಲು ಯತ್ನಿಸಿದ ಪ್ರಕರಣವನ್ನು ಅಧಿಕಾರಿಗಳು ತಡೆದು ಎಚ್ಚರಿಕೆ ನೀಡಿದ ಘಟನೆ ವರದಿಯಾಗಿದೆ.

ಕೃಷ್ಣರಾಜಸಾಗರ ಅಣೆಕಟ್ಟೆಯ ಉತ್ತರ ಭಾಗದ ಜಮೀನಿನ ಮಾಲೀಕರೊಬ್ಬರು ತಮ್ಮ ಜಮೀನಿಗೆ ಸೇರಿದಂತೆ ಇರುವ ಕೆಆರ್.ಸಾಗರ ಹಿನ್ನೀರಿನ ಜಾಗ ತನಗೆ ಸೇರಿದೆ ಎಂದು ಸುಮಾರು 30ಅಡಿ ಉದ್ದ 100 ಅಡಿ ಅಗಲದಷ್ಟು ಹಿನ್ನೀರಿನ ಜಾಗವನ್ನು ಅಕ್ರಮವಾಗಿ ಅತಿಕ್ರಮಿಸಿ ಗುಂಡಿ ತೋಡಿ ಕಲ್ಲುಗಳನ್ನು ನೆಟ್ಟು ಬೇಲಿ ನಿರ್ಮಿಸುತ್ತಿದ್ದರು.


ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಕೆ.ಆರ್.ಸಾಗರ ಕಾವೇರಿ ನೀರಾವರಿ ನಿಗಮದ ಕಾರ್ಯಪಾಲಕ ಅಭಿಯಂತರ ಜಯಂತ್ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರ ಕಿಶೋರ್ ಕುಮಾರ್ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಕಾರ್ಯಪಾಲಕ ಅಭಿಯಂತರ ಜಯಂತ್ ಮಾತನಾಡಿ ಕೆ.ಆರ್.ಸಾಗರ ಹಿನ್ನೀರಿನಲ್ಲಿ ಯಾವುದೇ ಕಾಮಗಾರಿ ಮಾಡದಂತೆ ಜಮೀನು ಮಾಲೀಕನಿಗೆ ಸೂಚಿಸಿ, ನಮ್ಮ ಇಲಾಖೆ ಗಮನಕ್ಕೆ ತಾರದೆ ಏಕಪಕ್ಷೀಯವಾಗಿ ಸರ್ವೇ ನಡೆಸಲಾಗಿದೆ, ಜಂಟಿ ಸರ್ವೇ ನಡೆಸುವವರೆಗೆ ಕಾನೂನು ಮೀರಿ ಕೆಲಸ ಮಾಡಿದರೆ ಕ್ರಮ ಜರುಗಿಸುವುದಾಗಿ ಎಚ್ಚರಿಕೆ ನೀಡಿದರು.

ಸುಮಾರು 326 ಕಿ.ಮೀ ವಿಸ್ತೀರ್ಣ ಕೆ.ಆರ್.ಸಾಗರ ಅಣೆಕಟ್ಟೆ ಹಿನ್ನೀರಿನ ಪ್ರದೇಶದಲ್ಲಿ ಹಲವಾರು ಕಡೆ ಸಾಮಾನ್ಯ ಜನರಿಂದ ಹಿಡಿದು ಗಣ್ಯ ವ್ಯಕ್ತಿಗಳೂ ಒತ್ತವರಿ ಮಾಡಿಕೊಂಡಿದ್ದು, ಕ್ರಮ ಜರುಗಿಸಲು ಹೋದ ಅಧಿಕಾರಿಗಳಿಗೆ ರಾಜಕೀಯ ಪ್ರಭಾವ ಬೀರಿ ಕ್ರಮ ಜರುಗಿಸದಂತೆ ತಡೆದಿರುವ ಕಾರಣ ಅಣೆಕಟ್ಟೆಯಲ್ಲಿ ನೀರಿನ ಸಂಗ್ರಹ ಕಡಿಮೆಯಾಗುತ್ತಿದೆ. ಅಧಿಕಾರಿಗಳ ಮಾಹಿತಿಯಂತೆ ಸುಮಾರು 8 ರಿಂದ 10 ಕಿ.ಮೀನಷ್ಟು ಹಿನ್ನೀರಿನ ಪ್ರದೇಶ ಒತ್ತುವರಿಯಾಗಿದ್ದು, ಇದರಿಂದ ಸುಮಾರು 3 ಟಿ.ಎಂ.ಸಿ ನೀರಿನ ಸಂಗ್ರಹ ಕಡಿಮೆಯಾಗಲಿದೆ.

ಕೊಚ್ಚಿ ಹೋಗಿರುವ ಸೇತುವೆ ದುರಸ್ತಿಗೆ ಆಗ್ರಹಿಸಿ ಹೇಮಾವತಿ ನೀರಾವರಿ ಇಲಾಖೆಗೆ ಮುತ್ತಿಗೆ

ಸರ್ಕಾರ, ನೀರಾವರಿ ಇಲಾಖೆ ಅಧಿಕಾರಿಗಳ ವಿರುದ್ಧ ಆಕ್ರೋಶ



ಹೇಮಾವತಿ ನಾಲಾ ಕಚೇರಿಗೆ ಮುತ್ತಿಗೆ ಹಾಕಿರುವ ಗ್ರಾಮಸ್ಥರು.

ಕೆ.ಆರ್.ಪೇಟೆ: ಎರಡೂವರೆ ವರ್ಷದ ಹಿಂದೆ ಕುಂಭದ್ರೋಣ ಮಳೆಯಿಂದ ಕೊಚ್ಚಿ ಹೋಗಿರುವ ತಾಲೂಕಿನ ಮಾದಿಹಳ್ಳಿ ಗ್ರಾಮದ ಸೇತುವೆಯನ್ನು ಕೂಡಲೇ ದುರಸ್ತಿಗೊಳಿಸುವಂತೆ ಆಗ್ರಹಿಸಿ ಮಾದಿಹಳ್ಳಿ, ದೇವರಹಳ್ಳಿ ಸುತ್ತಮುತ್ತಲ ಗ್ರಾಮಸ್ಥರು ಕೆ.ಆರ್.ಪೇಟೆ ಪಟ್ಟಣದ ಹೇಮಾವತಿ ನೀರಾವರಿ ಇಲಾಖೆಯ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಗ್ರಾಪಂ ಸದಸ್ಯರಾದ ಶ್ರೀಧರ್, ಬಾಲರಾಜು, ಪ್ರಶಾಂತ್‌ಗೌಡ, ಕಾಯಿಮಂಜೇಗೌಡ, ನಾಗೇಗೌಡ, ಲಕ್ಷ್ಮಣ್‌ಗೌಡ, ರಾಮೇಗೌಡ, ಗಣೇಶಗೌಡ, ಚಂದ್ರಶೇಖರ್, ಪುಟ್ಟಸ್ವಾಮಿ, ಗ್ರಾಪಂ.ಮಾಜಿ ಅಧ್ಯಕ್ಷರಾದ ಊಗಿನಹಳ್ಳಿ ಮುರುಳೀಧರ್ ನೇತೃತ್ವದಲ್ಲಿ ಸೇತುವೆ ನಿರ್ಮಾಣ ಮಾಡುವಲ್ಲಿ ನಿರ್ಲಕ್ಷ್ಯ ವಹಿಸುತ್ತಿರುವ ಹೇಮಾವತಿ ನೀರಾವರಿ ಇಲಾಖೆಯ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿ ನೀರಾವರಿ ಇಲಾಖೆಯ ಅಧಿಕಾರಿಗಳು ಹಾಗೂ ಅನುದಾನವನ್ನು ತಡೆ ಹಿಡಿದಿರುವ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಗ್ರಾ.ಪಂ. ಸದಸ್ಯ ಶ್ರೀಧರ್ ಮಾತನಾಡಿ ಕಳೆದ ಎರಡೂವರೆ ವರ್ಷಗಳ ಹಿಂದೆ ಮಳೆಯ ನೀರಿನಿಂದ ಕೊಚ್ಚಿ ಹೋಗಿದ್ದ ರಸ್ತೆಯನ್ನು ಪುನರ್‌ನಿರ್ಮಾಣ ಮಾಡಲು ಅಂದಿನ ಬಿಜೆಪಿ ಸರ್ಕಾರವು ಮಾದಿಹಳ್ಳಿ ಸೇತುವೆಗೆ ಎರಡೂವರೆ ಕೋಟಿ ಹಾಗೂ ದೇವರಹಳ್ಳಿ ಸೇತುವೆ ನಿರ್ಮಾಣಕ್ಕೆ 95ಲಕ್ಷ ರೂ ಅನುದಾನ ನೀಡಿತ್ತು. ಕಾಮಗಾರಿಗೆ 2023ರ ಮಾರ್ಚ್ ತಿಂಗಳಲ್ಲಿ ಟೆಂಡರ್ ಸಹ ಕರೆಯಲಾಗಿತ್ತು. ಆದರೆ ಟೆಂಡರ್ ಪೂರ್ಣಗೊಳ್ಳುವ ಹೊತ್ತಿಗೆ ಚುನಾವಣೆ ಘೋಷಣೆಯಾದ ಹಿನ್ನೆಲೆಯಲ್ಲಿ ಟೆಂಡರ್ ನಡೆಯಲಿಲ್ಲ ಎಂದರು.

ನಂತರ ಬಂದ ಕಾಂಗ್ರೆಸ್ ಸರ್ಕಾರವು ಈ ಕಾಮಗಾರಿಯ ಅನುದಾನವನ್ನು ತಡೆಹಿಡಿಯಬೇಕೆಂದು ನೀರಾವರಿ ಅಧಿಕಾರಿಗಳಿಗೆ ಪತ್ರ ಬರೆದ ಕಾರಣ ಟೆಂಡರ್ ಪೂರ್ಣಗೊಳ್ಳದೇ ಇರುವ ಕಾರಣ ಕಾಮಗಾರಿ ಆರಂಭವಾಗಿಲ್ಲ ಎಂದರು.

ಇದರಿಂದಾಗಿ ಸೇತುವೆ ನಿರ್ಮಾಣಗೊಳ್ಳದೇ ಇರುವ ಕಾರಣ ಸದರಿ ಮಾರ್ಗವಾಗಿ ಶ್ರವಣಬೆಳಗೊಳ, ದೇವರಹಳ್ಳಿ, ಕಳ್ಳನಕೆರೆ, ಡಿಂಕ, ಚನ್ನರಾಯಪಟ್ಟಣ, ಮತ್ತಿತರ ಊರುಗಳಿಗೆ ಹೋಗಬೇಕಾದ ಸಂಪರ್ಕವೇ ಬಂದ್ ಆಗಿದೆ. ಇದರಿಂದ ಶಾಲಾ ಮಕ್ಕಳಿಗೆ, ರೈತರ ಎತ್ತಿನ ಬಂಡಿಗಳು ಓಡಾಡಲು, ಜನಜಾನುವಾರು ತಿರುಗಾಡಲು, ವಾಹನಗಳು ಓಡಾಡಲು ತೀವ್ರ ತೊಂದರೆಯಾಗಿರುತ್ತದೆ. ಹಾಗಾಗಿ ಕೂಡಲೆ ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯ ನಂತರ ನೀರಾವರಿ ಇಲಾಖೆಯ ತಾಂತ್ರಿಕ ಅಧಿಕಾರಿ ರಶ್ಮಿ ಅವರಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸ್ವೀಕರಿಸಿದ ನೀರಾವರಿ ಇಲಾಖೆಯ ತಾಂತ್ರಿಕ ಅಧಿಕಾರಿ ರಶ್ಮಿ ಮಾತನಾಡಿ, ಸೂಕ್ತ ನಿರ್ದೇಶನಕ್ಕಾಗಿ ಪತ್ರ ವ್ಯವಹಾರ ಮಾಡಲಾಗಿದೆ. ಸರ್ಕಾರದ ಸೂಕ್ತ ನಿರ್ದೇಶನ ಬಂದ ಕೂಡಲೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿಯನ್ನು ಆರಂಭಿಸಲಾಗುವುದು. ಅಲ್ಲದೇ ಇಂದಿನ ಪ್ರತಿಭಟನೆಯ ವಿಚಾರವನ್ನು ಮೇಲಧಿಕಾರಿಗಳ ಮೂಲಕ ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು. ನಂತರ ಗ್ರಾಮಸ್ಥರು ಪ್ರತಿಭಟನೆಯನ್ನು ವಾಪಸ್ಸು ಪಡೆದರು.

ಅತ್ತಿಗೆ ಸಾವಿನ ಸುದ್ದಿ ತಿಳಿದು ನಾದಿನಿಯೂ ಸಾವು



ಸಿದ್ದಮ್ಮ



ಚಿಕ್ಕಮಣಿ

ಭಾರತೀನಗರ,ಜೂ.26– ಅತ್ತಿಗೆ ಸಾವಿನ ಸುದ್ದಿ ತಿಳಿದು ನಾದಿನಿಯೂ ಸಾವನ್ನಪ್ಪಿರುವ ಅಪರೂಪದ ಘಟನೆ ಚುಂಚಗಹಳ್ಳಿ ಗ್ರಾಮದಲ್ಲಿ ಸಂಭವಿಸಿದೆ.


ಅನಾರೋಗ್ಯದಿಂದ ಅತ್ತಿಗೆ ಸಿದ್ದಮ್ಮ (85) ಸಾವನ್ನಪ್ಪಿದ್ದು, ಸಾವಿನ ಸುದ್ದಿ ಕೇಳಿದ ನಾದಿನಿ ಚಿಕ್ಕಮಣಿ (80) ಗಾಭರಿಗೊಂಡು ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ. ಮೃತ ಚಿಕ್ಕಮಣಿಗೆ ಓರ್ವ ಪುತ್ರಿ, ಸಿದ್ದಮ್ಮ ಅವರಿಗೆ 5 ಮಂದಿ ಮಕ್ಕಳಿದ್ದಾರೆ. ಮೃತರ ಅಂತ್ಯಸಂಸ್ಕಾರವನ್ನು ಒಟ್ಟಿಗೆ ಸ್ವಗ್ರಾಮದ ಚುಂಚಗಹಳ್ಳಿ ಗ್ರಾಮದ ಜಮೀನಿನಲ್ಲಿ ನೆರವೇರಿಸಲಾಯಿತು.

ಹಾಡಹಗಲೇ ನಗ–ನಾಣ್ಯ ದೋಚಿ ಪರಾರಿ

ಮಂಡ್ಯ, ಜೂ.26– ಹಾಡಹಗಲೇ ಮನೆಗೆ ನುಗ್ಗಿ ಚಿನ್ನಾಭರಣ ಹಾಗೂ ನಗದು ದೋಚಿ ಪರಾರಿಯಾಗಿರುವ ಘಟನೆ ಮಂಡ್ಯದ ಸ್ವರ್ಣಸಂದ್ರ ಬಡಾವಣೆಯಲ್ಲಿ ಬುಧವಾರ ಮಧ್ಯಾಹ್ನ ಜರುಗಿದೆ. ಪುಷ್ಪಾವತಿ ಎಂಬುವರ ಮನೆಯಲ್ಲಿ ಘಟನೆ ಜರುಗಿದ್ದು, 180 ಗ್ರಾಂ ಚಿನ್ನಾಭರಣ ಹಾಗೂ 50 ಸಾವಿರ ನಗದು ದೋಚಿಕೊಂಡು ಹೋಗಲಾಗಿದೆ ಕಳ್ಳತನವಾಗಿದೆ. ಮನೆಗೆ ಕುಡಿಯುವ ನೀರಿನ ಪರೀಕ್ಷೆಗೆ ಬಂದ ಸಿಬ್ಬಂದಿ ಜೊತೆ ಪುಷ್ಪಾವತಿ ಅವರು ಮನೆ ಮೇಲಿನ ಟ್ಯಾಂಕ್ ಪರಿಶೀಲನೆಗೆ ತೆರಳಿದಾಗ ಘಟನೆ ಜರುಗಿದೆ.

ಸಿಬ್ಬಂದಿ ಜೊತೆ ಬಂದವರು ಅಥವಾ ಬೇರೆ ಯಾರು ಕೃತ್ಯ ಮಾಡಿದ್ದಾರೆ ಎಂಬ ಬಗ್ಗೆ ತನಿಖೆ ಅರಂಭವಾಗಿದೆ. ಮಂಡ್ಯ ನಗರ ಪೂರ್ವ ಪೊಲೀಸ್ ಠಾಣೆ ಸಬ್ ಇನ್ಸ್‌ಪೆಕ್ಟರ್ ಶೇಷಾದ್ರಿಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿ ತನಿಖೆ ಅರಂಭಿಸಿದ್ದಾರೆ.

ಮಹದೇವಪ್ಪ ನಿಧನ



ಕೆ.ಆರ್.ಪೇಟೆ,ಜೂ.26–ತಾಲೂಕಿನ ಹೊಸಹೊಳಲು ಗ್ರಾಮದ ವೀರಶೈವ ಸಮಾಜದ ಹಿರಿಯ ಮುಖಂಡರು ಹಾಗೂ ನಿವೃತ್ತ ಶಿಕ್ಷಕರು ಆದ ಮಹದೇವಪ್ಪರವರು (83) ಬುಧವಾರ ನಿಧನ ಹೊಂದಿದರು. ಮೃತರು ಪತ್ನಿ, ಪುತ್ರ ನಂದಿ ಮೆಡಿಕಲ್ಸ್ ಮಾಲೀಕ ಎಚ್.ಎಂ.ಶ್ರೀಧರ್ ಸೇರಿದಂತೆ ಇಬ್ಬರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಹೊಸಹೊಳಲಿನಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಒಂದು ತಿಂಗಳೊಳಗೆ ಒತ್ತುವರಿ ತೆರವುಗೊಳಿಸಿ

ಜನಸ್ಪಂದನ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪನಾಗ್ ಕಟ್ಟುನಿಟ್ಟಿನ ಸೂಚನೆ



ಚಾಮರಾಜನಗರ ತಾಲೂಕಿನ ಹರದನಹಳ್ಳಿಯಲ್ಲಿ ನಡೆದ ಜನಸ್ಪಂದನ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಶಿಲ್ಪನಾಗ್, ಸಾರ್ವಜನಿಕರ ಅಹವಾಲು ಆಲಿಸಿದರು.

ಚಾಮರಾಜನಗರ, ಜೂ.26–ಸರ್ಕಾರಿ ಹಾಗೂ ಸಾರ್ವಜನಿಕ ಸ್ಥಳಗಳ ಒತ್ತುವರಿಯನ್ನು ಒಂದು ತಿಂಗಳೊಳಗೆ ನಿರ್ದಾಕ್ಷಿಣ್ಯವಾಗಿ ತೆರವುಗೊಳಿಸಿ, ವರದಿ ನೀಡಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ಭೂ ದಾಖಲೆ ಹಾಗೂ ಕಂದಾಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ತಾಲೂಕಿನ ಹರದನಹಳ್ಳಿಯ ವಾಲ್ಮೀಕಿ ಭವನದಲ್ಲಿ ಬುಧವಾರ ಜಿಲ್ಲಾಡಳಿತ ವತಿಯಿಂದ ನಡೆದ ಜನಸ್ಪಂದನ ಕಾರ್ಯಕ್ರಮದಲ್ಲಿ ಸಾರ್ವಜನಿಕರ ಅಹವಾಲು ಆಲಿಸಿ ಮಾತನಾಡಿದ ಅವರು, ಸಾರ್ವಜನಿಕ ರಸ್ತೆ, ಬಂಡಿದಾರಿಯಂತಹ ಸ್ಥಳಗಳನ್ನು ಒತ್ತುವರಿ ಮಾಡಿರುವ ಬಗ್ಗೆ ಸಾಕಷ್ಟು ದೂರುಗಳು ಬಂದಿವೆ. ಭೂ ದಾಖಲೆ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಸರ್ವೇ ನಡೆಸಿ ಒತ್ತುವರಿ ತೆರವುಗೊಳಿಸಬೇಕು. ಸಮರೋಪಾದಿಯಲ್ಲಿ ಒತ್ತುವರಿ ಸಮಸ್ಯೆಗಳನ್ನು ತ್ವರಿತವಾಗಿ ಇತ್ಯರ್ಥ ಪಡಿಸಬೇಕು ಎಂದು ನಿರ್ದೇಶನ ನೀಡಿದರು.

ಹಲವೆಡೆ ವಿದ್ಯುತ್ ತಂತಿಗಳು ಜೋತಾಡುತ್ತಿರುವ ಬಗ್ಗೆಯೂ ದೂರುಗಳು ಇವೆ. ಸೆಸ್ಕ್ ಅಧಿಕಾರಿಗಳು ವ್ಯಾಪಕವಾಗಿ ಪರಿಶೀಲಿಸಿ, ಸರಿಪಡಿಸುವ ಕಾರ್ಯಕ್ಕೆ ಮುಂದಾಗಬೇಕು. ಎಲ್ಲಿಯೂ ಯಾವುದೇ ತೊಂದರೆಗಳಿಗೆ ಅವಕಾಶವಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದರು.

ಹರದನಹಳ್ಳಿ ಹೋಬಳಿಯಲ್ಲಿ ಪಶು ಆಸ್ಪತ್ರೆ ಇಲ್ಲವಾದ್ದರಿಂದ ವೆಂಕಟಯ್ಯನಛತ್ರಕ್ಕೆ ಹೋಗಬೇಕಿದೆ. ಇಲ್ಲಿಯೇ ಆಸ್ಪತ್ರೆ ನಿರ್ಮಾಣವಾದರೆ ಅನುಕೂಲವಾಗಲಿದೆ ಎಂದು ಗ್ರಾಮಸ್ಥರು ಮನವಿ ಮಾಡಿದರು.

ನಂತರ ಜಿಲ್ಲಾಧಿಕಾರಿ ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವರು ಪಶುಸಂಗೋಪನೆ ಇಲಾಖೆಯ ಸಚಿವರೂ ಆಗಿರುವುದರಿಂದ ಅವರ ಗಮನಕ್ಕೆ ಈ ವಿಷಯ ತರಲಾಗುವುದು. ಪಶು ಆಸ್ಪತ್ರೆಯ ಅಗತ್ಯ ಕುರಿತು ಅಧಿಕಾರಿಗಳಿಂದ ಪರಿಶೀಲಿಸಿ ವರದಿ ಪಡೆಯಲಾಗುವುದು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಸಿಇಓ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಉಪವಿಭಾಗಾಧಿಕಾರಿ ಮಹೇಶ್, ತಹಸೀಲ್ದಾರ್ ಬಸವರಾಜು, ತಾಪಂ ಇಓ ಪೂರ್ಣಿಮಾ, ಹಿರಿಯ ಕಲಾವಿದ ಘಟಂ ಕೃಷ್ಣ, ಇನ್ನಿತರ ಅಧಿಕಾರಿಗಳು ಹಾಜರಿದ್ದರು.

ಕೂಡಲೆ ಅಕ್ರಮ ಗಣಿಗಾರಿಕೆ ನಿಲ್ಲಿಸಿ

ಸಭೆ ಆರಂಭವಾಗುತ್ತಿದ್ದಂತೆಯೇ ಬಿಸಲವಾಡಿ, ಅಮಚವಾಡಿ, ಎಣ್ಣೆಹೊಳೆ ಗ್ರಾಮ ಹಾಗೂ ಚೆನ್ನಪ್ಪನಪುರ ದೇವಾಲಯದ ಬಳಿ ಅಕ್ರಮವಾಗಿ ಗಣಿಗಾರಿಕೆ ನಡೆಸಲಾಗುತ್ತಿದೆ. ಇದನ್ನು ತಡೆಯಬೇಕೆಂದು ಗ್ರಾಮಸ್ಥರು ಒತ್ತಾಯಿಸಿದರು.

ನಂತರ ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪನಾಗ್, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ, ಅನಧಿಕೃತವಾಗಿ ಗಣಿಗಾರಿಕೆ ನಡೆಯುತ್ತಿದ್ದಲ್ಲಿ ನಿಲ್ಲಿಸಬೇಕು. ಒಂದು ವಾರದೊಳಗೆ ವರದಿ ನೀಡಬೇಕು. ಇಲ್ಲವಾದಲ್ಲಿ ನಾನೇ ಖುದ್ದು ಭೇಟಿ ನೀಡಿ ಪರಿಶೀಲಿಸುತ್ತೇನೆ ಎಂದರು.

ಬಳಿಕ ಪ್ರತಿಯೊಬ್ಬರಿಂದ ಅಹವಾಲು ಆಲಿಸಿದರು. ಗ್ರಾಮದ ವಾಲ್ಮೀಕಿ ಸಮುದಾಯ ಭವನ ಕಾಮಗಾರಿ ಅಪೂರ್ಣಗೊಂಡಿದೆ. ಮೊದಲನೆ ಅಂತಸ್ತು ಪೂರ್ಣಗೊಳ್ಳಬೇಕಿದ್ದು, ಕುಡಿಯುವ ನೀರು, ಶೌಚಾಲಯ ವ್ಯವಸ್ಥೆಯನ್ನು ಕಲ್ಪಿಸಿಕೊಡಬೇಕೆಂದು ಸ್ಥಳೀಯ ಗ್ರಾಮಸ್ಥರು ಮನವಿ ಮಾಡಿದರು. ಸಭೆಯಲ್ಲೇ ಇದ್ದ ಅಧಿಕಾರಿಗಳಿಗೆ ತ್ವರಿತವಾಗಿ ಕಾಮಗಾರಿ ಆರಂಭಿಸಬೇಕು. ಹೆಚ್ಚುವರಿ ಅನುದಾನ ಪಡೆಯಲು ಮುಂದಿನ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸೂಚಿಸಿದರು.

ಸ್ಥಳೀಯ ಆಸ್ಪತ್ರೆಗೆ ವೈದ್ಯರು, ನರ್ಸ್‌ಗಳ ನೇಮಕ, ದಿವ್ಯಲಿಂಗೇಶ್ವರ ದೇವಸ್ಥಾನದ ಅಭಿವೃದ್ಧಿ ಕಾಮಗಾರಿ, ಹೆದ್ದಾರಿ, ಇತರೆ ರಸ್ತೆಗಳ ದುರಸ್ತಿ, ಬಸ್ ಸೇವೆ, ಕಾಲುವೆ ನಿರ್ಮಾಣ, ಅಕ್ರಮ ಮದ್ಯ ಮಾರಾಟ ತಡೆ, ಖಾತೆ, ಇ–ಸ್ವತ್ತು ವಿಳಂಬ ಸೇರಿದಂತೆ ಇನ್ನಿತರ ಸಮಸ್ಯೆಗಳ ಕುರಿತು ಜನರಿಂದ ಅಹವಾಲುಗಳು ಸಲ್ಲಿಕೆಯಾದವು.

ಲಾರಿ ಡಿಕ್ಕಿ: ಆಟೋ ಚಾಲಕ ಪಾರು

ಬೇಗೂರು: ಲಾರಿ ಗೂಡ್ಸ್ ಆಟೋಗೆ ಡಿಕ್ಕಿ ಹೊಡೆದಿದ್ದು, ಆಟೋ ಚಾಲಕ ಸಣ್ಣಪುಟ್ಟ ಗಾಯಗಳೊಂದಿಗೆ ಪ್ರಾಣಾಪಾಯದಿಂದ ಪಾರಾದ ಘಟನೆ ಗುಂಡ್ಲುಪೇಟೆ ತಾಲೂಕಿನ ಬೇಗೂರಿನ ಹಳೇ ಠಾಣೆ ಮುಂಭಾಗದ ಹೆದ್ದಾರಿಯಲ್ಲಿ ಬುಧವಾರ ನಡೆದಿದೆ.

ಬೇಗೂರು ಸಮೀಪದ ತೊಂಡವಾಡಿ ಗ್ರಾಮದ ಗೂಡ್ಸ್ ಆಟೋ ಚಾಲಕ ಶಿವು(26) ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದಾನೆ. ಈತ ಸಂಜೆ ಆಟೋಗೆ ಡೀಸೆಲ್ ತುಂಬಿಸಿಕೊಂಡು ಬೇಗೂರು ಕಡೆಗೆ ತೆರಳುತ್ತಿದ್ದ. ಈ ವೇಳೆ ಮೈಸೂರು ಕಡೆಯಿಂದ ಬರುತ್ತಿದ್ದ ಲಾರಿ ಆಟೋಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಶಿವುಗೆ ಸಣ್ಣಪುಟ್ಟ ಗಾಯಗಳಾಗಿವೆ. ಆಟೋ ಸಂಪೂರ್ಣ ಜಖಂ ಆಗಿದೆ. ಬೇಗೂರು ಠಾಣೆ ಪೊಲೀಸರು ಸ್ಥಳ ಪರಿಶೀಲಿಸಿ, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಹೆಚ್ಚು ಅಂಕ ಪಡೆದವರಿಗೆ ನಗದು ಬಹುಮಾನ...



ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ಯಳಂದೂರು ತಾಲೂಕಿನ ಗುಂಬಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಕೃಷ್ಣಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕ ರಾಜು ತಮ್ಮ ಮಗಳು ನಿಸರ್ಗ ರಾಜ್ ಹೆಸರಿನಲ್ಲಿ ನಗದು ಬಹುಮಾನ ನೀಡಿದರು. ಪ್ರೌಢಶಾಲಾ ಸಹಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ವೀರಭದ್ರಸ್ವಾಮಿ, ಮುಖ್ಯ ಶಿಕ್ಷಕ ನಿಂಗೇಗೌಡ, ಗ್ರಾಪಂ ಅಧ್ಯಕ್ಷೆ ಮೀನಾ, ದೈಹಿಕ ಶಿಕ್ಷಣ ಪರಿವೀಕ್ಷಕ ಲಿಂಗರಾಜು, ಸಿಆರ್‌ಪಿ ರೇಚಣ್ಣ, ಶಿಕ್ಷಕ ಮಹದೇವಸ್ವಾಮಿ, ಎಸ್‌ಡಿಎಂಸಿ ಅಧ್ಯಕ್ಷ ಗುಂಬಳ್ಳಿ ರಾಜಣ್ಣ, ವಿ.ಕಿರಣ್, ಎಲ್.ಎನ್.ಲಕ್ಷ್ಮೀ, ಎಸ್.ಮಂಜುನಾಥ, ಬಿ.ವಿ.ನಾಗರತ್ನ ಇದ್ದರು.

ಅರ್ಚಕ ದೊಡ್ಡಶೆಟ್ಟಿ ನಿಧನ



ಯಳಂದೂರು: ಸಮೀಪದ ಇರಸವಾಡಿ ಗ್ರಾಮದ ದೊಡ್ಡಮ್ಮ ತಾಯಿ ದೇವಸ್ಥಾನದ ಅರ್ಚಕ ದೊಡ್ಡಶೆಟ್ಟಿ(75) ಅನಾರೋಗ್ಯದಿಂದ ಸೋಮವಾರ ನಿಧನರಾದರು.


ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗ ಅಗಲಿದ್ದಾರೆ. ಸ್ವಗ್ರಾಮದ ರುದ್ರಭೂಮಿಯಲ್ಲಿ ಮಂಗಳವಾರ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಬೆಳ್ಳಪ್ಪ



ಚಾಮರಾಜನಗರ: ತಾಲೂಕಿನ ಅರಕಲವಾಡಿ ಗ್ರಾಮದ ಬೆಳ್ಳಪ್ಪ (86) ಬುಧವಾರ ನಿಧನರಾದರು. ಮೃತರಿಗೆ ಪತ್ನಿ, ಪುತ್ರ, ಮೂವರು ಪುತ್ರಿಯರು ಇದ್ದಾರೆ. ಅರಕಲವಾಡಿಯಲ್ಲಿ ಗುರುವಾರ ಅಂತ್ಯಕ್ರಿಯೆ ನಡೆಯಲಿದೆ.

ಬಿ.ಕೆ.ನಜೀರ್ ಅಹಮದ್ ನಿಧನ



ಹನೂರು, ಜೂ.26– ತಾಲೂಕಿನ ಬಂಡಳ್ಳಿ ಗ್ರಾಮದ ತಾಪಂ ಮಾಜಿ ಅಧ್ಯಕ್ಷ ಬಿ.ಕೆ.ನಜೀರ್ ಅಹಮದ್(85) ಬುಧವಾರ ನಿಧನರಾದರು.

ಮೃತರು ಪತ್ನಿ, ಚಾಮುಲ್ ನಿರ್ದೇಶಕ ಶಾಹುಲ್ ಅಹಮದ್, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಜವಾದ್ ಅಹಮದ್, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗ ಅಗಲಿದ್ದಾರೆ.

ಬಂಡಳ್ಳಿ ಗ್ರಾಮದ ಮುಸ್ಲಿಂ ಸಮುದಾಯದ ಖಬರ್‌ಸ್ತಾನ್‌ನಲ್ಲಿ ಗುರುವಾರ ಅಂತ್ಯಕ್ರಿಯೆ ನಡೆಯಿತು.

ಸಂತಾಪ: ಮಾಜಿ ಶಾಸಕ ಆರ್.ನರೇಂದ್ರ, ತಾಪಂ ಮಾಜಿ ಅಧ್ಯಕ್ಷ ವೆಂಕಟರಮಣ ನಾಯ್ಡು, ಪಟ್ಟಣ ಪಂಚಾಯಿತಿ ಸದಸ್ಯರಾದ ಗಿರೀಶ್, ಹರೀಶ್, ಸಂಪತ್, ಸುದೇಶ್, ಸೋಮಶೇಖರ್, ಮಾಜಿ ಉಪಾಧ್ಯಕ್ಷರಾದ ಮಾದೇಶ್, ಬಸವರಾಜು, ಹನೂರು ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಮಹಾದೇಶ್ ಸಂತಾಪ ಸೂಚಿಸಿದರು.

ಎಲ್‌ಐಸಿ ರಾಜಪ್ಪ



ಚಾಮರಾಜನಗರ, ಜೂ.26– ನಗರದ ಹೌಸಿಂಗ್‌ಬೋರ್ಡ್ ಕಾಲೋನಿಯ ಎಲ್‌ಐಸಿ ರಾಜಪ್ಪ (83) ಅನಾರೋಗ್ಯದಿಂದ ಬುಧವಾರ ನಿಧನರಾದರು. ಮೃತರು ಪತ್ನಿ, ಪತ್ರಕರ್ತ ಬೆನಕ ಸುರೇಶ್, ಪುತ್ರಿ ಸುಮಾ, ಅಳಿಯ ಮಹೇಶ್ ಹಾಗೂ ಅಪಾರ ಬಂಧು–ಬಳಗ ಅಗಲಿದ್ದಾರೆ. ಸ್ವಗ್ರಾಮ ಕೊಳ್ಳೇಗಾಲ ತಾಲೂಕಿನ ಸರಗೂರಿನ ಮೃತರ ಜಮೀನಿನಲ್ಲಿ ಗುರುವಾರ ಮಧ್ಯಾಹ್ನ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

ವಾಲ್ಮೀಕಿ ನಿಗಮದಿಂದ 187 ಕೋಟಿ ಅಕ್ರಮ ವರ್ಗಾವಣೆ ಖಂಡಿಸಿ

ನಾಳೆ ರಾಜ್ಯಾದ್ಯಂತ ಡಿಸಿ ಕಚೇರಿಗಳಿಗೆ ಬಿಜೆಪಿ ಮುತ್ತಿಗೆ



ಬೆಂಗಳೂರು, ಜೂ.26(ಕೆಎಂಶಿ)– ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ. ಅಕ್ರಮ ವರ್ಗಾವಣೆ ಪ್ರತಿಭಟಿಸಿ ಜೂನ್ 28ರಂದು ರಾಜ್ಯಾದ್ಯಂತ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ಹಣಕಾಸು ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ನಿಗಮದ ಹಣ ಅಕ್ರಮ ವರ್ಗಾವಣೆ ಜವಾಬ್ದಾರಿ ಹೊರಬೇಕು, ನಿಗಮದ ಅಧ್ಯಕ್ಷರು ಶರಣಪ್ರಕಾಶ್ ಪಾಟೀಲ್ ಕೂಡಲೇ ರಾಜೀನಾಮೆ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ. ದೆಹಲಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಣ ಅಕ್ರಮ ವರ್ಗಾವಣೆ ಹಗರಣವನ್ನು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಸಿಬಿಐ ತನಿಖೆಗೆ ವಹಿಸಿದ್ದರೂ ತಮಗೆ ಬೇಕಾದಂತೆ ತನಿಖೆ ನಡೆಸಲು ರಾಜ್ಯ ಸರ್ಕಾರ ಆತುರಾತುರವಾಗಿ ಎಸ್ಐಟಿ ರಚಿಸಿದೆ ಎಂದು ಆರೋಪಿಸಿದರು.

ಎಸ್ಐಟಿ ತೇಪೆ ಹಚ್ಚುವ ಕೆಲಸ ಮಾಡುತ್ತಿದೆ, ಅಧಿಕಾರಿ ಮನೆಯಲ್ಲಿ ಒಂದಷ್ಟು ಹಣ ಸಿಕ್ಕಿದೆ ಎಂಬ ತಂತ್ರದ ಮೂಲಕ ರಾಜ್ಯ ಸರ್ಕಾರ ಕಣ್ಣೊರೆಸುವ ಕೆಲಸ ಮಾಡುತ್ತಿದೆ, ಹಗರಣ ಹಿನ್ನೆಲೆ ಸಚಿವ ಸ್ಥಾನಕ್ಕೆ ನಾಗೇಂದ್ರ ರಾಜೀನಾಮೆ ಕೊಟ್ಟಿದ್ದಾರೆ.

ಹೋರಾಟವನ್ನು ಇಲ್ಲಿಗೇ ಕೈಬಿಡುವುದಿಲ್ಲ, ಪೆಟ್ರೋಲ್, ಡೀಸೆಲ್, ಹಾಲಿನ ದರ ಹೆಚ್ಚಿಸಲಾಗಿದೆ, ಇಂಧನ ಬೆಲೆ ಏರಿಕೆಯಿಂದ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದೆ ಎಂದರು. ಸ್ಟ್ಯಾಂಪ್ ಡ್ಯೂಟಿ ಹೆಚ್ಚಿಸಲಾಗಿದೆ, ವಿದ್ಯುತ್ ದರ ಏರಿಕೆ ಮಾಡಿದ್ದಾರೆ, ರೈತರು ವಿದ್ಯುತ್ ಟ್ರಾನ್ಸ್‌ಫಾರ್ಮರ್ ಅಳವಡಿಸಿಕೊಳ್ಳಲು 2.5 ಲಕ್ಷ ರೂ. ನೀಡುವ ಪರಿಸ್ಥಿತಿ ನಿರ್ಮಿಸಲಾಗಿದೆ, ಬಿತ್ತನೆ ಬೀಜ ದರ ಶೇ.40 ರಿಂದ 50ರಷ್ಟು ಹೆಚ್ಚಾಗಿದೆ, ಹಾಲಿನ ದರ ಬಳಿಕ ಬಸ್ ಪ್ರಯಾಣ ದರವೂ ದುಬಾರಿ ಆಗಲಿದೆ, ಗ್ಯಾರಂಟಿ ಹೆಸರಿನಲ್ಲಿ ಜನರನ್ನು ವಂಚಿಸಲಾಗುತ್ತಿದೆ.

ಕಾಂಗ್ರೆಸ್ ಸರ್ಕಾರ ರಾಜ್ಯವನ್ನು ಸಾಲದ ಕೂಪಕ್ಕೆ ತಳ್ಳುತ್ತಿದೆ, ಅಭಿವೃದ್ಧಿ ಶೂನ್ಯತೆ ಕಾಡುತ್ತಿದೆ, ಅಭಿವೃದ್ಧಿ ಕಾರ್ಯಗಳಾಗದೆ ಶಾಸಕರು ತಮ್ಮ ಕ್ಷೇತ್ರಗಳಲ್ಲಿ ತಲೆ ಎತ್ತಿಕೊಂಡು ಓಡಾಡಲು ಆಗುತ್ತಿಲ್ಲ ಎಂದರು.

ರಾಜ್ಯದಲ್ಲಿ 7 ಹೊಸ ಕೃಷಿ ತರಬೇತಿ ಕೇಂದ್ರ



ಬೆಳಗಾವಿ, ಜೂ.26– ರಾಜ್ಯದಲ್ಲಿ ಈ ವರ್ಷ ಏಳು ಜಿಲ್ಲೆಗಳಲ್ಲಿ ಹೊಸದಾಗಿ ಕೃಷಿ ತರಬೇತಿ ಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ಇಲ್ಲಿನ ಸುವರ್ಣ ವಿಧಾನಸೌಧದಲ್ಲಿ ಬುಧವಾರ ನಡೆದ ಕೃಷಿ ಮತ್ತು ಜಲಾನಯನ ಇಲಾಖೆಗಳ ವಿಭಾಗಮಟ್ಟದ ಸಭೆಯಲ್ಲಿ ಅವರು ಮಾತನಾಡಿದರು. ಕೃಷಿಕರಿಗೆ ಹೊಸ ತಾಂತ್ರಿಕತೆ ಕುರಿತು ತರಬೇತಿ ನೀಡಿ, ಅವರ ಸಾಮರ್ಥ್ಯ ವೃದ್ಧಿಸಲು ಕ್ರಮ ವಹಿಸಲಾಗುತ್ತಿದೆ. ಹಾಗಾಗಿ ವಿಜಯನಗರ, ಯಾದಗಿರಿ, ಗದಗ, ಕೋಲಾರ, ಚಾಮರಾಜನಗರ, ರಾಮನಗರ, ಉಡುಪಿ ಜಿಲ್ಲೆಗಳಲ್ಲಿ ಕೃಷಿ ತರಬೇತಿ ಕೇಂದ್ರ ತೆರೆಯಲಾಗುವುದು ಎಂದರು.

ಕೃಷಿ ಇಲಾಖೆಯಲ್ಲಿ ತರಬೇತಿ ಹಾಗೂ ಗುಣಮಟ್ಟ ನಿಯಂತ್ರಣಕ್ಕೆ ಒತ್ತು ನೀಡಲಾಗುತ್ತಿದೆ. ಪ್ರಯೋಗಾಲಯಗಳನ್ನು ಎನ್ಎಬಿಎಲ್ ಮಾನ್ಯತೆಗೆ ಒಳಪಡಿಸಲಾಗುವುದು. ಬೈಲಹೊಂಗಲದ ಪರತಂತ್ರ ಜೀವಿ ಉತ್ಪಾದನೆ ಪ್ರಯೋಗಾಲಯ ಉನ್ನತೀಕರಿಸಲು ಕ್ರಮ ವಹಿಸಲಾಗುವುದು ಎಂದರು. ಈಗ ಅಗತ್ಯವಿರುವ ಬಿತ್ತನೆ ಬೀಜಗಳನ್ನು ಆಯಾ ಜಿಲ್ಲೆಗಳ ಬೀಜೋತ್ಪಾದನಾ ಕೇಂದ್ರಗಳು ಮತ್ತು ಪ್ರಗತಿಪರ ರೈತರ ಜಮೀನಿನಲ್ಲೇ ಉತ್ಪಾದಿಸಬೇಕು. ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡಿ ರೈತರಿಗೆ ನೆರವಾಗಬೇಕು ಎಂದು ಸೂಚಿಸಿದರು.

ಏಳನೇ ಪುಟದಿಂದ

ಸಿಎಂ ಸಿದ್ದರಾಮಯ್ಯ ದೆಹಲಿ ಯಾತ್ರೆ

ಸಮಾಲೋಚನೆ ನಡೆಸಲಿದ್ದಾರೆ. ಅಲ್ಲದೆ, ತಮ್ಮ ಪ್ರವಾಸ ಕಾಲದಲ್ಲಿ ಕೇಂದ್ರ ಸಚಿವರುಗಳನ್ನು ಭೇಟಿ ಮಾಡಲು ಮುಖ್ಯಮಂತ್ರಿಗಳು ಸಮಯ ನಿಗದಿ ಮಾಡಿ ಕೊಂಡಿದ್ದಾರೆ. ಲೋಕಸಭೆಯಲ್ಲಿ ಪ್ರತಿಪಕ್ಷ ನಾಯಕರಾಗಿ ಅಧಿಕಾರ ವಹಿಸಿಕೊಂಡಿರುವ ರಾಹುಲ್‌ಗಾಂಧಿ ಅವರನ್ನು ಅಭಿನಂದಿಸುವ ಕಾರ್ಯಕ್ರಮವನ್ನೂ ಹಮ್ಮಿಕೊಂಡಿದ್ದಾರೆ. ಇದೇ ಸಮಯ ಬಳಕೆ ಮಾಡಿಕೊಂಡು ತಮ್ಮ ಮಂತ್ರಿಮಂಡಲದಲ್ಲಿ ಕೆಲವು ಸಚಿವರ ಖಾತೆ ಬದಲಾವಣೆ ಹಾಗೂ ಜಿಲ್ಲಾ ಉಸ್ತುವಾರಿಗಳ ಬದಲಾವಣೆಗೆ ಸಂಬಂಧಿಸಿದಂತೆಯೂ ವರಿಷ್ಠರೊಂದಿಗೆ ಚರ್ಚೆ ನಡೆಸಿ, ಹಸಿರು ನಿಶಾನೆ ಪಡೆಯಲಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಗಾದಿಗೆ ಹೊಸಬರ ನೇಮಕಾತಿ ಸಂಬಂಧ ಆಂತರಿಕವಾಗಿ ಒತ್ತಡ ಹೆಚ್ಚಿದ್ದು ಈ ಬಗ್ಗೆ ತೀರ್ಮಾನ ಕೈಗೊಳ್ಳುವಂತೆ ವರಿಷ್ಠರಲ್ಲಿ ಮನವಿ ಮಾಡಲಿದ್ದಾರೆ.

ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರ ವಹಿಸಿಕೊಳ್ಳುವ ವೇಳೆ ಕೆಲವು ನಿಬಂಧನೆಗಳನ್ನು ವಿಧಿಸಲಾಗಿತ್ತು. ಇದರಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಲೋಕಸಭಾ ಚುನಾವಣೆ ಪೂರ್ಣಗೊಳ್ಳುವವರೆಗೂ ಕೆಪಿಸಿಸಿ ಅಧ್ಯಕ್ಷ ಸ್ಥಾನ ದಲ್ಲೇ ಮುಂದುವರೆಸುವ ತೀರ್ಮಾನ ಕೈಗೊಳ್ಳಲಾಗಿತ್ತು. ಅದರಂತೆ ಚುನಾವಣೆ ಪೂರ್ಣಗೊಂಡ ಹಿನ್ನೆಲೆಯಲ್ಲಿ ಶಿವಕುಮಾರ್ ಸ್ಥಾನಕ್ಕೆ ಬೇರೆಯವರನ್ನು ನೇಮಕ ಮಾಡಬೇಕು. ಇಂತಹ ಸಂದರ್ಭದಲ್ಲಿ ಆ ಸ್ಥಾನವನ್ನು ಪರಿಶಿಷ್ಟ ಸಮಾಜ ಇಲ್ಲವೇ ವರ್ಗದ ನಾಯಕರಿಗೆ ನೀಡಬೇಕು ಎಂಬುದು ಬೇಡಿಕೆಯಾಗಿದೆ. ಇದೇ ಸಂದರ್ಭದಲ್ಲಿ ಕೆಲವು ಸಚಿವರು ಉಪಮುಖ್ಯಮಂತ್ರಿ ಸ್ಥಾನಕ್ಕೆ ಬೇಡಿಕೆ ಇಟ್ಟಿದ್ದಾರೆ. ಅದನ್ನು ಈಡೇರಿಸುವ ಅವಶ್ಯಕತೆ ಇದೆ. ಇಲ್ಲದಿದ್ದಲ್ಲಿ ಸರ್ಕಾರ ಮತ್ತು ಪಕ್ಷದಲ್ಲಿ ಗೊಂದಲ ಉಂಟಾಗಬಹುದು ಎಂಬ ಮಾಹಿತಿಯನ್ನು ವರಿಷ್ಠರ ಗಮನಕ್ಕೆ ತರಲಿದ್ದಾರೆ. ಮುಖ್ಯಮಂತ್ರಿ ಅವರು ವರಿಷ್ಠರನ್ನು ಭೇಟಿ ಮಾಡುವುದನ್ನು ಅರಿತ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸೇರಿದಂತೆ ಕೆಲವು ಸಚಿವರು, ಶಾಸಕರು ವರಿಷ್ಠರನ್ನು ಭೇಟಿ ಮಾಡಿ ಉಪಮುಖ್ಯಮಂತ್ರಿ ಸ್ಥಾನಕ್ಕೆ ಬೇಡಿಕೆ ಇಟ್ಟಿದ್ದಾರೆ. ಅಲ್ಲದೆ, ಸಹಕಾರಿ ಸಚಿವ ಕೆ.ಎನ್.ರಾಜಣ್ಣ ತಮ್ಮನ್ನು ಮಂತ್ರಿಗಿರಿಯಿಂದ ವಿಮುಕ್ತಿಗೊಳಿಸಿ ಪಕ್ಷದ ರಾಜ್ಯಾಧ್ಯಕ್ಷ ಹುದ್ದೆ ನೀಡಿ ಎಂದು ವರಿಷ್ಠರ ಮುಂದೆ ಬೇಡಿಕೆ ಇಟ್ಟಿದ್ದಾರೆ. ಅವರು ಈಗಾಗಲೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಪರಿಶಿಷ್ಟ ಸಮುದಾಯಕ್ಕೆ ಕರ್ನಾಟಕ ಕಾಂಗ್ರೆಸ್‌ನ ಹೊಣೆ ವಹಿಸಿ ಎಂದು ಮನವಿ ಮಾಡಿದ್ದಾರೆ.

ಡ್ರಗ್ಸ್ ಮುಕ್ತ ಕರ್ನಾಟಕ ಘೋಷಣೆ

ತಪಾಸಣೆಗೆ ಒಳಪಡಿಸಿದಾಗ ಮಾದಕ ವ್ಯಸನಿಯಾಗಿದ್ದರು ಎಂಬುದು ಪತ್ತೆಯಾಗುತ್ತಿದೆ. ಮಾದಕ ವ್ಯಸನದಿಂದ ಸಮಾಜಕ್ಕೆ ಅಪಾಯವಿದೆ, ಪಾಲಕರು ತಮ್ಮ ಮಕ್ಕಳ ಚಟುವಟಿಕೆಗಳ ಮೇಲೆ ನಿಗಾ ವಹಿಸಬೇಕು, ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಹೆಚ್ಚು ಜಾಗೃತಿ ಮೂಡಿಸುವಲ್ಲಿ ಇಲಾಖೆ ಅಧಿಕಾರಿಗಳು ಮುಂದಾಗಬೇಕು. ವಿಶ್ವದೆಲ್ಲೆಡೆ ಮಾದಕ ದ್ರವ್ಯ ಆಧುನಿಕ ಪಿಡುಗಾಗಿದ್ದು, ಯುವಸಮುದಾಯ ವನ್ನು ಹಾಳು ಮಾಡುತ್ತಿದೆ, ಸಮಾಜಕ್ಕೆ ದೊಡ್ಡ ರೋಗವಾಗಿ ಅಂಟಿಕೊಳ್ಳುತ್ತಿದ್ದು, ಯುವ ಪೀಳಿಗೆ ಸಂಕಷ್ಟಕ್ಕೆ ಸಿಲುಕದಂತೆ ಜಾಗೃತಿ ಮೂಡಿಸಬೇಕಿದೆ. ಮಾದಕ ವಸ್ತುಗಳ ವ್ಯಸನದ ಸಮಸ್ಯೆ ಅರ್ಥ ಮಾಡಿ ಕೊಂಡ ವಿಶ್ವಸಂಸ್ಥೆ 1987ರಲ್ಲಿ ಮಾದಕ ವಸ್ತು ವಿರೋಧಿ ದಿನವನ್ನಾಗಿ ಜೂನ್ 26ರಂದು ಆಚರಿಸಲು ನಿರ್ಣಯಿಸಿತು. ಭಾರತವು ಮಾದಕ ವಸ್ತುಗಳ ಸಮಸ್ಯೆಯಲ್ಲಿ ಸಿಲುಕುತ್ತಿದೆ, 5 ಕೋಟಿ ಜನ ಮಾದಕ ವ್ಯಸನಕ್ಕೆ ಒಳಗಾಗಿದ್ದಾರೆ, ಯುವಜನರು ದಾರಿ ತಪ್ಪಿದರೆ, ದೇಶ ಸಂಕಷ್ಟಕ್ಕೆ ಸಿಲುಕುತ್ತದೆ, ಭಾರತ ಅತೀ ಹೆಚ್ಚು ಯುವಜನರನ್ನು ಹೊಂದಿರುವ ದೇಶ, ಬಹಳ ಎಚ್ಚರಿಕೆಯಿಂದ ದೇಶದ ಭವಿಷ್ಯ ಕಾಪಾಡಿಕೊಳ್ಳಬೇಕಿದೆ ಎಂದರು.

ಪ್ರಜ್ವಲ್ ರೇವಣ್ಣ ಜಾಮೀನು ಅರ್ಜಿ ವಜಾ

ಅವರನ್ನು ಹೊಳೆನರಸೀಪುರಕ್ಕೆ ಕರೆದೊಯ್ದು ಅವರ ತಂದೆ ಹಾಗೂ ಮಾಜಿ ಸಚಿವ ಎಚ್ ಡಿ ರೇವಣ್ಣ ಅವರ ನಿವಾಸದಲ್ಲಿ ಸ್ಥಳ ಮಹಜರು ಮಾಡಿದ್ದಾರೆ.

ಏಪ್ರಿಲ್ 28 ರಂದು ಪ್ರಜ್ವಲ್ ರೇವಣ್ಣ ವಿರುದ್ಧ ಹೊಳೆನರಸೀಪುರದಲ್ಲಿ ಮೊದಲು ಲೈಂಗಿಕ ದೌರ್ಜನ್ಯ ಪ್ರಕರಣ ದಾಖಲಾಗಿತ್ತು. ಇದಾದ ಬಳಿಕ ಅತ್ಯಾಚಾರ ಎಸಗಿದ ಪ್ರಕರಣವೂ ದಾಖಲಾಗಿದ್ದವು. ಒಂದು ತಿಂಗಳಿಗೂ ಅಧಿಕ ಕಾಲ ವಿದೇಶದಲ್ಲಿಯೇ ಇದ್ದ ಪ್ರಜ್ವಲ್ ರೇವಣ್ಣ ಆನಂತರ ವಿಶೇಷ ತನಿಖಾ ತಂಡದ ಎದುರು ಶರಣಾಗಿದ್ದರು.

ಕೊಡಗಿನಲ್ಲಿ ಆರ್ದ್ರಾ ಮಳೆ ಅಬ್ಬರ

ಚೆರಿಯಪರಂಬು, ಎಮ್ಮೆಮಾಡು ಈ ವ್ಯಾಪ್ತಿಯ ಗ್ರಾಮಗಳಲ್ಲಿ ಭಾರೀ ಮಳೆಯಾಗಿದೆ. ಕಾವೇರಿ ನದಿ ನೀರಿನ ಮೂಲಗಳ ಗ್ರಾಮಗಳಲ್ಲಿ ಉತ್ತಮ ಮಳೆಯಾಗುತ್ತಿರುವ ಕಾರಣ ನದಿಯಲ್ಲಿ ನೀರಿನ ಮಟ್ಟ ಏರಿಕೆಯಾಗಿದೆ. ಮೂರ್ನಾಡು ಸಮೀಪದ ಬಲಮುರಿ ಗ್ರಾಮದಲ್ಲಿ ಕೆಳ ಸೇತುವೆ ನದಿ ನೀರಿನಲ್ಲಿ ಮುಳುಗಿದ್ದು, ಸೇತುವೆ ಮೇಲೆ 1 ಅಡಿ ನೀರು ಹರಿಯುತ್ತಿದೆ. ಇದರ ಪಕ್ಕದಲ್ಲೇ ಮೇಲ್ಸೆತುವೆಯಿದ್ದು, ವಾಹನ ಸಂಚಾರಕ್ಕೆ ಯಾವುದೇ ತೊಡಕುಂಟಾಗಿಲ್ಲ.

ಎಮ್ಮೆಮಾಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೂರುಳಿ ಗ್ರಾಮದಲ್ಲಿ ಕೆ.ಹೆಚ್. ಖಾಲಿದ್ ಅವರ ಮನೆಯ ಮುಂಭಾಗದ ತಡೆಗೋಡೆ ಕುಸಿದಿದ್ದು, ಅಪಾರ ನಷ್ಟ ಸಂಭವಿಸಿದೆ. ಸ್ಥಳಕ್ಕೆ ನಾಪೋಕ್ಲು ಕಂದಾಯ ಪರಿವೀಕ್ಷಕ ರವಿಕುಮಾರ್ ಭೇಟಿ ನೀಡಿ ಪರಿಶೀಲಿಸಿದರು.

ಪ್ರವಾಹ ಆತಂಕವಿಲ್ಲ: ಭಾಗಮಂಡಲದಲ್ಲಿ 30 ಕೋಟಿ ವೆಚ್ಚದಲ್ಲಿ ಮೇಲ್ಸೆತುವೆ ನಿರ್ಮಾಣವಾಗಿ ಸಾರ್ವಜನಿಕರಿಗೆ ಮುಕ್ತಗೊಳಿಸಿರುವ ಹಿನ್ನೆಲೆಯಲ್ಲಿ ಈ ಬಾರಿ ಮಳೆಗಾಲದಲ್ಲಿ ಭಾಗಮಂಡಲದಲ್ಲಿ ಪ್ರವಾಹದ ಆತಂಕ ದೂರವಾಗಿದೆ. ತ್ರಿವೇಣಿ ಸಂಗಮದಲ್ಲಿ ಪ್ರವಾಹ ಏರ್ಪಟ್ಟರೂ ಮಡಿಕೇರಿ–ಭಾಗಮಂಡಲ, ಅಯ್ಯಂಗೇರಿ, ತಲಕಾವೇರಿ ರಸ್ತೆ ಸಂಚಾರದಲ್ಲಿ ಯಾವುದೇ ಸಮಸ್ಯೆಯಾಗುವುದಿಲ್ಲ.

ಹಾರಂಗಿ ಒಳಹರಿವು ಹೆಚ್ಚಳ: ಹಾರಂಗಿ ಜಲಾಶಯದ ನದಿ ಮೂಲ ಪ್ರದೇಶಗ ಳಾದ ಮಡಿಕೇರಿ, ಗಾಳಿಬೀಡು, ಕಾಲೂರು, ಮಾದಾಪುರ, ಸೂರ್ಲಬ್ಬಿ, ಮುಕ್ಕೋಡ್ಲು ಗ್ರಾಮಗಳಲ್ಲಿ ವ್ಯಾಪಕ ಮಳೆಯಾಗುತ್ತಿ ರುವ ಹಿನ್ನೆಲೆಯಲ್ಲಿ ಹಾರಂಗಿ ಜಲಾಶ ಯಕ್ಕೆ ನೀರಿನ ಒಳಹರಿವು ಹೆಚ್ಚಳವಾಗಿದೆ.

ಹಟ್ಟಿಹೊಳೆ, ಮಾದಾಪುರ ಹೊಳೆ ಗಳಲ್ಲಿ ನೀರಿನ ಮಟ್ಟ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗಿ ಹಾರಂಗಿ ಜಲಾಶಯ ಸೇರುತ್ತಿದೆ. ಕಳೆದ 3–4 ದಿನಗಳ ಹಿಂದೆ ಒಳಹರಿವು 300 ರಿಂದ 400 ಕ್ಯೂಸೆಕ್ ದಾಖಲಾಗಿದ್ದರೆ, ಇದೀಗ 810 ಕ್ಯೂಸೆಕ್‌ಗೆ ಏರಿಕೆಯಾಗಿದೆ.

ನೀರಿನ ಮಟ್ಟ: ಹಾರಂಗಿ ಜಲಾಶಯದ ಗರಿಷ್ಠ ಮಟ್ಟ 2859 ಅಡಿಗಳಷ್ಟಿದ್ದು, ಬುಧವಾರ 2830.62 ಅಡಿಗಳಷ್ಟು ನೀರಿನ ಸಂಗ್ರಹವಿದೆ. ನೀರಿನ ಒಳಹರಿವು 810 ಕ್ಯೂಸೆಕ್ ಇದ್ದು, ಜಲಾಶಯದಿಂದ ನದಿಗೆ 200 ಕ್ಯೂಸೆಕ್ ಬಿಡಲಾಗುತ್ತಿದೆ.

ಮಳೆ ವಿವರ: ಕಳೆದ 24 ಗಂಟೆ ಅವಧಿ ಯಲ್ಲಿ ಜಿಲ್ಲೆಯಲ್ಲಿ ಸರಾಸರಿ 62.63 ಮಿ.ಮೀ. ಮಳೆಯಾಗಿದೆ. ಭಾಗಮಂಡಲದಲ್ಲಿ 145.60 ಮಿ.ಮೀ., ನಾಪೋಕ್ಲುವಿನಲ್ಲಿ 85.2 ಮಿ.ಮೀ., ಸೋಮವಾರ ಪೇಟೆ ತಾಲೂಕಿನ ಶಾಂತಳ್ಳಿ ವ್ಯಾಪ್ತಿಯಲ್ಲಿ 85 ಮಿ.ಮೀ., ಪೊನ್ನಂ ಪೇಟೆಯಲ್ಲಿ 83.2, ಅಮ್ಮತ್ತಿ 81, ಬಾಳೆಲೆ 75.06 ಹಾಗೂ ಸಂಪಾಜೆ ವ್ಯಾಪ್ತಿಯಲ್ಲಿ 73.5 ಮಿ.ಮೀ. ಮಳೆಯಾಗಿದೆ.

ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಪಟ್ಟಣ ಪಂಚಾಯಿತಿ ಕಾರ್ಯಾಲಯ, ಸರಗೂರು

ಸರಗೂರು, ಮೈಸೂರು ಜಿಲ್ಲೆ
ಕಛೇರಿ : 08228-265532, ಇಮೇಲ್: ka.sargur.tp@gmail.com
ವೆಬ್‌ಸೈಟ್: www.sargurtown.gov.in

ಸಂಖ್ಯೆ:ಸ.ಪ.ಪಂ/ಬ.ನಿ.ಕಾ/ಕ್ರಿಯೋ/ಪಿ.ಆರ್–1/2024–25 ದಿನಾಂಕ: 25.06.2024

ಕೊಟೇಷನ್ ಪ್ರಕಟಣೆ

ಈ ಮೂಲಕ ತಿಳಿಯಪಡಿಸುವುದೇನೆಂದರೆ ಸರಗೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ 2024–25ನೇ ಸಾಲಿನ **ಲಘುವಾಹನ ಹಾಗೂ ಕಂಪ್ಯೂಟರ್ ತರಬೇತಿಗೆ ಅನುದಾನವನ್ನು** ಮೀಸಲಿರಿಸಲಾಗಿದ್ದು ತರಬೇತಿ ನೀಡಲು ಸರಗೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಅಧಿಕೃತ ಸಂಸ್ಥೆಗಳಿಂದ ದರಪಟ್ಟಿ ಆಹ್ವಾನಿಸಲಾಗಿದ್ದು ಆಸಕ್ತ ತರಬೇತಿ ಸಂಸ್ಥೆಯವರು **ದಿನಾಂಕ:–10–07–2024ರಂದು ಸಂಜೆ 4.00 ಘಂಟೆಯೊಳಗೆ** ಈ ಕಛೇರಿಗೆ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ ಮುಚ್ಚಿದ ಲಕೋಟೆಯನ್ನು ಸಲ್ಲಿಸಲು ಸೂಚಿಸಿದೆ.

ಕ್ರ. ಸಂ.	ತರಬೇತಿಯ ಹೆಸರು	ತರಬೇತಿ ವೆಚ್ಚ (ಒಬ್ಬರಿಗೆ ತಗುಲುವ ವೆಚ್ಚ)	ತರಬೇತಿ ಅವಧಿ
01	ಲಘುವಾಹನ ತರಬೇತಿ	–	–
02	ಕಂಪ್ಯೂಟರ್ ತರಬೇತಿ	–	–

ಷರತ್ತುಗಳು:–

1. ಈ ಹಿಂದೆ ಯಾವುದಾದರು ಸರ್ಕಾರಿ ಸಂಸ್ಥೆವತಿಯಿಂದ ತರಬೇತಿ ನೀಡಿರುವ ಬಗ್ಗೆ ಕಛೇರಿ ಆದೇಶ ಪ್ರತಿ ಲಗತ್ತಿಸುವುದು.
2. ಜಿಲ್ಲಾ ಪ್ರಾದೇಶಿಕ ಕಛೇರಿಯಿಂದ ಅನುಮತಿ ಪಡೆದ ಅರ್ಹತಾ ಪ್ರಮಾಣ ಲಗತ್ತಿಸುವುದು.

ಸಹಿ/–
ಆಡಳಿತಾಧಿಕಾರಿಗಳು
ಪಟ್ಟಣ ಪಂಚಾಯಿತಿ, ಸರಗೂರು

ಸಹಿ/–
ಮುಖ್ಯಾಧಿಕಾರಿಗಳು
ಪಟ್ಟಣ ಪಂಚಾಯಿತಿ, ಸರಗೂರು

DIPR/MYS/KAVITA/161/24-25

ನಗರಸಭಾ ಕಾರ್ಯಾಲಯ, ಹೂಟಗಳ್ಳಿ

ನಂ:ನಸಹೂ:ಶೇ.24.10%/7.25%/5%/ಸಾ.ಪ್ರ/ಸಿ.ಆರ್–01/2024–25 ದಿನಾಂಕ: 24.06.2024

ಪ್ರಕಟಣೆ

ಹೂಟಗಳ್ಳಿ ನಗರಸಭಾ ವ್ಯಾಪ್ತಿಯಲ್ಲಿ ವಾಸವಾಗಿರುವ ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ ಹೂಟಗಳ್ಳಿ ನಗರಸಭೆಯ ಎಸ್.ಎಫ್.ಸಿ. ಮುಕ್ತನಿಧಿ ಮತ್ತು ನಗರಸಭಾ ಸಾಮಾನ್ಯ ನಿಧಿಯಡಿಯಲ್ಲಿ 2024–25 ನೇ ಸಾಲಿನ ಶೇ.24.10ರ ಪರಿಶಿಷ್ಟ ಜಾತಿ/ಪಂಗಡದವರ, ಶೇ.7.25ರ ಇತರೆ ಹಿಂದುಳಿದ ವರ್ಗದ ಬಡಜನರ ಹಾಗೂ ಶೇ.5%ರ ವಿಶೇಷ ಚೇತನರ ಕಲ್ಯಾಣ ನಿಧಿಯ ಕಾರ್ಯಕ್ರಮಗಳಡಿಯಲ್ಲಿ ಕೆಳಕಂಡ ವ್ಯಕ್ತಿ ಸಂಭಂಧಿತ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಸದರಿ ವೈಯಕ್ತಿಕ ಸೌಲಭ್ಯಗಳನ್ನು ಪಡೆದುಕೊಳ್ಳಲು ಹೂಟಗಳ್ಳಿ ನಗರಸಭಾ ವ್ಯಾಪ್ತಿಯ ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸದರಿ ಸೌಲಭ್ಯ ಪಡೆಯಲು ಇಚ್ಚಿಸುವ ಫಲಾನುಭವಿಗಳು ಸಂಬಂಧಪಟ್ಟ ಪೂರ್ಣ ದಾಖಲಾತಿಗಳೊಂದಿಗೆ ದಿ: 02.08.2024ರ ಸಾಯಂಕಾಲ 5.00 ಗಂಟೆಯೊಳಗಾಗಿ ನಗರಸಭಾ ಕಛೇರಿಗೆ ನಿಗಧಿತ ನಮೂನೆಯಲ್ಲಿ ಮಾಹಿತಿಗಳನ್ನು ಭರ್ತಿಮಾಡಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ವಿಷಯ ನಿರ್ವಾಹಕರನ್ನು ಭೇಟಿ ಮಾಡಲು ತಿಳಿಸಿದೆ.

ಕ್ರಸಂ	ಸೌಲಭ್ಯಗಳ ವಿವರ.
	ಶೇ.24.10ರ ಪರಿಶಿಷ್ಟ ಜಾತಿ ಮತ್ತು ಪಂಗಡದವರ ವೈಯಕ್ತಿಕ ಕಾರ್ಯಕ್ರಮಗಳ ವಿವರ. (40%)
01.	ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಪಕ್ಕಾ ಮನೆ ನಿರ್ಮಾಣಕ್ಕಾಗಿ ಹಾಗೂ ಮೇಲ್ಚಾವಣಿ ದುರಸ್ಥಿ ಸಾಮಾಗ್ರಿಗಳನ್ನು ಖರೀದಿಸಲು ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ಹಾನಿಗೊಳಗಾದ ಮನೆಗಳಿಗೆ ಸಹಾಯಧನ ನೀಡುವುದು.
02.	ವಿವಿಧ ಹಂತಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಪ್ರೋತ್ಸಾಹ ಧನ ಹಾಗೂ ಬಿಇ/ಎಂಬಿಬಿಎಸ್ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಹೆಚ್ಚು ಅಂಕ ಪಡೆದವರಿಗೆ ಲ್ಯಾಪ್‌ಟಾಪ್‌ಗೆ ಸಹಾಯಧನ ನೀಡುವುದು.
	ಶೇ.7.25%ರ ಇತರೆ ಹಿಂದುಳಿದ ಬಡವರ್ಗದ ಜನರ ಕಲ್ಯಾಣ ನಿಧಿಯ ವೈಯಕ್ತಿಕ ಕಾರ್ಯಕ್ರಮಗಳ ವಿವರ. (40%)
01.	ಇತರೆ ಹಿಂದುಳಿದ ವರ್ಗದವರ ಬಡ ಜನರಿಗೆ ಪಕ್ಕಾ ಮನೆ ನಿರ್ಮಾಣಕ್ಕಾಗಿ ಹಾಗೂ ಒಂದು ಬಾರಿ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ಹಾನಿಗೊಳಗಾದ ಮನೆಗಳಿಗೆ ರಿಪೇರಿಗಾಗಿ ಗರಿಷ್ಠ ಸಹಾಯಧನ ನೀಡುವುದು.
02.	ವಿವಿಧ ಹಂತಗಳಲ್ಲಿ ವ್ಯಾಸಂಗ ಮಾಡುತ್ತಿರುವ ಇತರೆ ಹಿಂದುಳಿದ ವರ್ಗದ ಬಡ ಜನರ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಪ್ರೋತ್ಸಾಹ ಧನ ಹಾಗೂ ಬಿಇ/ಎಂಬಿಬಿಎಸ್ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಹೆಚ್ಚು ಅಂಕ ಪಡೆದವರಿಗೆ ಲ್ಯಾಪ್‌ಟಾಪ್‌ಗೆ ಸಹಾಯಧನ ನೀಡುವುದು.
	ಶೇ.5% ರ ವಿಕಲಚೇತನರ ಕಲ್ಯಾಣ ನಿಧಿಯ ವೈಯಕ್ತಿಕ ಕಾರ್ಯಕ್ರಮಗಳ ವಿವರ.
01.	ನಗರಸಭಾ ವ್ಯಾಪ್ತಿಯಲ್ಲಿನ ವಿಕಲಚೇತನರಿಗೆ ಕೃತಕ ಅಂಗ ಜೋಡಣೆಗೆ, ಶಸ್ತ್ರ ಚಿಕಿತ್ಸೆಗೆ, ಹಾಗೂ ಇನ್ನಿತರ ಸಾಧನ ಸಲಕರಣೆಗಳಿಗೆ ಸಹಾಯಧನ ನೀಡುವುದು.

ಸೂಚನೆ/ಷರತ್ತುಗಳು: 1) ಸೌಲಭ್ಯ ಪಡೆಯಲು ನಗರಸಭಾ ವ್ಯಾಪ್ತಿಯ ಖಾಯಂ ನಿವಾಸಿಗಳಾಗಿದ್ದು ಕಡ್ಡಾಯವಾಗಿ ಪಡಿತರ ಚೀಟಿ, ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್ ಆದಾಯ/ಜಾತಿ ಪ್ರಮಾಣ ಪತ್ರವನ್ನು ಅರ್ಜಿ ಜೊತೆ ಲಗತ್ತಿಸಬೇಕು. **2)** ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಧನ ಕೋರಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿ/ವಿದ್ಯಾರ್ಥಿನಿಯರುಗಳು ಈ ಕಛೇರಿಯಿಂದ ನಿಗಧಿ ಪಡಿಸಿದ ಅರ್ಜಿ ನಮೂನೆಯಲ್ಲಿ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿ ಕಾಲೇಜಿನ ಪ್ರಾಂಶುಪಾಲರು/ಮುಖ್ಯಸ್ಥರಿಂದ ದೃಢೀಕರಿಸಿ ಲಗತ್ತಿಸಬೇಕು. ಮತ್ತು ಅಂಕ ಪಟ್ಟಿಗಳ ದೃಢೀಕೃತ ನಕಲುಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕು. **3)** ವಿಕಲಚೇತನರು ಸೌಲಭ್ಯ ಪಡೆಯಲು ನಗರಸಭಾ ವ್ಯಾಪ್ತಿಯ ಖಾಯಂ ನಿವಾಸಿಗಳಾಗಿದ್ದು ಕಡ್ಡಾಯವಾಗಿ ಪಡಿತರ ಚೀಟಿ, ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡು ಹಾಗೂ ಆದಾಯ/ಜಾತಿ ಪ್ರಮಾಣ ಪತ್ರ ಹಾಗೂ ವಿಕಲಚೇತನರಾಗಿರುವುದಕ್ಕೆ ಇಲಾಖೆಯಿಂದ ನೀಡಿರುವ ಪ್ರಮಾಣ ಪತ್ರವನ್ನು ಅರ್ಜಿ ಜೊತೆ ಲಗತ್ತಿಸಬೇಕು. **4)** ಸೌಲಭ್ಯ ಪಡೆಯಲು ಅರ್ಜಿದಾರರು ಯಾವುದೇ ಮಾಹಿತಿಯನ್ನು ಮುಚ್ಚಿಟ್ಟಿಲ್ಲವೆಂದು/ಸುಳ್ಳು ಮಾಹಿತಿ/ದಾಖಲೆಗಳನ್ನು ನೀಡಿಲ್ಲವೆಂದು ನೋಟರೀಕೃತ ಪ್ರಮಾಣ ಪತ್ರವನ್ನು ಅರ್ಜಿ ಜೊತೆ ಲಗತ್ತಿಸಬೇಕು.

ಸಹಿ/– ಪೌರಾಯುಕ್ತರು, ನಗರಸಭೆ, ಹೂಟಗಳ್ಳಿ

DIPR/DDMYS-148/KSMCA-109/2024-25

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600+30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 2496522/23

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆ ನೇರ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 11 ರಲ್ಲಿ

ಮೈಸೂರು ಮಿತ್ರ ಗುರುವಾರ 27 ಜೂನ್ 2024

ಬಲವಂತವಾಗಿ ರಾಜೀನಾಮೆ ಪಡೆದು ಕೆಲಸ ಸಿಗದಂತೆ ಮಾಡಿದ್ದರಿಂದ ಯುವಕ ಆತ್ಮಹತ್ಯೆ

ತಿ.ನರಸೀಪುರ, ಜೂ.26– ಗಾರ್ಮೆಂಟ್ ನೌಕರನೊಬ್ಬನಿಂದ ಬಲವಂತವಾಗಿ ರಾಜೀನಾಮೆ ಪಡೆದು ಕೆಲಸದಿಂದ ತೆಗೆದು ಹಾಕಿದ್ದಲ್ಲದೇ ಮತ್ತೆಲ್ಲೂ ಕೆಲಸ



ಸಿಗದಂತೆ ಮಾಡಿದ ಗಾರ್ಮೆಂಟ್ಸ್ ಅಧಿಕಾರಿಗಳ ನಡೆಯಿಂದ ಬೇಸತ್ತು ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಂಭವಿಸಿದೆ.

ತಿ.ನರಸೀಪುರ ಸಮೀಪದ ನಿಲಸೋಗೆ ಬಳಿಯಿರುವ ಗಾರ್ಮೆಂಟ್ಸ್‌ವೊಂದರ ಮಾಜಿ ನೌಕರ ಚಾಮರಾಜನಗರ ಜಿಲ್ಲೆಯ ಗುಂಡ್ಲು ಪೇಟೆ ತಾಲೂಕಿನ ಬೇರಂಬಾಡಿ ಗ್ರಾಮದ ಬಿ.ಎಂ.ಕಿರಣ್ ಎಂಬಾತನೇ ಮೇಲಧಿಕಾರಿಗಳ ನಡೆಯಿಂದ ಬೇಸತ್ತು ಆತ್ಮಹತ್ಯೆಗೆ ಶರಣಾದ ವ್ಯಕ್ತಿ. ಆತ್ಮಹತ್ಯೆಗೂ ಮುನ್ನ ಕಿರಣ್ ನನಗೆ ಎಲ್ಲೂ ಕೆಲಸ ಸಿಗದಂತೆ ನನ್ನ ಬಗ್ಗೆ ಫೀಡ್ ಬ್ಯಾಕ್ ನೀಡಿರುವ ಗಾರ್ಮೆಂಟ್ಸ್‌ನ ಹೆಚ್‌ಆರ್ ಮ್ಯಾನೇಜರ್ ಹಾಗೂ ಅಧಿಕಾರಿಯೇ ನನ್ನ ಆತ್ಮಹತ್ಯೆಗೆ ಕಾರಣ ಎಂದು ಡೆತ್‌ನೋಟ್ ಬರೆದಿಟ್ಟಿದ್ದಾನೆ.

ಈ ಸಂಬಂಧ ಮೃತನ ಸಹೋದರ ಬಿ.ಎಂ.ಅರುಣ್‌ಕುಮಾರ್ ಪಟ್ಟಣ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಪಿಎಸ್‌ಐ ಪಚ್ಚೇಗೌಡ ಕೇಸು ದಾಖಲಿಸಿ ತನಿಖೆ ಕೈಗೊಂಡಿದ್ದಾರೆ.

ಅಪರಿಚಿತ ವಾಹನ ಡಿಕ್ಕಿ: ಬೈಕ್ ಸವಾರ ಸಾವು

ತಿ.ನರಸೀಪುರ, ಜೂ.26– ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ಬೈಕ್



ಸವಾರನೊಬ್ಬ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಸೋಸಲೆ ಗ್ರಾಮದ ಬಳಿ ನಡೆದಿದೆ.

ಪಟ್ಟಣದ ವಿನಾಯಕ ಕಾಲೋನಿಯ ಶಾಂತರಾಜು ಎಂಬವರ ಪುತ್ರ ರವಿ ಅಲಿಯಾಸ್ ರಾಜಪ್ಪ (24) ಮೃತ ದುರ್ದೈವಿ. ಈತ ತಮ್ಮ ಹೀರೋ ಹೋಂಡಾ ಬೈಕ್‌ನಲ್ಲಿ ಟ್ರ್ಯಾಕ್ಟರ್‌ನ ಬ್ಯಾಟರಿ ದುರಸ್ತಿ ಮಾಡಿಸಿಕೊಂಡು ವಾಪಸ್ ನರಸೀಪುರಕ್ಕೆ ಸೋಸಲೆ ಮಾರ್ಗ ಬರುತ್ತಿರುವಾಗ ಅಪರಿಚಿತ ವಾಹನ ಡಿಕ್ಕಿ ಹೊಡೆದಿದೆ. ರವಿ ತಲೆಗೆ ತೀವ್ರ ಪೆಟ್ಟಾಗಿ ಮೃತಪಟ್ಟಿದ್ದಾರೆ. ಬನ್ನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಲೋಕಸಭೆ ಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿಗೆ ಹೆಚ್ಚು ಮತ ನೀಡಿದ ಮತದಾರರಿಗೆ ಅಭಿನಂದನೆ



ತಿ.ನರಸೀಪುರ ಪಟ್ಟಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾಜಿ ಶಾಸಕ ಎಂ.ಅಶ್ವಿನ್ ಕುಮಾರ್ ಮಾತನಾಡಿದರು.

ತಿ.ನರಸೀಪುರ, ಜೂ.26– ಕ್ಷೇತ್ರದಲ್ಲಿ ಪ್ರಭಾವಿ ಸಚಿವರಿದ್ದೂ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಗೆ ಮತದಾರರು ಹೆಚ್ಚಿನ ಮತ ನೀಡಿದ್ದಾರೆ ಹಾಗೂ ದಕ್ಷಿಣ ಶಿಕ್ಷಕರ ಕ್ಷೇತ್ರದಲ್ಲಿ ಶಿಕ್ಷಕರು ಪಕ್ಷದ ಅಭ್ಯರ್ಥಿಗೆ ಜಯ ತಂದುಕೊಟ್ಟಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದ ಮಾಜಿ ಶಾಸಕ ಎಂ.ಅಶ್ವಿನ್ ಕುಮಾರ್, ಮೈತ್ರಿ ಪಕ್ಷದ ಮೇಲೆ ಮತದಾರರಿಗಿರುವ ಅಭಿಮಾನಕ್ಕೆ ಋಣಿಯಾಗಿರುವುದಾಗಿ ತಿಳಿಸಿದರು.

ಪಟ್ಟಣದ ಕಬಿನಿ ಅತಿಥಿ ಗೃಹದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಪಕ್ಷದ ಉಭಯ ನಾಯಕರು ಕರೆದಿದ್ದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈತ್ರಿ ಕೂಟದ ಅಭ್ಯರ್ಥಿ ಬಾಲರಾಜುರಿಗೆ ಹೆಚ್ಚಿನ ಮತ ನೀಡಿದ ಕ್ಷೇತ್ರದ ಮತದಾರರಿಗೆ ಹಾಗೂ ಶಿಕ್ಷಕರ ಕ್ಷೇತ್ರದಿಂದ ಜಯ ಸಾಧಿಸಲು ಕಾರಣಕರ್ತರಾದ ಶಿಕ್ಷಕ ವೃಂದಕ್ಕೆ ಅಭಿನಂದನೆ ಸಲ್ಲಿಸಿದರು.

ಕ್ಷೇತ್ರದಲ್ಲಿ ಪ್ರಭಾವಿ ಸಚಿವರಿದ್ದರೂ ಮತದಾರರು ಲೆಕ್ಕಿಸದೇ ಮೈತ್ರಿ ಅಭ್ಯರ್ಥಿಗೆ ಹೆಚ್ಚಿನ ಮತ ನೀಡಿದ್ದಾರೆ. ಜೊತೆಗೆ ಶಿಕ್ಷಕರ ಕ್ಷೇತ್ರದಿಂದ ವಿಧಾನಪರಿಷತ್‌ಗೆ ನಡೆದ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಮಾಜಿ ಪ್ರಧಾನಿ ದೇವೇಗೌಡ, ಮಾಜಿ ಮುಖ್ಯಮಂತ್ರಿಗಳಾದ ಕುಮಾರಸ್ವಾಮಿ, ಯಡಿಯೂರಪ್ಪ, ಶಾಸಕರಾದ ಬಿ.ವೈ.ವಿಜಯೇಂದ್ರ, ಜಿ.ಟಿ.ದೇವೇಗೌಡರ ಸಾರಥ್ಯದಲ್ಲಿ ಅಭೂತಪೂರ್ವ ಜಯಗಳಿಸಿದ್ದೇವೆ. ಅದಕ್ಕಾಗಿ ಶಿಕ್ಷಕರ ಕ್ಷೇತ್ರದಿಂದ ವಿವೇಕಾನಂದರ ಗೆಲುವಿಗೆ ಕಾರಣರಾದ ತಾಲೂಕಿನ ಎಲ್ಲಾ ಶಿಕ್ಷಕರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು. ಮುಂದಿನ ದಿನಗಳಲ್ಲಿ ಯಾವುದೇ ಸಂದರ್ಭದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಪಕ್ಷ ಒಗ್ಗಟ್ಟಿನ ಪ್ರದರ್ಶನ ಮುಂದುವರೆಸಲಿದೆ. ಉಭಯ ಪಕ್ಷಗಳಿಂದ ಯಾವುದೇ ಸಣ್ಣಪುಟ್ಟ ವ್ಯತ್ಯಾಸಗಳಾದರೂ ಅದನ್ನು ಸರಿಪಡಿಸಿಕೊಂಡು ಪಕ್ಷ ನೀಡುವ ಜವಾಬ್ದಾರಿಯನ್ನು ಚಾಚು ತಪ್ಪದೇ ಮಾಡುವ ಕೆಲಸ ಎರಡೂ ಪಕ್ಷಗಳ ಕಡೆಯಿಂದ ಆಗಲಿದೆ ಎಂದರು.

ನೂತನ ಸಂಸದರು ಜವಾಬ್ದಾರಿಯಿಂದ ಕೆಲಸ ನಿರ್ವಹಿಸಲಿ...!: ಲೋಕಸಭಾ ಚುನಾವಣೆಯಲ್ಲಿ ಜಯಗಳಿಸಿದ ಸುನೀಲ್ ಬೋಸ್ ಅವರನ್ನು ಅಭಿನಂದಿಸಿದ ಅಶ್ವಿನ್ ಕುಮಾರ್ ಕ್ಷೇತ್ರದ ಮತದಾರರು 1.86 ಲಕ್ಷ ಮತಗಳಿಂದ ಅವರನ್ನು ಗೆಲ್ಲಿಸಿದ್ದಾರೆ. ಹಾಗಾಗಿ ಅವರು ಜವಾಬ್ದಾರಿಯಿಂದ ಕೆಲಸ ಮಾಡಿಕೊಂಡು ಹೋಗಲಿ, ಯಾವುದೇ ದ್ವೇಷದ ರಾಜಕಾರಣ ಮಾಡದೇ ಎಲ್ಲರನ್ನು ಸಮಭಾವದಿಂದ ತೆಗೆದುಕೊಂಡು ಹೋಗಲಿದ್ದಾರೆ ಎಂಬ ಭಾವನೆಯನ್ನು ಹೊಂದಿದ್ದೇನೆ. ನಮ್ಮ ಅಭ್ಯರ್ಥಿ ಕೂಡ ಸೋಲಿನಿಂದ ಕುಗ್ಗುವುದು ಬೇಡ. ಅವರೊಂದಿಗೂ ಮತದಾರರು ಕ್ಷೇತ್ರದಲ್ಲಿದ್ದಾರೆ ಎಂಬುದನ್ನು ಸಾಬೀತುಪಡಿಸಿದ್ದಾರೆ. ಹಾಗಾಗಿ ಅವರಿಗೆ ಮುಂದೆ ಉತ್ತಮ ಅವಕಾಶ ದೊರಕಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿ ಮುಖಂಡ ಡಾ.ರೇವಣ್ಣ ಮಾತನಾಡಿ, ಮೈತ್ರಿ ಅಭ್ಯರ್ಥಿ ಬಾಲರಾಜುಗೆ 8 ವಿಧಾನಸಭಾ ಕ್ಷೇತ್ರದಲ್ಲೂ ಕಾರ್ಯಕರ್ತರು ಸಮನ್ವಯತೆಯಿಂದ ಕೆಲಸ ಮಾಡಿ ಹೆಚ್ಚು ಮತ ಕೊಡಿಸಲು ಶ್ರಮವಹಿಸಿದ್ದಾರೆ. ಶಿಕ್ಷಕರ ಕ್ಷೇತ್ರದಿಂದ ಉಭಯ ಪಕ್ಷದ ನಾಯಕರು ಒಗ್ಗಟ್ಟಾಗಿ ಕೆಲಸ ಮಾಡಿದ ಪರಿಣಾಮ ವಿವೇಕಾನಂದ ರವರು ಅಭೂತಪೂರ್ವ ಗೆಲುವು ಸಾಧಿಸಿದರು ಎಂದರು.

ಜೆಡಿಎಸ್ ಕ್ಷೇತ್ರಾಧ್ಯಕ್ಷ ಸಿ.ಬಿ.ಹುಂಡಿ ಚಿನ್ನಸ್ವಾಮಿ, ಬಿಜೆಪಿ ಕ್ಷೇತ್ರಾಧ್ಯಕ್ಷ ಶಿವಕುಮಾರ್ (ಸತ್ಯಪ್ಪ), ಜಿಪಂ ಮಾಜಿ ಸದಸ್ಯ ಜೈಪಾಲ್ ಭರಣಿ, ರಾಜ್ಯ ಕಾರ್ಯಕಾರಿಣಿ ಮಾಜಿ ಸದಸ್ಯ ಕರೋಹಟ್ಟಿ ಮಹಾದೇವಯ್ಯ, ಜೆಡಿಎಸ್‌ನ ರಾಜ್ಯ ಕಾರ್ಯದರ್ಶಿ ವೈ.ಎಸ್.ರಾಮಸ್ವಾಮಿ, ತಾಪಂ ಮಾಜಿ ಅಧ್ಯಕ್ಷ ಕುಮಾರಸ್ವಾಮಿ, ಪುರಸಭೆ ಮಾಜಿ ಸದಸ್ಯ ಎನ್. ಲೋಕೇಶ್, ಡಾ.ಮಲ್ಲಿಕಾರ್ಜುನ ಸ್ವಾಮಿ, ಮುಖಂಡರಾದ ಚೌಹಳ್ಳಿ ಸಿದ್ದರಾಜು, ಕು.ಶಿ.ಬೈರೇಗೌಶ್, ಕನ್ನಳ್ಳಿ ಮಹದೇವ್, ಎಸ್‌ಎಂಆರ್ ಪ್ರಕಾಶ್, ತಿರುಮಕೂಡಲು ಜಯರಾಮ್ ಮತ್ತಿತರಿದ್ದರು.

ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್‌ಫೋನ್ ವಿತರಣೆ



ಅಂಗನವಾಡಿ ಕಾರ್ಯಕರ್ತೆಯರಿಗೆ ಶಾಸಕ ದರ್ಶನ್ ಧ್ರುವನಾರಾಯಣ ಸ್ಮಾರ್ಟ್‌ಫೋನ್ ವಿತರಿಸಿದರು.

ನಂಜನಗೂಡು, ಜೂ.26– ಮಹಿಳಾ ಮತ್ತು ಮಕ್ಕಳ ಸೇವಾ ಕಾರ್ಯಗಳಿಗೆ ಅನುಕೂಲವಾಗುವಂತೆ ನಂಜನಗೂಡು ಮತ್ತು ಬಿಳಿಗೆರೆ ವ್ಯಾಪ್ತಿಯ 400 ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್ ಫೋನ್ ವಿತರಿಸಲಾಗಿದೆ ಎಂದು ವಿಧಾನಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ಮಂಗಳವಾರ ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್‌ಫೋನ್ ವಿತರಿಸಿ ಮಾತನಾಡಿದ ಅವರು, ಅಂಗನವಾಡಿ ಕಾರ್ಯಕರ್ತೆಯರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಗೆ ತಮ್ಮದೆ ಕೊಡುಗೆ ನೀಡುತ್ತಿದ್ದಾರೆ. ಕಾರ್ಯಕರ್ತೆಯರ ಬೇಡಿಕೆ ಯಂತೆ ಗ್ರ್ಯಾಚುಟಿ ಸೌಲಭ್ಯ ನೀಡಲು ಸರ್ಕಾರ ಕ್ರಮವಹಿಸಿದೆ. ಅಂಗನವಾಡಿ ಕೇಂದ್ರಗಳನ್ನು ಉನ್ನತೀಕರಿಸಲು ಹಾಗೂ ಕೇಂದ್ರಗಳಲ್ಲಿ ಮಕ್ಕಳಿಗೆ ಎಲ್‌ಕೆಜಿ ಮತ್ತು ಯುಕೆಜಿ ಆರಂಭಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಒಪ್ಪಿಗೆ ಸೂಚಿಸಿದ್ದಾರೆ. ಸ್ಮಾರ್ಟ್‌ಫೋನ್ ಬಳಸಿಕೊಂಡು ಇನ್ನಷ್ಟು ಸೇವಾ ಕಾರ್ಯಗಳಿಗೆ ನೆರವಾಗಬೇಕು ಎಂದರು.

ಶಾಸಕ ದರ್ಶನ್ ಧ್ರುವನಾರಾಯಣ ಮಾತನಾಡಿ, ಹೊಸ ತಂತ್ರಜ್ಞಾನಗಳಿಗೆ ಕಾರ್ಯಕರ್ತೆಯರು ತೆರೆದುಕೊಂಡು, ಸೇವಾ ಕಾರ್ಯದಲ್ಲಿ ಉನ್ನತಿ ಸಾಧಿಸಲಿ ಎಂಬ ಆಶಯದಿಂದ, ಪ್ರತಿ ಕಾರ್ಯಕರ್ತೆಯರಿಗೆ 12,500 ರೂ. ಬೆಲೆಯ ಸ್ಮಾರ್ಟ್‌ಫೋನ್‌ಗಳನ್ನು ವಿತರಣೆ ಮಾಡಲಾಗಿದೆ. ನಿಮ್ಮ ದಿನನಿತ್ಯದ ಕಚೇರಿ ಕಾರ್ಯಗಳನ್ನು ಸುಲಭಗೊಳಿಸುವಲ್ಲಿ ಫೋನ್‌ಗಳು ನೆರವಿಗೆ ಬರುತ್ತವೆ. ನಿಮ್ಮೆಲ್ಲರ ಆಶೀರ್ವಾದದಿಂದ ರಾಜ್ಯದ ಕಿರಿಯ ಶಾಸಕನಾಗಿ ಆಯ್ಕೆಯಾಗಿದ್ದೇನೆ. ಅಂಗನವಾಡಿ ಕಾರ್ಯಕರ್ತೆಯರ ನೆರವಿಗೆ ಬದ್ಧನಾಗಿದ್ದೇನೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಶಿವಕುಮಾರ್ ಕಾಸ್ನೂರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಎಚ್.ಆರ್.ಸುರೇಶ್, ತಾಪಂ ಇಓ ಜೆರಾಲ್ಡ್ ರಾಜೇಶ್, ಎಚ್.ಸಿ.ಬಸವರಾಜ್, ಹಾಡ್ಯ ರಂಗಸ್ವಾಮಿ, ಸಿ.ಎಂ.ಶಂಕರ್, ಕೆಎಂ.ಬಸವರಾಜು, ಸಿಡಿಪಿಓಗಳಾದ ಮಂಜುಳ, ಭವ್ಯಶ್ರೀ ಇದ್ದರು.

ಸಾರಿಗೆ ಬಸ್ ಡಿಕ್ಕಿ: ಬೈಕ್ ಸವಾರ ಸ್ಥಳದಲ್ಲೇ ಸಾವು

ಹುಣಸೂರು, ಜೂ.26– ಬಸ್ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲೂಕಿನ ಅರಸು ಕಲ್ಲಹಳ್ಳಿ ಸಮೀಪದ ರಾಷ್ಟ್ರೀಯ ಹೆದ್ದಾರಿ 275ರಲ್ಲಿ ಬುಧವಾರ ಸಂಭವಿಸಿದೆ.



ತಾಲೂಕಿನ ನೆಲ್ಲೂರು ಪಾಲದ ಕುರುಬರಹೊಸಳ್ಳಿ ಗ್ರಾಮದ ರವಿ ಅವರ ಮಗ ಮಂಜು (25) ಮೃತ ದುರ್ದೈವಿ. ಮಂಜು ತನ್ನ ಸ್ಪ್ಲೆಂಡರ್ ಬೈಕ್ (ಕೆಎ45 ಇಡಿ 2381)ನಲ್ಲಿ ಪತ್ನಿ ಮನೆ ಪಿರಿಯಾಪಟ್ಟಣದ ರಾಮನಾಥಪುರ ಗ್ರಾಮಕ್ಕೆ ತೆರಳಿ ಮೂರು ತಿಂಗಳ ಬಾಣಂತಿ ಮತ್ತು ಮಗುವನ್ನು ನೋಡಿಕೊಂಡು ಹಿಂತಿರುಗುವಾಗ ತಾಲೂಕಿನ ಕಲ್ಲಹಳ್ಳಿ ಗ್ರಾಮದ ಸಮೀಪ ರಾಷ್ಟ್ರೀಯ ಹೆದ್ದಾರಿ 275ರಲ್ಲಿ ಅದೇ ಸಮಯಕ್ಕೆ ಮೈಸೂರಿನಿಂದ ಮಂಗಳೂರಿಗೆ ಹೋಗುತ್ತಿದ್ದ ಸಾರಿಗೆ ಬಸ್ (ಕೆಎ19 ಎಫ್3464) ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಹುಣಸೂರು ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಎರಡು ವಾಹನಗಳನ್ನು ತಮ್ಮ ವಶಕ್ಕೆ ಪಡೆದು ಮುಂದಿನ ಕ್ರಮವನ್ನು ಕೈಗೊಂಡಿದ್ದಾರೆ.

ಬೆಂಕಿ ಹಚ್ಚಿ ಪತ್ನಿಕೊಂದ ಹಂತನಿಗೆ ಜೀವಾವಧಿ ಶಿಕ್ಷೆ

ಮೈಸೂರು, ಜೂ.26(ಎಸ್‌ಪಿಎನ್)– ಸೀಮೆಎಣ್ಣೆ ಸುರಿದು ಬೆಂಕಿಹಚ್ಚಿ ಪತ್ನಿಯ ಹತ್ಯೆ ಮಾಡಿದ್ದ ಹಂತಕನಿಗೆ ಜೀವಾವಧಿ ಶಿಕ್ಷೆ ವಿಧಿಸಿ ಮೈಸೂರಿನ 5ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಗುರುರಾಜ್ ಸೋಮಕ್ಕಳವರ್ ತೀರ್ಪು ನೀಡಿದ್ದಾರೆ.

ನಂಜನಗೂಡು ತಾಲೂಕು ಹೊಮ್ಮರಗಾಲ ಗ್ರಾಮದ ಮಾದಶೆಟ್ಟಿ ಎಂಬವರ ಪುತ್ರ ಸ್ವಾಮಿ ಶಿಕ್ಷೆಗೆ ಗುರಿಯಾದವನಾಗಿದ್ದು, ಈತನಿಗೆ ಯಳಂದೂರು ತಾಲೂಕು ಕೆಸ್ತೂರು ಗ್ರಾಮದ ಸಿದ್ದರಾಜಶೆಟ್ಟಿ ಎಂಬವರ ಪುತ್ರಿ ಸಿದ್ದರಾಜಮ್ಮ ಅವರೊಂದಿಗೆ ಮದುವೆ ಮಾಡಲಾಗಿತ್ತು. ನಾಲ್ಕೈದು ವರ್ಷ ಅನ್ಯೋನ್ಯತೆಯಿಂದ ಇದ್ದ ಈ ದಂಪತಿಗೆ ಇಬ್ಬರು ಮಕ್ಕಳಿದ್ದರು.

ನಂತರ ದಿನಗಳಲ್ಲಿ ಸ್ವಾಮಿ ದೈಹಿಕವಾಗಿ ಹಲ್ಲೆ ನಡೆಸಿ, ಮಾನಸಿಕವಾಗಿ ಹಿಂಸೆ ನೀಡಿದ್ದರಿಂದ ಪತ್ನಿ ತವರುಮನೆ ಸೇರಿದ್ದಳು. ವರ್ಷದ ನಂತರ ಆಕೆಯನ್ನು ಸಮಾಧಾನ ಪಡಿಸಿ ತನ್ನ ಮನೆಗೆ ಕರೆತಂದ ಸ್ವಾಮಿ, 2019ರ ಸೆ.11ರಂದು ಮಧ್ಯಾಹ್ನ 12 ಗಂಟೆಗೆ ಪತ್ನಿಯ ಶೀಲ ಶಂಕಿಸಿ ಗಲಾಟೆ ಮಾಡಿದ್ದಲ್ಲದೆ, ಆಕೆಯ ಮೇಲೆ ಸೀಮೆ ಎಣ್ಣೆ ಸುರಿದು ಬೆಂಕಿಹಚ್ಚಿದ್ದ.

ತೀವ್ರವಾಗಿ ಗಾಯಗೊಂಡಿದ್ದ ಸಿದ್ದರಾಜಮ್ಮಳನ್ನು ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲಿಸಿದ್ದರಾದರೂ ಚಿಕಿತ್ಸೆ ಫಲಕಾರಿಯಾಗದೆ ಸೆ.15ರಂದು ಸಂಜೆ 6 ಗಂಟೆಗೆ ಸಾವನ್ನಪ್ಪಿದ್ದರು. ಈ ಸಂಬಂಧ ಕೊಲೆ ಪ್ರಕರಣ ದಾಖಲಿಸಿದ್ದ ಕವಲಂದೆ ಠಾಣೆಯ ಅಂದಿನ ಇನ್ಸ್‌ಪೆಕ್ಟರ್ ಎಂ.ಸಿ.ರಾಜಶೇಖರ, ಆರೋಪಿ ಸ್ವಾಮಿ ವಿರುದ್ಧ ತನಿಖೆ ನಡೆಸಿ, ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿದ್ದರು. ಸದರಿ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶರು, ಸ್ವಾಮಿಗೆ ಜೀವಾವಧಿ ಶಿಕ್ಷೆ ಮತ್ತು 6 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರ ಅಭಿಯೋಜಕ ಬಿ.ಈ.ಯೋಗೇಶ್ವರ ವಾದ ಮಂಡಿಸಿದರು.

ಸೂರಜ್ ರೇವಣ್ಣ ವಿರುದ್ಧದ ಎರಡನೇ ಕೇಸ್ ಕೂಡ ಸಿಐಡಿಗೆ ಹಸ್ತಾಂತರ

ಹಾಸನ, ಜೂ.26–ವಿಧಾನ ಪರಿಷತ್ ಸದಸ್ಯ ಡಾ.ಸೂರಜ್ ರೇವಣ್ಣ ವಿರುದ್ಧದ ಅಸಹಜ ಲೈಂಗಿಕ ದೌರ್ಜನ್ಯ ಆರೋಪದ ಎರಡನೇ ಕೇಸ್ ಕೂಡ ಸಿಐಡಿಗೆ



ಹಸ್ತಾಂತರ ಮಾಡಿ ಸರ್ಕಾರ ಆದೇಶಿಸಿದೆ. ಹಾಸನ ಜಿಲ್ಲೆಯ ಹೊಳೆನರಸೀಪುರ ಗ್ರಾಮಾಂತರ ಠಾಣೆಯಲ್ಲಿ ಜೂ.22 ರಂದು ಮೊದಲ ಕೇಸ್ ದಾಖಲಾಗಿತ್ತು. ಇದಾದ ಮಾರನೇ ದಿನ ಜೂ.23ರಂದು ಪ್ರಕರಣದ ತನಿಖೆ ಸಿಐಡಿಗೆ ಹಸ್ತಾಂತರ ಮಾಡಿ ಆದೇಶಿಸಿತ್ತು.

ಇನ್ನು, ಹೊಳೆನರಸೀಪುರ ಗ್ರಾಮಾಂತರ ಠಾಣೆಯಲ್ಲಿ ನಿನ್ನೆ(ಜೂ.25) ಮತ್ತೊಂದು ಕೇಸ್ ದಾಖಲಾದ ಹಿನ್ನಲೆ ಎರಡನೇ ಪ್ರಕರಣವನ್ನು ಕೂಡ ಸಿಐಡಿಗೆ ಹಸ್ತಾಂತರ ಮಾಡಿ ಆದೇಶಿಸಲಾಗಿದೆ. ಅದರಂತೆ ಪ್ರಕರಣದ ಕಡತಗಳನ್ನು ಸಿಐಡಿಗೆ ಪೊಲೀಸರು ಹಸ್ತಾಂತರಿಸಲಿದ್ದಾರೆ. ಇನ್ನು ಮೊದಲ ಪ್ರಕರಣದಲ್ಲಿ ಅರಕಲಗೂಡು ಮೂಲದ ಯುವಕ ದೂರು ನೀಡಿದ್ದರೆ, 2ನೇ ಪ್ರಕರಣದಲ್ಲಿ ಹೊಳೆನರಸೀಪುರ ಮೂಲದ ಯುವಕ ದೂರು ನೀಡಿದ್ದ. ಇದೀಗ ಎರಡೂ ಪ್ರಕರಣಗಳ ತನಿಖೆ ಸಿಐಡಿಗೆ ಹಸ್ತಾಂತರ ಮಾಡಲಾಗಿದೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಗುಂಟೂರು ಖಾರಂ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಅರನ್‌ಮನೈ–4 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಎ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಜಡ್ಜ್‌ಮೆಂಟ್ (ಕ)	4 ಪ್ರದರ್ಶನಗಳು
ರಾಜಕಮಲ್	
ಮಹಾರಾಜ (ತ)	4 ಪ್ರದರ್ಶನಗಳು
ಸಂಗಂ	
ಕೋಟಿ (ಕ)	4 ಪ್ರದರ್ಶನಗಳು
ಲಿಡೋ	
ಕರಟಕ ದಮನಕ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಬಹದ್ದೂರ್ (ಕ)	4 ಪ್ರದರ್ಶನಗಳು
ಪ್ರಭಾ	
ಬಹದ್ದೂರ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಇನ್‌ಸೈಟ್ ಔಟ್ 2(3ಡಿ) (ಇಂ): ಬೆ.11ಕ್ಕೆ, ಪೋಕಿರಿ (ತ): ಮ.1ಕ್ಕೆ, ಹಮಾರೆ ಬಾರಹ್ (ಹಿಂ): ಸಂ.4.10ಕ್ಕೆ, ರಾ.7.05ಕ್ಕೆ, ಕ್ರಿಯೇಷನ್ಸ್ ಆಫ್ ದಿ ಗಾಡ್ಸ್ 1 (ಚೈ): ರಾ.10ಕ್ಕೆ.
ಸ್ಕ್ರೀನ್ 2	ಲವ್ ಲಿ (ಕ): ಬೆ.10.25ಕ್ಕೆ, ರಾ.7.10ಕ್ಕೆ, ಮುಂಜ್ಯಾ (ಹಿಂ): ಮ.1.35ಕ್ಕೆ, ಶಿವಮ್ಮ ಚಂದು ಚಾಂಪಿಯನ್ (ಹಿಂ): ಸಂ.4.10ಕ್ಕೆ, ನಡನ್ನ ಸಂಭವಂ (ಮ): ರಾ.10.15ಕ್ಕೆ.
ಸ್ಕ್ರೀನ್ 3	ಮಹಾರಾಜ (ತ): ಬೆ.10.30ಕ್ಕೆ, ಸಂ.4.15ಕ್ಕೆ, ಸಂಭವಾಮಿ ಯುಗೇ ಯುಗೆ (ಕ): ಮ.1.25ಕ್ಕೆ, ಉಲ್ಲೊಳುಕ್ಕು (ಮ): ರಾ.7.15ಕ್ಕೆ, ಜಹಂಗೀರ್ ನ್ಯಾಷನಲ್ ಯೂನಿವರ್ಸಿಟಿ (ಹಿಂ): ರಾ.9.50ಕ್ಕೆ.
ಸ್ಕ್ರೀನ್ 4	ಚಿಲ್ಲಿ ಚಿಕನ್ (ಕ): ಬೆ.10.50ಕ್ಕೆ, ಕೋಟಿ (ಕ): ಮ.1.25ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಇನ್‌ಸೈಟ್ ಔಟ್ (3ಡಿ)(ಇಂ): ಸಂ.4.40ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಇನ್‌ಸೈಟ್ ಔಟ್ (3ಡಿ)(ಹಿಂ): ಬೆ.11ಕ್ಕೆ, ಇನ್‌ಸೈಟ್ ಔಟ್ (3ಡಿ)(ಇಂ): ಮ.1.20ಕ್ಕೆ, ಸಂ.4.20ಕ್ಕೆ, ಸಂ.6.40ಕ್ಕೆ, ಮುಂಜ್ಯಾ (ಹಿಂ): ರಾ.9ಕ್ಕೆ.
ಸ್ಕ್ರೀನ್ 2	ಮುಂಜ್ಯಾ (ಹಿಂ): ಬೆ.10ಕ್ಕೆ, ರಾ.7.35ಕ್ಕೆ, ರಾಕ್‌ಸ್ಟಾರ್ (ಹಿಂ): ಮ.12.45ಕ್ಕೆ, ಕೋಟಿ (ಕ): ಸಂ.4.05ಕ್ಕೆ, ರಾ.10.20ಕ್ಕೆ,
ಸ್ಕ್ರೀನ್ 3	ಚಂದು ಚಾಂಪಿಯನ್ (ಹಿಂ): ಬೆ.9.50ಕ್ಕೆ, ಮ.1ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.05ಕ್ಕೆ, ಮಹಾರಾಜ (ತ): ಮ.1.35ಕ್ಕೆ, ರಾ.7.05ಕ್ಕೆ, ಶಿವಮ್ಮ ಹರೆಹಂಚಿನಾಳ (ಕ): ಸಂ.4.40ಕ್ಕೆ, ಜಿಆರ್‌ಆರ್‌ಆರ್ (ಮ): ರಾ.10.10ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಕೋಟಿ (ಕ): ಮ.1ಕ್ಕೆ, ಸಂಭವಾಮಿ ಯುಗೇ ಯುಗೆ (ಕ): ಸಂ.4.05ಕ್ಕೆ, ಚಿಲ್ಲಿ ಚಿಕನ್ (ಕ): ರಾ.7.05ಕ್ಕೆ, ಮಹಾರಾಜ (ತ): ರಾ.9.30ಕ್ಕೆ.
ಸ್ಕ್ರೀನ್ 2	ದೇಸಾಯಿ (ಕ): ಸಂ.4.15ಕ್ಕೆ, ಕೋಟಿ (ಕ): ರಾ.7.45ಕ್ಕೆ
ಸ್ಕ್ರೀನ್ 3	ಪೋಕಿರಿ (ತ): ಮ.1.15ಕ್ಕೆ, ಲವ್ ಲಿ (ಕ): ಸಂ.4.20ಕ್ಕೆ, ರಾ.7.10ಕ್ಕೆ.
ಸ್ಕ್ರೀನ್ 4	ಲವ್ ಲಿ (ಕ): ಮ.1.30ಕ್ಕೆ, ಮಹಾರಾಜ (ತ): ಸಂ.6.45ಕ್ಕೆ, ಕೋಟಿ (ಕ): ರಾ.9.25ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಹೆಚ್ಚಿನ ವರ್ಗೀಕೃತ ಜಾಹೀರಾತು ಪುಟ 10ರಲ್ಲಿ

8ನೇ ವರ್ಷದ ಪುಣ್ಯಸ್ಮರಣೆ



ಕೀರ್ತಿ ಕುಮಾರ್

ಜನನ : 18.2.1972 ಮರಣ : 27.6.2016

ನೀವು ನಮ್ಮನ್ನಗಲಿ ಎಂಟು ವರ್ಷ ಕಳೆದರು, ನಿಮ್ಮ ನೆನಪು ನಮ್ಮ ಮನದಲ್ಲಿ ಚಿರಸ್ಥಾಯಿಯಾಗಿ ಉಳಿದಿದೆ. ನಿಮ್ಮ ಆದರ್ಶ, ಧ್ಯೇಯದಂತೆಯೇ ಜೀವನ ಸಾಗಿದೆ.

ಸದಾ ನಿಮ್ಮ ಆತ್ಮಕ್ಕೆ ಚಿರಶಾಂತಿ ಕೋರುತ್ತೇವೆ.

ತಾಯಿ ಪುಟ್ಟಮ್ಮ, ಪತ್ನಿ ಹೇಮಾವತಿ, ಸಹೋದರರು,
ಭಾವ, ಸಹೋದರಿ ಹಾಗೂ ಕುಟುಂಬವರ್ಗ